23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 287 | ನವದೆಹಲಿ | ಬೆಲೆ ₹10 | ಏಪ್ರಿಲ್ 23 2026, ಗುರುವಾರ

## ಒಳಪುಟಗಳಲ್ಲಿ

ತಮಿಳುನಾಡು ವಿಧಾನಸಭೆ ಚುನಾವಣೆ: ಇಂದು ಮತದಾನ - ಪು.4

ಭಾರತ್-ಅರಬ್ ದೇಶಗಳ ನಡುವೆ ವಾಣಿಜ್ಯ, ಕೈಗಾರಿಕೆ, ತಂತ್ರಜ್ಞಾನ ಒಪ್ಪಂದ - ಪು.5

ಸಮಗ್ರ ತನಿಖೆ ನಡೆಸಿ ವರದಿ ನೀಡಿ: ಅಧಿಕಾರಿಗಳಿಗೆ ಬೋಸರಾಜು ಖಡಕ್ ಸೂಚನೆ - ಪು.6

# 72 ಗಂಟೆಯೊಳಗೆ ಇರಾನ್ ಜತೆ ಶಾಂತಿ ಮಾತುಕತೆ: ಟ್ರಂಪ್

## ರಾಜತಾಂತ್ರಿಕ ಮಾರ್ಗಗಳನ್ನು ಮತ್ತೆ ಹಳಿಗೆ ತರಲು ಏಕೀಕೃತ ಪ್ರಸ್ತಾವನೆಯೊಂದಿಗೆ ಕಾಲಮಿತಿ ನೀಡಿದ ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್/ಟೆಹರಾನ್, ಏ.22: ರಾಜತಾಂತ್ರಿಕ ಮಾತುಕತೆಗಳನ್ನು ಮತ್ತೆ ಹಳಿಗೆ ತರಲು ಏಕೀಕೃತ ಪ್ರಸ್ತಾವನೆಯೊಂದಿಗೆ ಬರಲು ಇರಾನ್‌ಗೆ ಸೀಮಿತ ಕಾಲಮಿತಿಯನ್ನು ನೀಡಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಮುಂದಿನ 36 ರಿಂದ 72 ಗಂಟೆಗಳ ಒಳಗೆ ಇರಾನ್‌ನೊಂದಿಗೆ ಶಾಂತಿ ಮಾತುಕತೆ "ಸಾಧ್ಯ" ಎಂದು ಬುಧವಾರ ಹೇಳಿದ್ದಾರೆ.**



ಟೆಹರಾನ್‌ಒಂದು "ಏಕೀಕೃತ ಪ್ರಸ್ತಾವನೆಯನ್ನು" ಸಿದ್ಧಪಡಿಸಲು ಸಮಯ ನೀಡುವ ಸಲುವಾಗಿ ಅಮೆರಿಕ ಇರಾನ್‌ನೊಂದಿಗಿನ ಕದನ ವಿರಾಮವನ್ನು ವಿಸ್ತರಿಸಿದೆ ಎಂದು ಟ್ರಂಪ್ ತಿಳಿಸಿದರು. ಸಂಧಾನದ ಸಾಧ್ಯತೆಯ ಬಗ್ಗೆ ನ್ಯೂಯಾರ್ಕ್ ಪೋಸ್ಟ್ ಕೇಳಿದ ಪ್ರಶ್ನೆಗೆ ಟ್ರಂಪ್, "ಇದು ಸಾಧ್ಯ!" ಎಂದು ಪ್ರತಿಕ್ರಿಯಿಸಿದ್ದಾರೆ.

ಅಮೆರಿಕವು ಈ ಕದನ ವಿರಾಮವನ್ನು ಅನಿರ್ದಿಷ್ಟವಾಗಿ ವಿಸ್ತರಿಸಲು ಬಯಸುವುದಿಲ್ಲ ಮತ್ತು ಇರಾನ್ ಮಾತುಕತೆಗಳನ್ನು ಮತ್ತಷ್ಟು ಎಳೆಯಲು ಸಮಯ ನೀಡಲು ಇಚ್ಛಿಸುವುದಿಲ್ಲ. ಇದು ಸಂಘರ್ಷವನ್ನು ರಾಜತಾಂತ್ರಿಕವಾಗಿ ಬಗೆಹರಿಸಲು ಅಮೆರಿಕ ಆಡಳಿತಕ್ಕಿರುವ ಆಸಕ್ತಿಯನ್ನು ಪ್ರತಿಬಿಂಬಿಸುತ್ತದೆ. ಮಾತುಕತೆ ಮುಂದುವರಿಯುತ್ತಿರುವಾಗ ಹಾರ್ಮುಜ್ ಜಲಸಂಧಿಯ ಮೇಲೆ ಅಮೆರಿಕದ ದಿಗ್ಬಂಧನವು ಇರಾನ್ ಮೇಲೆ ಒತ್ತಡವನ್ನು ಕಾಯ್ದುಕೊಳ್ಳುತ್ತದೆ ಎಂದು ನಂಬಿರುವುದಾಗಿ ಟ್ರಂಪ್ ತಿಳಿಸಿದ್ದಾರೆ.

ಹಾರ್ಮುಜ್ ಜಲಸಂಧಿಯಲ್ಲಿ ಉದ್ವಿಗ್ನತೆ ನಡುವೆ ಯುನೈಟೆಡ್ ಕಿಂಗ್‌ಡಮ್ ಮ್ಯಾರಿಟೈಮ್ ಟ್ರೇಡ್ ಆಪರೇಷನ್ಸ್ ಪ್ರಕಾರ, ಇಂದು ಹಾರ್ಮುಜ್ ಜಲಸಂಧಿಯಲ್ಲಿ ಕನಿಷ್ಠ ಎರಡು ಕಂಟೈನರ್ ಹಡಗುಗಳ ಮೇಲೆ ಗುಂಡಿನ ದಾಳಿ ನಡೆದಿದೆ. ಮೊದಲ ಹಡಗನ್ನು ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್‌ನ ಗನ್‌ಬೋಟ್ ಸಮೀಪಿಸಿತು ಮತ್ತು ಯಾವುದೇ ರೇಡಿಯೋ ಎಚ್ಚರಿಕೆ ನೀಡದೆ "ಹಡಗಿನ ಮೇಲೆ ಗುಂಡು ಹಾರಿಸಿತು" ಎಂದು ಕಡಲ ಪ್ರಾಧಿಕಾರ ತಿಳಿಸಿದೆ.

ಸೂಕ್ತ ಅನುಮತಿಯಿಲ್ಲದೆ ಕಾರ್ಯಾಚರಣೆ ನಡೆಸಿದ ಮತ್ತು ಸಂಚರಣೆ ವ್ಯವಸ್ಥೆಗಳನ್ನು ದುರುಪಯೋಗ ಪಡಿಸಿಕೊಂಡ ಆರೋಪದ ಮೇಲೆ ಎರಡು ಹಡಗುಗಳನ್ನು ವಶಪಡಿಸಿಕೊಳ್ಳಲಾಗಿದೆ ಮತ್ತು ಇರಾನ್ ಜಲಪ್ರದೇಶಕ್ಕೆ ವರ್ಗಾಯಿಸಲಾಗಿದೆ.

ಗ್ರೀಕ್ ಮಾಲೀಕತ್ವದ ಮೂರನೇ ಹಡಗನ್ನು ಸಹ ಗುರಿಯಾಗಿಸಲಾಗಿದ್ದು, ಅದು ಈಗ ಇರಾನ್ ಕರಾವಳಿಯ ಬಳಿ ಸ್ಥಗಿತಗೊಂಡಿದೆ ಎಂದು ಇರಾನ್ ಮಾಧ್ಯಮಗಳು ವರದಿ ಮಾಡಿವೆ.

ರಾಜತಾಂತ್ರಿಕ ಪ್ರಯತ್ನಗಳು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ನೇತೃತ್ವದ ಅಮೆರಿಕನ್ ಸಂಧಾನ ತಂಡವು ಎರಡನೇ ಸುತ್ತಿನ ಶಾಂತಿ ಮಾತುಕತೆಗಾಗಿ ಪಾಕಿಸ್ತಾನಕ್ಕೆ ಹೋಗುವ ಯೋಜನೆಯನ್ನು ವಿಳಂಬಗೊಳಿಸಿದ ನಂತರ ಟ್ರಂಪ್ ಕದನ ವಿರಾಮವನ್ನು ವಿಸ್ತರಿಸಿದ್ದಾರೆ.

"ನಮ್ಮ ಮಿಲಿಟರಿ ದಿಗ್ಬಂಧನವನ್ನು ಮುಂದುವರಿಸಲು ನಾನು ನಿರ್ದೇಶನ ನೀಡಿದ್ದೇನೆ. ಅವರ ಪ್ರಸ್ತಾವನೆ ಸಲ್ಲಿಕೆಯಾಗುವವರೆಗೆ ಮತ್ತು ಚರ್ಚೆಗಳು ಒಂದು ನಿರ್ಧಾರಕ್ಕೆ ಬರುವವರೆಗೆ ಕದನ ವಿರಾಮವನ್ನು ವಿಸ್ತರಿಸಲಾಗುವುದು," ಎಂದು ಟ್ರಂಪ್ ಹೇಳಿದ್ದಾರೆ.

ಆದರೆ, ಇರಾನ್ ಅಧಿಕಾರಿಗಳಲ್ಲಿ ಈ ಬಗ್ಗೆ ಭಿನ್ನಾಭಿಪ್ರಾಯವಿದೆ. ಇರಾನ್ ಸಂಸತ್ತಿನ ಸ್ಪೀಕರ್ ಅವರ ಸಲಹೆಗಾರ ಮೆಹದಿ ಮೊಹಮ್ಮದಿ ಅವರು ಈ ಕದನ ವಿರಾಮ ವಿಸ್ತರಣೆಯನ್ನು ಒಂದು ತಂತ್ರ ಎಂದು ತಳ್ಳಿಹಾಕಿದ್ದಾರೆ. ಆದರೆ, ಇರಾನ್‌ನ ಯುಎನ್ ಪ್ರತಿನಿಧಿ ಮಾತ್ರ ಬಂದರುಗಳ ಮೇಲಿನ ದಿಗ್ಬಂಧನವನ್ನು ತೆಗೆದುಹಾಕಿದರೆ ಟೆಹ್ರಾನ್ ಮಾತುಕತೆಗೆ ಸಿದ್ಧವಾಗಿದೆ ಎಂದು ತಿಳಿಸಿದ್ದಾರೆ.

# ಭಯೋತ್ಪಾದನೆಗೆ ಭಾರತ ಎಂದಿಗೂ ತಲೆಬಾಗದು

## ಪಹಲ್ಗಾಮ್ ದಾಳಿಯಲ್ಲಿ ಮೃತಪಟ್ಟವರಿಗೆ ಪ್ರಧಾನಿ ನರೇಂದ್ರ ಮೋದಿ ಗೌರವ ಸಮರ್ಪಣೆ



**ನವದೆಹಲಿ, ಏ.22: ಭಾರತವು ಯಾವುದೇ ರೀತಿಯ ಭಯೋತ್ಪಾದನೆಗೆ ಎಂದಿಗೂ ತಲೆಬಾಗುವುದಿಲ್ಲ ಮತ್ತು ಭಯೋತ್ಪಾದಕರ ಹೇಯ ಯೋಜನೆಗಳು ಎಂದಿಗೂ ಯಶಸ್ವಿಯಾಗುವುದಿಲ್ಲ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.**

ಕಳೆದ ವರ್ಷ ಏ.22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಮೂಲದ ಲಷ್ಕರ್–ಎ–ತೈಬಾ ಭಯೋತ್ಪಾದಕ ಗುಂಪು ನಡೆಸಿದ ದಾಳಿಯಲ್ಲಿ ದೇಶದ ವಿವಿಧ ಭಾಗದ ಪ್ರವಾಸಿಗರು ಸೇರಿ26 ಅಮಾಯಕರು ಪ್ರಾಣ ಕಳೆದುಕೊಂಡಿದ್ದರು. ಪಹಲ್ಗಾಮ್ ಭಯೋತ್ಪಾದಕ ದಾಳಿ ನಡೆದು ಒಂದು ವರ್ಷ ಕಳೆದ ಸಂದರ್ಭದಲ್ಲಿ ಮೃತರಿಗೆ ಗೌರವ ಸಮರ್ಪಿಸಿ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. "ಕಳೆದ ವರ್ಷ ಇದೇ ದಿನ ಪಹಲ್ಗಾಮ್‌ನ ಭೀಕರ ಭಯೋತ್ಪಾದಕ ದಾಳಿಯಲ್ಲಿ ಬಲಿಯಾದ ಅಮಾಯಕರನ್ನು ಸ್ಮರಿಸುತ್ತಿದ್ದೇನೆ. ಅವರನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ." ಈ ನಷ್ಟವನ್ನು ಭರಿಸುತ್ತಿರುವ ಶೋಕತಪ್ತ ಕುಟುಂಬ ಗಳೊಂದಿಗೆ ನನ್ನ ಆಲೋಚನೆಗಳಿವೆ. "ಒಂದು ರಾಷ್ಟ್ರವಾಗಿ, ದುಃಖ ಮತ್ತು ಸಂಕಲ್ಪದಲ್ಲಿ ಒಗ್ಗಟ್ಟಾಗಿ ನಿಂತಿದ್ದೇವೆ. ಭಾರತವು ಯಾವುದೇ ರೂಪದ ಭಯೋತ್ಪಾದನೆಗೆ ಎಂದಿಗೂ ತಲೆಬಾಗುವುದಿಲ್ಲ. ಭಯೋತ್ಪಾದಕರ ಹೇಯಕೃತ್ಯ ಎಂದಿಗೂ ಗೆಲ್ಲುವುದಿಲ್ಲ, ಎಂದು ಹೇಳಿದ್ದಾರೆ.

ಪಹಲ್ಗಾಮ್ ದಾಳಿಯ ನಂತರ, ಭಾರತವು ಪಾಕಿಸ್ತಾನದ ವಿರುದ್ಧ 'ಆಪರೇಷನ್ ಸಿಂಧೂರ್' ಹೆಸರಿನ ಪ್ರತೀಕಾರದ ಮಿಲಿಟರಿ ಕಾರ್ಯಾಚರಣೆ ನಡೆಸಿತ್ತು. ಇದರಲ್ಲಿ ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯಗಳನ್ನು ನಾಶಪಡಿಸಿದ್ದವು ಎನ್ನುವುದನ್ನು ಮೋದಿ ಉಲ್ಲೇಖಿಸಿದ್ದಾರೆ.

### ಉಗ್ರರ ವಿರುದ್ಧ ಶೂನ್ಯ ಸಹಿಷ್ಣುತೆ



ದೇಶವು ಪೆಹಲ್ಗಾಮ್ ಉಗ್ರ ಕೃತ್ಯಕ್ಕೆ ಇಂದಿಗೂ ಶೋಕಿಸುತ್ತಿದೆ ಮತ್ತು ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಅಚಲವಾಗಿ ನಿಂತಿದೆ. ಭಯೋತ್ಪಾದನೆಯು ಮಾನವಕುಲದ ದೊಡ್ಡ ಶತ್ರು. ಭಾರತವು ಭಯೋತ್ಪಾದನೆ ಮತ್ತು ಅದನ್ನು ಪೋಷಿಸುವವರ ವಿರುದ್ಧ 'ಶೂನ್ಯ ಸಹಿಷ್ಣುತೆ' ನೀತಿಯನ್ನು ಮುಂದುವರಿಸುತ್ತದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

### ದೇಶದ ಏಕತೆ ಕದಡುವ ಯಾವುದೇ ಯತ್ನ ಫಲಿಸಲ್ಲ



22 ಏಪ್ರಿಲ್ 2025 ರಂದು ಪಹಲ್ಗಾಮ್‌ನಲ್ಲಿ ನಡೆದ ಹೇಡಿತನದ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಹೃತ್ಪೂರ್ವಕ ನಮನಗಳು. ಇಂದು ನಮ್ಮ ಪ್ರತಿಕ್ರಿಯೆಯು ದೃಢವಾಗಿದೆ ಮತ್ತು ಅಚಲವಾಗಿದೆ. ನಮ್ಮ ಜನರಿಗೆ ಹಾನಿ ಮಾಡಲು ಅಥವಾ ನಮ್ಮ ಏಕತೆಯನ್ನು ಕದಡಲು ಮಾಡುವ ಯಾವುದೇ ಪ್ರಯತ್ನವನ್ನು ಬಲವಾಗಿ ಎದುರಿಸಲಾಗುವುದು ಎಂಬುದನ್ನು ಸಾಬೀತುಪಡಿಸಿದ್ದೇವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

# ಮೋದಿ ಭಯೋತ್ಪಾದಕ: ಮಲ್ಲಿಕಾರ್ಜುನ ಖರ್ಗೆಗೆ ಚುನಾವಣಾ ಆಯೋಗ ನೋಟಿಸ್

**ನವದೆಹಲಿ, ಏ.22:** ಪ್ರಧಾನಿ ನರೇಂದ್ರ ಮೋದಿಯನ್ನು ಭಯೋತ್ಪಾದಕ ಎಂದು ಕರೆದ ಹಿನ್ನೆಲೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಚುನಾವಣಾ ಆಯೋಗ ನೋಟೀಸ್ ನೀಡಿದೆ. ಬಿಜೆಪಿ ನೀಡಿದ ದೂರಿನ ಮೇರೆಗೆ ಚುನಾವಣಾ ಆಯೋಗವು ಖರ್ಗೆಗೆ ನೋಟಿಸ್ ಜಾರಿ ಮಾಡಿದ್ದು 24 ಗಂಟೆಗಳ ಒಳಗೆ ಪ್ರತಿಕ್ರಿಯೆ ನೀಡುವಂತೆ ತಿಳಿಸಿದೆ.



ತಮಿಳುನಾಡಿನಲ್ಲಿ ಚುನಾವಣಾ ಪ್ರಚಾರದ ಕೊನೆಯ ದಿನದಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ್ದ ಖರ್ಗೆ, ಕಾಂಗ್ರೆಸ್ ಮತ್ತು ಡಿಎಂಕೆ ಮೈತ್ರಿಕೂಟದ ಸದ್ಗುಣಗಳನ್ನು ಹೊಗಳುತ್ತಿದ್ದರು. ಏತನ್ಮಧ್ಯೆ, ಎಐಎಡಿಎಂಕೆ ಎನ್‌ಡಿಎ ಸೇರುವುದನ್ನು ಖರ್ಗೆ ಪ್ರಶ್ನಿಸಿದರು. ಅಣ್ಣಾದೊರೈ ಅವರ ಪ್ರತಿರೂಪವನ್ನು ಪ್ರದರ್ಶಿಸುವ ಎಐಎಡಿಎಂಕೆ ಸದಸ್ಯರು ಮೋದಿಯೊಂದಿಗೆ ಹೇಗೆ ಹೊಂದಾಣಿಕೆ ಮಾಡಿಕೊಳ್ಳುತ್ತಾರೆ. ಅವರು ಭಯೋತ್ಪಾದಕ ಎಂದು ಹೇಳಿದ್ದರು.

ಅವರ ಪಕ್ಷ ಸಮಾನತೆ ಮತ್ತು ನ್ಯಾಯದ ತತ್ವಗಳಲ್ಲಿ ನಂಬಿಕೆ ಇಡುವುದಿಲ್ಲ. ಇವರು ಎಐಎಡಿಎಂಕೆ ಜೊತೆ ಹೋಗುತ್ತಿದ್ದಾರೆ ಎಂದಿದ್ದರು.

ಪ್ರಧಾನಿ ಮೋದಿ ಬಗ್ಗೆ ಖರ್ಗೆ ನೀಡಿದ ಹೇಳಿಕೆಯನ್ನು ಬಿಜೆಪಿ ತೀವ್ರವಾಗಿ ಟೀಕಿಸಿತ್ತು. ಗೃಹ ಸಚಿವ ಅಮಿತ್ ಶಾ ಸೇರಿ ಹಲವಾರು ನಾಯಕರು ಮಲ್ಲಿಕಾರ್ಜುನ ಖರ್ಗೆ ಹೇಳಿಕೆಯನ್ನು ಖಂಡಿಸಿದರು. ವಿಷಯ ಉಲ್ಬಣಗೊಳ್ಳುತ್ತಿದ್ದಂತೆ, ಮಲ್ಲಿಕಾರ್ಜುನ ಖರ್ಗೆ ತಪ್ಪನ್ನು ಅರಿತುಕೊಂಡು ತಕ್ಷಣವೇ ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿದ್ದರು. ಪ್ರಧಾನಿ ಮೋದಿಯನ್ನು ಎಂದಿಗೂ ಭಯೋತ್ಪಾದಕ ಎಂದು ಕರೆದಿಲ್ಲ. ಮೋದಿ ಜನರನ್ನು ಹೆದರಿಸುತ್ತಿದ್ದಾರೆ ಎನ್ನುವುದು ತನ್ನ ಮಾತಿನ ಅರ್ಥ ಎಂದಿದ್ದರು. ಖರ್ಗೆ ಹೇಳಿಕೆ ವಿರುದ್ಧ ಮಂಗಳವಾರ ಬಿಜೆಪಿ ಚುನಾವಣಾ ಆಯೋಗಕ್ಕೆ ಲಿಖಿತ ದೂರು ಸಲ್ಲಿಸಿತ್ತು. ಬಿಜೆಪಿಯ ಹಿರಿಯ ನಾಯಕರಾದ ನಿರ್ಮಲಾ ಸೀತಾರಾಮನ್, ಕೇಂದ್ರ ಸಚಿವರಾದ ಕಿರಣ್ ರಿಜಿಜು, ಅರ್ಜುನ್ ರಾಮ್ ಮೇಘವಾಲ್ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್ ಅವರು ಚುನಾವಣಾ ಆಯೋಗದ ಕಚೇರಿಗೆ ಭೇಟಿ ನೀಡಿ ಖರ್ಗೆ ಹೇಳಿಕೆಗೆ ಆಕ್ಷೇಪ ವ್ಯಕ್ತಪಡಿಸಿದ್ದರು.

# ಪವನಶಕ್ತಿ: ವಿಶ್ವದಲ್ಲೇ ಭಾರತಕ್ಕೆ 4ನೇ ಸ್ಥಾನ




**ನವದೆಹಲಿ, ಏ.22:** ಪವನಶಕ್ತಿ ಸಾಮರ್ಥ್ಯದಲ್ಲಿ ಜಾಗತಿಕವಾಗಿ ಭಾರತ 4ನೇ ಸ್ಥಾನದಲ್ಲಿದ್ದು, ಮುಂದಿನ ಒಂದು ದಶಕದಲ್ಲಿ ಬರೋಬ್ಬರಿ 156 ಗೀಗಾವ್ಯಾಟ್ ಪವನ ವಿದ್ಯುತ್ ಉತ್ಪಾದನೆ ಸಾಮರ್ಥ್ಯ ಸಾಧಿಸಲಿದೆ' ಎಂದು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಘೋಷಿಸಿದರು.

ದೆಹಲಿಯಲ್ಲಿ ಬುಧವಾರ ಪವನ ಸ್ವತಂತ್ರ ವಿದ್ಯುತ್ ಉತ್ಪಾದಕರ ಸಂಘದ ಸಂಸ್ಥಾಪನಾ ದಿನ ಸಮಾರಂಭ ಉದ್ದೇಶಿಸಿ ಮಾತನಾಡಿದರು.

ಪವನ ವಿದ್ಯುತ್ ಉತ್ಪಾದನೆಯಲ್ಲಿ ಭಾರತ ಗಮನಾರ್ಹ ಪ್ರಗತಿ ಸಾಧಿಸುತ್ತಿದೆ. 2025–26ರಲ್ಲಿ ಐತಿಹಾಸಿಕ 6.1 ಗೀಗಾವ್ಯಾಟ್ ಪವನಶಕ್ತಿ ಉತ್ಪಾದನೆ ಮೂಲಕ ಐತಿಹಾಸಿಕ ದಾಖಲೆ ಬರೆದಿದೆ. ಪ್ರಸ್ತುತ 56.1 ಗೀಗಾವ್ಯಾಟ್‌ಗಿಂತ ಹೆಚ್ಚಿನ ಸ್ಥಾಪಿತ ಸಾಮರ್ಥ್ಯ ಮತ್ತು ಹೆಚ್ಚುವರಿಯಾಗಿ 28 ಗೀಗಾವ್ಯಾಟ್ ಅನುಷ್ಠಾನ ಹಂತದಲ್ಲಿದೆ ಎಂದು ಹೇಳಿದರು.

150 ಮೀಟರ್ ಹಬ್ ಎತ್ತರದಲ್ಲಿ ಭಾರತದ ಪವನಶಕ್ತಿ ಸಾಮರ್ಥ್ಯ ಸುಮಾರು 1164 ಗೀಗಾವ್ಯಾಟ್‌ಎಂಬ ಅಂದಾಜಿದ್ದು, 2030ರ ವೇಳೆಗೆ 100 ಗೀಗಾವ್ಯಾಟ್ ಮತ್ತು 2036ರ ವೇಳೆಗೆ 156 ಗೀಗಾವ್ಯಾಟ್ ಪವನ ಶಕ್ತಿಯನ್ನು ಸಾಧಿಸುತ್ತದೆ ಮತ್ತು 2070ರ ವೇಳೆಗೆ ನಿವ್ವಳ–ಶೂನ್ಯ ಗುರಿಗೆ ಗಮನಾರ್ಹ ಕೊಡುಗೆ ನೀಡುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಇಂಧನ ವ್ಯವಸ್ಥೆಯಲ್ಲಿ ಪವನಶಕ್ತಿ ನಿರ್ಣಾಯಕ ಪಾತ್ರ ವಹಿಸುತ್ತದೆ. ಅಲ್ಲದೆ, ಶೇ.45ರಷ್ಟು ಪವನ ಶಕ್ತಿ ವಿದ್ಯುತ್ ಬೇಡಿಕೆ ಸಮಯದಲ್ಲಿಯೇ ಉತ್ಪಾದನೆಯಾಗುತ್ತಿದೆ. ವಾರ್ಷಿಕ 24 ಗೀಗಾವ್ಯಾಟ್‌ಗಿಂತ ಹೆಚ್ಚಿನ ಸಾಮರ್ಥ್ಯ ಮತ್ತು 70–80% ದೇಶೀಯ ಮಟ್ಟ ತಲುಪಿದೆ ಎಂದರು.

ಕಾರ್ಯಕ್ರಮದಲ್ಲಿ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯದ ಕಾರ್ಯದರ್ಶಿ ಸಂತೋಷ್ ಸಾರಂಗಿ ಮತ್ತಿತರರು ಉಪಸ್ಥಿತರಿದ್ದರು.

# ದೆಹಲಿಯಲ್ಲಿ ಪಿಯುಸಿ ಪ್ರಮಾಣ ಪತ್ರ ಇಲ್ಲದೆ ಇಂಧನ ಸಿಗದು

## ನಿರ್ಧಾರ ಅಧಿಕೃತಗೊಳಿಸಿದ ದೆಹಲಿ ಸರ್ಕಾರ

**ನವದೆಹಲಿ, ಏ.22:** ಮಾಲಿನ್ಯ ನಿಯಂತ್ರಣದಡಿ ಪ್ರಮಾಣಪತ್ರವನ್ನು ಹೊಂದಿರದ ವಾಹನಗಳಿಗೆ ದೆಹಲಿಯಾದ್ಯಂತದ ಎಲ್ಲಾ ಇಂಧನ ಕೇಂದ್ರಗಳಲ್ಲಿ ಪೆಟ್ರೋಲ್, ಡೀಸೆಲ್, ಸಿಎನ್‌ಜಿ ಮತ್ತು ಎಲ್‌ಪಿಜಿ ನಿರಾಕರಿಸಲಾಗುವುದು. ಈ ನಿಯಮವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ಎಲ್ಲಾ ಪೆಟ್ರೋಲ್ ಪಂಪ್‌ಗಳು ಮತ್ತು ಇಂಧನ ಏಜೆನ್ಸಿಗಳಿಗೆ ದೆಹಲಿ ಸರ್ಕಾರ ನಿರ್ದೇಶನ ನೀಡಿದೆ. ನಿಯಮ ಇಂದಿನಿಂದಲೇ ಜಾರಿಗೆ ಬರಲಿದೆ. ನಗರದ ವಾಯು ಮಾಲಿನ್ಯ ಬಿಕ್ಕಟ್ಟನ್ನು ಎದುರಿಸಲು ದೆಹಲಿ ಸರ್ಕಾರವು ರೂಪಿಸಿರುವ ಯೋಜನೆಗಳಲ್ಲಿ ಇದು ಒಂದು ಮಹತ್ವದ ಬದಲಾವಣೆಯಾಗಿದೆ. ಕೇವಲ ದಂಡ ವಿಧಿಸುವ ಬದಲು, ಸರ್ಕಾರವು ಈಗ ಮೂಲದಲ್ಲೇ ಇಂಧನ ಲಭ್ಯತೆಯನ್ನು ಕಡಿತಗೊಳಿಸುತ್ತಿದೆ. ಇದರಿಂದಾಗಿ ರಾಜಧಾನಿಯ ಪ್ರತಿಯೊಬ್ಬ ವಾಹನ ಮಾಲೀಕರು ಪಿಯುಸಿ ನಿಯಮವನ್ನು ಪಾಲಿಸುವುದು ಅನಿವಾರ್ಯವಾಗಿದೆ.




ದೆಹಲಿಯ ಪ್ರಯಾಣಿಕರು ಮತ್ತು ವಾಹನ ಮಾಲೀಕರಿಗೆ ಇದರ ಅರ್ಥವೊಂದೇ: ಮುಂದಿನ ಬಾರಿ ಇಂಧನ ತುಂಬಿಸಲು ಹೋಗುವ ಮೊದಲು ನಿಮ್ಮ ಪಿಯುಸಿ ಪ್ರಮಾಣಪತ್ರವನ್ನು ಸರಿಪಡಿಸಿಕೊಳ್ಳಿ. ಈ ನಿಯಮವು ಎಲ್ಲಾ ರೀತಿಯ ಇಂಧನ ಚಾಲಿತ ವಾಹನಗಳಿಗೂ ಅನ್ವಯಿಸುತ್ತದೆ, ಆದ್ದರಿಂದ ವಾಹನವು ಯಾವ ಇಂಧನದಿಂದ ಚಲಿಸುತ್ತದೆ ಎಂಬುದರ ಆಧಾರದ ಮೇಲೆ ಯಾವುದೇ ವಿನಾಯಿತಿ ಇರುವುದಿಲ್ಲ. ಈ ಕ್ರಮವು ದೆಹಲಿಯ ಗಾಳಿಯ ಗುಣಮಟ್ಟವನ್ನು ಸುಧಾರಿಸುತ್ತದೆಯೇ ಎಂಬುದು ಕಾದು ನೋಡಬೇಕಿದೆ, ಆದರೆ ಈ ಜಾರಿಯ ವಿಧಾನವನ್ನು ನಿರ್ಲಕ್ಷಿಸುವುದು ಈಗ ತುಂಬಾ ಕಷ್ಟಕರವಾಗಿದೆ.

# ಡಿಕೆಶಿ ವಿರುದ್ಧ ಇ.ಡಿ ಕೇಸ್: ಮಧ್ಯಂತರ ಜಾಮೀನು ಮುಂದುವರಿಸಿದ ದೆಹಲಿ ಹೈಕೋರ್ಟ್

**ನವದೆಹಲಿ, ಏ.22:** ಉಪ ಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ನಾಯಕ ಡಿ.ಕೆ. ಶಿವಕುಮಾರ್ ಅವರು ತಮ್ಮ ವಿರುದ್ಧದ ಜಾರಿ ನಿರ್ದೇಶನಾಲಯ ತನಿಖೆಯನ್ನು ರದ್ದುಗೊಳಿಸುವಂತೆ ಕೋರಿ 2022ರಲ್ಲಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್ ಕೇಂದ್ರ ಸರ್ಕಾರದ ಅಭಿಪ್ರಾಯ ಕೇಳಿದೆ. ಅಲ್ಲದೆ, ಶಿವಕುಮಾರ್ ಅವರಿಗೆ ನೀಡಲಾಗಿರುವ ಮಧ್ಯಂತರ ರಕ್ಷಣೆಯನ್ನು ಮುಂದುವರಿಸುವಂತೆ ನಿರ್ದೇಶಿಸಿದೆ. ನ್ಯಾಯಮೂರ್ತಿ ನವೀನ್ ಚೌಲಾ ಮತ್ತು ನ್ಯಾಯಮೂರ್ತಿ ರವೀಂದರ್ ದುದೇಜಾ ಅವರ ವಿಭಾಗೀಯ ಪೀಠ ಈ ಪ್ರಕರಣವನ್ನು ವಿಚಾರಣೆ ನಡೆಸಿತು. ಶಿವಕುಮಾರ್ ಅವರು 2020ರಲ್ಲಿ ದಾಖಲಾಗಿರುವ ಜಾರಿ ಕೇಸ್ ಇನ್ಫರ್ಮೇಷನ್ ರೆಕಾರ್ಡ್ (ECIR) ಅನ್ನು ರದ್ದುಗೊಳಿಸುವಂತೆ ಮತ್ತು ತಮಗೆ ನೀಡಲಾಗಿರುವ ಸಮನ್ಸ್ ರದ್ದುಪಡಿಸುವಂತೆ ಕೋರಿದ್ದಾರೆ. ಇಡಿ ದಾಖಲಿಸಿರುವ ಈ ಪ್ರಕರಣ ಸಿಬಿಐ ದಾಖಲಿಸಿರುವ ಅಕ್ರಮ ಆಸ್ತಿ ಪ್ರಕರಣಕ್ಕೆ ಸಂಬಂಧಿಸಿದೆ, ಈ ಪ್ರಕರಣದಲ್ಲಿ **PMLA** ಕೆಲವು ನಿಬಂಧನೆಗಳ ಸಾಂವಿಧಾನಿಕ ಸಿಂಧುತ್ವವನ್ನು ಡಿ.ಕೆ ಶಿವಕುಮಾರ್ ಪ್ರಶ್ನಿಸಿದ್ದಾರೆ. ವಿಶೇಷವಾಗಿ ಭ್ರಷ್ಟಾಚಾರ ನಿರೋಧಕ ಕಾಯಿದೆಯ ಸೆಕ್ಷನ್ 13 ಅನ್ನು **PMLA** ಪಟ್ಟಿಗೆ ಸೇರಿಸಿರುವುದನ್ನು ತೀವ್ರವಾಗಿ ವಿರೋಧಿಸಿದ್ದಾರೆ. ಒಂದೇ ಪ್ರಕರಣವನ್ನು ಎರಡು ಏಜೆನ್ಸಿಗಳು ವಿಚಾರಣೆ ನಡೆಸುವ ಮೂಲಕ ಒಂದೇ ಅಪರಾಧಕ್ಕೆ ಎರಡು ಬಾರಿ ಶಿಕ್ಷೆ ನೀಡುವ ಪ್ರಯತ್ನ ಎಂದು ಆರೋಪಿಸಲಾಗಿದೆ.



2018ರಲ್ಲಿ ದಾಖಲಾಗಿದ್ದ ಪ್ರಕರಣವನ್ನೇ **ED** ಮತ್ತೆ ತನಿಖೆ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಇದು ಕಾನೂನಿನ ದುರ್ಬಳಕೆ ಮತ್ತು ದುರುದ್ದೇಶಪೂರಿತ ಕ್ರಮ ಎಂದು ವಿಚಾರಣೆ ವೇಳೆ ಶಿವಕುಮಾರ್ ಪರ ವಕೀಲರು ಪೀಠಕ್ಕೆ ತಿಳಿಸಿದ್ದಾರೆ. ಇ.ಡಿ ಪರ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್.ವಿ. ರಾಜು ವಾದಿಸಿ, **PMLA** ಕಾನೂನನ್ನು ಪ್ರಶ್ನಿಸುವ ಅರ್ಜಿಯಲ್ಲಿ ಕೇಂದ್ರ ಸರ್ಕಾರವನ್ನು ಪಕ್ಷವಾಗಿ ಸೇರಿಸಬೇಕು ಪ್ರಸ್ತಾಪಕ್ಕೆ ಆಕ್ಷೇಪ ವ್ಯಕ್ತಪಡಿಸಿದರು. ಆದರೆ ಈ ವಾದ ತಳ್ಳಿಹಾಕಿದ ದೆಹಲಿ ಹೈಕೋರ್ಟ್, ಪ್ರಕರಣದಲ್ಲಿ ಕೇಂದ್ರ ಸರ್ಕಾರವನ್ನು ಭಾಗಿ ಮಾಡಿ ನಾಲ್ಕು ವಾರಗಳಲ್ಲಿ ಪ್ರತಿಕ್ರಿಯೆ ಸಲ್ಲಿಸುವಂತೆ ನಿರ್ದೇಶಿಸಿತು. ಅಲ್ಲದೆ, ಶಿವಕುಮಾರ್ ಅವರಿಗೆ ನೀಡಲಾಗಿರುವ ಮಧ್ಯಂತರ ರಕ್ಷಣೆಯನ್ನು ಮುಂದಿನ ಆದೇಶದವರೆಗೆ ಮುಂದುವರಿಸುವಂತೆ ಪೀಠ ಸ್ಪಷ್ಟಪಡಿಸಿತು. 2018ರ ಪ್ರಕರಣದಲ್ಲಿ 8.59 ಕೋಟಿ ರೂ. ಅಕ್ರಮ ಆಸ್ತಿ ಎಂದು ಆರೋಪವಿದ್ದರೆ, ಪ್ರಸ್ತುತ ಪ್ರಕರಣದಲ್ಲಿ 2013ರಿಂದ 2018ರವರೆಗೆ 74.93 ಕೋಟಿ ರೂ. ಅನುಪಾತದಲ್ಲಿ ಆಸ್ತಿ ಹೆಚ್ಚಿದೆ ಎಂದು ಹೇಳಲಾಗಿದೆ. ಮುಂದಿನ ವಿಚಾರಣೆ ಜುಲೈ 23ರಂದು ನಡೆಯಲಿದೆ.ಈ ಪ್ರಕರಣವು 2022ರಿಂದಲೂ ದೆಹಲಿ ಹೈಕೋರ್ಟ್‌ನಲ್ಲಿ ಬಾಕಿ ಉಳಿದಿದೆ.

# ಧರ್ಮಕ್ಕಾಗಿ ಮನುಷ್ಯ ಹುಟ್ಟಿಲ್ಲ, ವ್ಯಕ್ತಿಯ ಏಳಿಗೆಗಾಗಿ ಹುಟ್ಟಿದೆ: ಮಲ್ಲಿಕಾರ್ಜುನ ಖರ್ಗೆ

**ಬೀದರ್, ಏ.22:** ಎಲ್ಲಿಯವರೆಗೆ ನಾವೆಲ್ಲರೂ ಒಂದೇ ಎನ್ನುವುದಿಲ್ಲವೋ, ಬೇರೆಯವನ್ನು ಪ್ರೀತಿಸಿ ಅಪ್ಪಿಕೊಳ್ಳುವುದಿಲ್ಲವೋ ಅಲ್ಲಿಯವರೆಗೆ ಯಾವುದೇ ಧರ್ಮ ಬೆಳೆಯುವುದಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

### ಎಲ್ಲಿಯವರೆಗೆ ನಾವೆಲ್ಲರೂ ಒಂದೇ ಎನ್ನುವುದಿಲ್ಲವೋ ಅಲ್ಲಿಯವರೆಗೆ ಧರ್ಮ ಬೆಳೆಯುವುದಿಲ್ಲ

ಭಾಲ್ಕಿಯ ಚನ್ನಬಸವಾಶ್ರಮದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಲಿಂ. ಡಾ. ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ಮತ್ತು ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಧರ್ಮಕ್ಕಾಗಿ ಮನುಷ್ಯ ಹುಟ್ಟಿಲ್ಲ. ವ್ಯಕ್ತಿಯ ಏಳಿಗೆಗಾಗಿ ಧರ್ಮಗಳು ಹುಟ್ಟಿಕೊಂಡಿವೆ. ಮನುವಾದ ಮತ್ತು ಚಾತುರ್ವರ್ಣ ಪದ್ಧತಿಯನ್ನು ತಿರಸ್ಕರಿಸಿದ್ದ ಬಸವಣ್ಣನವರು ಹೊಸಧರ್ಮ ಸ್ಥಾಪಿಸಿ ಎಲ್ಲ ಜಾತಿಗಳ ಜನರನ್ನು ಒಂದುಗೂಡಿಸಿದರು. ಆದರೆ, ಅದನ್ನು ನೀವು ಒಪ್ಪುವುದಿಲ್ಲ.

ಅನುಭವ ಮಂಟಪ ಸ್ಥಾಪಿಸಿ ಹಿಂದುಳಿದ ಸಮಾಜದ ಅಲ್ಲಮಪ್ರಭು ದೇವರನ್ನು ಅನುಭವ ಮಂಟಪದ ಅಧ್ಯಕ್ಷರಾಗಿ ಮಾಡಿದ್ದರು. ಬಸವ ತತ್ವ, ಸಿದ್ಧಾಂತಗಳ ಬಗ್ಗೆ ಬಹಳಷ್ಟು ಜನರು ಮಾತನಾಡುತ್ತಾರೆ. ಜೀವನದಲ್ಲಿ ಅದನ್ನು ಅನುಷ್ಠಾನಕ್ಕೆ ತಂದುಕೊಂಡಾಗ ಮಾತ್ರ ಬಸವತತ್ವ ಬೆಳೆಯಲು ಸಾಧ್ಯ ಎಂದರು. ಬಸವಣ್ಣನ ವಿಚಾರಧಾರೆಗಳು, ಶರಣ ಸಾಹಿತ್ಯವನ್ನು ಪ್ರಪಂಚಕ್ಕೆ ತೋರಿಸಿಕೊಟ್ಟವರು ಬೀದರ ಜಿಲ್ಲೆಯ ಜನರು. ಬಸವಣ್ಣ ಶ್ರೇಷ್ಠತತ್ವಗಳ ಪ್ರಚಾರ, ಮತ್ತು ಪ್ರಸಾರದ ಅಗತ್ಯವಿದೆ. ಇಲ್ಲವಾದರೆ ಅವು ಮಠ, ಗುರುಕುಲದಲ್ಲೇ ಉಳಿಯುತ್ತವೆ. ಈ ನಿಟ್ಟಿನಲ್ಲಿ ಬಸವಲಿಂಗ ಪಟ್ಟದ್ದೇವರು ಪ್ರಗತಿಪರ ವಿಚಾರಗಳೊಂದಿಗೆ ಕೆಲಸ ಮಾಡುತ್ತಿದ್ದು, ಅಂಥವರ ಜನ್ಮದಿನದ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು ಹೆಚ್ಚು ಖುಷಿಯಾಗುತ್ತದೆ ಎಂದು ಹೇಳಿದರು.

ವೇದಿಕೆಯಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಹಿರೇಮಠ ಸಂಸ್ಥಾನದ ಹಿರಿಯ ಶ್ರೀಗಳಾದ ಡಾ. ಬಸವಲಿಂಗ ಪಟ್ಟದ್ದೇವರು, ಗದಗ ಮಠದ ತೋಂಟದ ಸಿದ್ದರಾಮ ಸ್ವಾಮೀಜಿ, ಗುರುಬಸವ ಪಟ್ಟದ್ದೇವರು, ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹೀಮ್ ಖಾನ್, ಸಂಸದ ಸಾಗರ್ ಖಂಡ್ರೆ, ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ, ಮಾಜಿ ಶಾಸಕ ಪ್ರಕಾಶ ಖಂಡ್ರೆ ಇದ್ದರು.




### ಪೂಜ್ಯರ ಬದುಕು ಎಲ್ಲರಿಗೂ ಪ್ರೇರಣೆ: ಗೆಹ್ಲೋತ್

ರಾಜ್ಯಪಾಲ ಥಾವರಚಂದ್ ಗೆಹ್ಲೋತ್ ಮಾತನಾಡಿ, ಆಧ್ಯಾತ್ಮ ಗುರುಗಳಾದ ಡಾ. ಬಸವಲಿಂಗ ಪಟ್ಟದ್ದೇವರು ಶೈಕ್ಷಣಿಕ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ಒಬ್ಬ ಯೋಗಿಯಂತೆ ಕೆಲಸ ಮಾಡಿದ್ದಾರೆ. ಮಹಿಳಾ ಸಶಕ್ತಿಕರಣಕ್ಕೂ ಶ್ರಮಿಸಿದ್ದಾರೆ. ಅವರ ಬದುಕು ಎಲ್ಲರಿಗೂ ಪ್ರೇರಣಾದಾಯಕವಾಗಿದೆ. ಪೂಜ್ಯರ ಜೀವನ ಸೇವೆ, ಸಾಧನೆ ಸಂಗಮದಂತಿದೆ. ಶಾಸನ ಹಾಗೂ ಸಂತ ಪರಂಪರೆ ಒಂದೇ ವೇದಿಕೆಗೆ ಬಂದರೆ ಹೊಸ ದಿಕ್ಕು, ಪ್ರೇರಣೆ ಸಿಕ್ಕಂತಾಗುತ್ತದೆ. ಪಟ್ಟದ್ದೇವರು ಶತಾಯುಷಿಗಳಾಗಿ ಬದುಕಿ ಸಮಾಜದ ಉನ್ನತಿಗೆ ಅವರ ಕೊಡುಗೆ ಮತ್ತಷ್ಟು ಸಿಗುವಂತಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

# ಪಶ್ಚಿಮ ಬಂಗಾಳದಲ್ಲಿ ಇಂದು ಮೊದಲ ಹಂತದ ಚುನಾವಣೆ

## ಟಿಎಂಸಿ, ಬಿಜೆಪಿ ನಡುವೆ ಹಣಾಹಣಿ । ಚುನಾವಣಾ ಆಯೋಗದಿಂದ ಹೈಅಲರ್ಟ್

**ಕೊಲ್ಕತ್ತಾ, ಏ.22:** ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮೊದಲ ಹಂತಕ್ಕೆ ಗುರುವಾರ (ಏ.23) ದಂದು ಮತದಾನ ನಡೆಯಲಿದೆ. ಉತ್ತರ ಬಂಗಾಳದ ಎಲ್ಲಾ 152 ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಉತ್ತರ ಬಂಗಾಳದ ಮುರ್ಶಿದಾಬಾದ್, ಜರ್ಗಾಮ್, ಮೇದಿನಿಪುರೆ, ಬಂಕುರಾ, ಪುರುಲಿಯಾ, ಪಶ್ಚಿಮ ಬರ್ಧಮಾನ್ ಮತ್ತು ಬಿರ್ಭುಮ್ ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ.

ಮೊದಲ ಹಂತದಲ್ಲಿ 16 ಜಿಲ್ಲೆಗಳ 152 ಕ್ಷೇತ್ರಗಳಿದ್ದು, 1,478 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಹೆಚ್ಚುವರಿ 4,660 ಸಹಾಯಕ ಮತಗಟ್ಟೆಗಳು ಸ್ಥಾಪಿಸಿದೆ, ಒಟ್ಟು ಮತಗಟ್ಟೆಗಳ ಪೈಕಿ 8,000ಕ್ಕೂ ಹೆಚ್ಚು ಮತಗಟ್ಟೆಗಳನ್ನು ಅತಿಸೂಕ್ಷ್ಮ ಮತಗಟ್ಟೆಗಳು ಎಂದು ಗುರುತಿಸಿದೆ. ರಾಜ್ಯದಾದ್ಯಂತ 780ಕ್ಕೂ ಹೆಚ್ಚು ಕೇಂದ್ರ ಭದ್ರತಾ ಪಡೆಗಳ ಕಂಪನಿಗಳು ನಿಯೋಜನೆ ಮಾಡಿದೆ. ಮತದಾನಕ್ಕೂ ಮುನ್ನ 199ಕ್ಕೂ ಹೆಚ್ಚು ಗೂಂಡಾಗಳ ಬಂಧಿಸಿದೆ.

ಬಿಜೆಪಿ ನಾಯಕ ಸುವೇಂದು ಅಧಿಕಾರಿ ತಮ್ಮ ಭದ್ರಕೋಟೆಯಾದ ನಂದಿಗ್ರಾಮ್ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದು, ಭಬಾನಿಪುರದಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅಖಾಡದಲ್ಲಿದ್ದಾರೆ. ಮಠಭಂಗದಿಂದ (ಎಸ್ಸಿ) ಕೇಂದ್ರ ಸಚಿವ ನಿಸಿತ್ ಪ್ರಮಾಣಿಕ್ ಮತ್ತು ಖರಗ್ಪುರ ಸದರ್ನಿಂದ ಮಾಜಿ ರಾಜ್ಯಾಧ್ಯಕ್ಷ ದಿಲೀಪ್ ಘೋಷ್ ಚುನಾವಣೆ ಎದುರಿಸಲಿದ್ದಾರೆ. ಕಾಂಗ್ರೆಸ್ನಿಂದ ಅಧೀರ್ ರಂಜನ್ ಚೌಧರಿ ಬಹರಂಪುರದಿಂದ, ಮೌಸಮ್ ನೂರ್ ಮಾಲತಿಪುರದಿಂದ ಮತ್ತು ಮೃನ್ಮೋಯ್ ಸರ್ಕಾರ್ ಅಲಿಪುರ್ ದುವಾರ್ಸ್‌ನಿಂದ ಸ್ಪರ್ಧಿಸಿದ್ದಾರೆ.

ಟಿಎಂಸಿ ಮತ್ತು ಬಿಜೆಪಿ ನಡುವೆ ನೇರಾನೇರ ಸ್ಪರ್ಧೆ ಏರ್ಪಟ್ಟಿದ್ದು ಕಾಂಗ್ರೆಸ್ ಮತ್ತು ಎಡಪಕ್ಷಗಳು ನೆಪಮಾತ್ರಕ್ಕೆ ಸ್ಪರ್ಧಿಸಿವೆ. ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಸರ್ಕಾರದ ಆಡಳಿತದಲ್ಲಿನ ಹಿಂಸಾಚಾರ ಮತ್ತು ಭ್ರಷ್ಟಾಚಾರವನ್ನು ಕೊನೆಗೊಳಿಸಿ, ಜನರಲ್ಲಿ ವಿಶ್ವಾಸ ಮೂಡಿಸುವ ಶಪಥ ಮಾಡಿರುವ ಬಿಜೆಪಿ 12 ಪ್ರಮುಖ ಭರವಸೆಗಳನ್ನು ಘೋಷಿಸಿದೆ. ಉಚಿತ ಬಸ್ ಪ್ರಯಾಣ, ರಾಜ್ಯದ ಆರ್ಥಿಕವಾಗಿ ಹಿಂದುಳಿದ ಮಹಿಳೆಯರಿಗೆ ಮತ್ತು ನಿರುದ್ಯೋಗಿ ಯುವಜನರಿಗೆ ಪ್ರತಿ ತಿಂಗಳು 3,000 ರೂ.ಗಳ ಆರ್ಥಿಕ ನೆರವು ನೀಡಲಾಗುವುದು.

ರಾಜ್ಯದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ತಡೆಯಲು ಮತ್ತು ಅವರಿಗೆ ಸಂಪೂರ್ಣ ಭದ್ರತೆ ಒದಗಿಸಲು ವಿಶೇಷ ದುರ್ಗಾ ಸುರಕ್ಷಾ ದಳ ಎಂಬ ಪಡೆಯನ್ನು ರಚಿಸಲಾಗುವುದು ಸೇರಿದಂತೆ ಆಕರ್ಷಕ ಭರವಸೆ ನೀಡಿದೆ.

ದುವಾರೆ ಚಿಕಿತ್ಸೆ ಶಿಬಿರಗಳ ಮೂಲಕ, ಜನರು ತಮ್ಮ ಮನೆ ಬಾಗಿಲಿಗೆ ಗುಣಮಟ್ಟದ ಆರೋಗ್ಯ ಸೇವೆ, ಮಹಿಳೆಯರನ್ನು ಗುರಿಯಾಗಿಸಿಕೊಂಡು ನಡೆಯುವ ಪ್ರಮುಖ ಕಲ್ಯಾಣ ಕಾರ್ಯಕ್ರಮವಾದ 'ಲಕ್ಷ್ಮೀ ಭಂಡಾರ್' ಯೋಜನೆಯಡಿ ಮಹಿಳೆಯರಿಗೆ ನೀಡುತ್ತಿರುವ ಹಣವನ್ನು ಹೆಚ್ಚಿಸುವ ಭರವಸೆ, ಮಾಸಿಕ ಆರ್ಥಿಕ ಸಹಾಯವನ್ನು 500 ರೂ. ಹೆಚ್ಚಿಸಲಾಗುವುದು. ಸಾಮಾನ್ಯ ವರ್ಗದ ಮಹಿಳೆಯರು ತಿಂಗಳಿಗೆ 1,500 ರೂ., ಪರಿಶಿಷ್ಟ ಜಾತಿ ಮತ್ತು ಪಂಗಡಗಳಿಗೆ ಸೇರಿದವರು ನೇರ ವರ್ಗಾವಣೆಯ ಮೂಲಕ ತಿಂಗಳಿಗೆ 1,700 ರೂ.ಗಳನ್ನು ನೀಡಲಾಗುವುದು ಎಂದು ಟಿಎಂಸಿ ಹೇಳಿದೆ.

ಮೊದಲ ಹಂತದ ಮತದಾನಕ್ಕೂ ಮುನ್ನ ಮಮತಾ ಬ್ಯಾನರ್ಜಿಗೆ ದೂರವಾಣಿ ಕರೆ ಮಾಡಿಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದ್ದಾರೆ ಮತ್ತು 'ಮಮತಾ ದೀದಿ' ಅತ್ಯಂತ ಕಠಿಣವಾದ ಆದರೆ ಪ್ರಜಾಪ್ರಭುತ್ವದ ಪ್ರಮುಖ ಹೋರಾಟವನ್ನು ನಡೆಸುತ್ತಿದ್ದಾರೆ ಎಂದು ಬಣ್ಣಿಸಿದ್ದಾರೆ. ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದು, ಮಮತಾ ಬ್ಯಾನರ್ಜಿಗೆ ಕೇಜ್ರಿವಾಲ್ ಬೆಂಬಲ ಸೂಚಿಸಿದ್ದಾರೆ.

### ದೀದಿಗೆ ಸುಪ್ರೀಂ ಶಾಕ್



**ಸುಪ್ರೀಂಕೋರ್ಟ್ ನಲ್ಲಿ ಮಮತಾ ಬ್ಯಾನರ್ಜಿಗೆ ಹಿನ್ನಡೆಯಾಗಿದೆ. ಕಲ್ಲಿದ್ದಲು ಹಗರಣದ ತನಿಖೆಯ ಸಮಯದಲ್ಲಿ ಜನವರಿಯಲ್ಲಿ ಐ–ಪಿಎಸಿ ಕಚೇರಿ ಮತ್ತು ಅದರ ನಿರ್ದೇಶಕ ಪ್ರತೀಕ್ ಜೈನ್ ಅವರ ನಿವಾಸದ ಮೇಲೆ ನಡೆಸಿದ ದಾಳಿಗೆ ಸಂಬಂಧಿಸಿದೆ. ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವೈಯಕ್ತಿಕವಾಗಿ ದಾಳಿಯಲ್ಲಿ ಹಸ್ತಕ್ಷೇಪಕ್ಕೆ ಸುಪ್ರೀಂಕೋರ್ಟ್ ಆಕ್ಷೇಪ ವ್ಯಕ್ತಪಡಿಸಿದೆ. ತನಿಖೆಯಲ್ಲಿ ಮುಖ್ಯಮಂತ್ರಿಯವರ ಹಸ್ತಕ್ಷೇಪವು ರಾಜ್ಯ ಮತ್ತು ಕೇಂದ್ರದ ನಡುವಿನ ಪ್ರಕರಣವಲ್ಲ, ಬದಲಾಗಿ ಕಾನೂನು ಉಲ್ಲಂಘನೆಯಾಗಿದೆ ಎಂದು ಹೇಳಿರುವ ಕೋರ್ಟ್, ಮಮತಾ ಬ್ಯಾನರ್ಜಿ ಅವರ ಪಾತ್ರವನ್ನು ಪ್ರಶ್ನಿಸಿದೆ. ಇಡಿ ಅಧಿಕಾರಿಗಳ ವಿರುದ್ಧ ರಾಜ್ಯದ ಕ್ರಮಕ್ಕೆ ನ್ಯಾಯಾಲಯ ತಡೆ ನೀಡಿದೆ ಮತ್ತು ಸಿಸಿಟಿವಿ ಸಾಕ್ಷ್ಯಗಳನ್ನು ಸಂರಕ್ಷಿಸಲು ಆದೇಶಿಸಿದೆ.**

### ಅಮಿತ್ ಶಾಗೆ ತಿರುಗೇಟು

**ಸಿಎಂ ಮಮತಾ ಬ್ಯಾನರ್ಜಿ ವಿರುದ್ಧ ಏ ದೀದಿ ಎಂದು ಸಂಬೋಧಿಸಿದ್ದ ಕೇಂದ್ರ ಗೃಹಸಚಿವ ಅಮಿತ್ ಶಾ ಅವರಿಗೆ ತಿರುಗೇಟು ನೀಡಿರುವ ಟಿಎಂಸಿ, 'ಒನ್ಸ್ ಎ ಗೂಂಡಾ, ಆಲ್ವೇಸ್ ಗೂಂಡಾ' ಎಂದು ವಾಗ್ದಾಳಿ ನಡೆಸಿದೆ. ಕುರಿತು ಎಕ್ಸ್‌ನಲ್ಲಿ ವಿಡಿಯೋ ಮೂಲಕ ಮಾತನಾಡಿರುವ ಟಿಎಂಸಿ ಸಂಸದೆ ಮಹುವಾ ಮೊಯಿತ್ರಾ, ಇಂದು ಬಂಗಾಳದ ಎಲ್ಲಾ ನಮ್ಮ ಸಹೋದರಿಯರು ಮತ್ತು ತಾಯಂದಿರು ಅಮಿತ್ ಶಾ ಅವರು ಮಾತನಾಡಿದ್ದನ್ನು ನೋಡಿದ್ದಾರೆ. 2021ರಲ್ಲಿ ಪ್ರಧಾನಿ ಮೋದಿಯವರು 'ದೀದಿ ಓ ದೀದಿ' ಹೇಳಿದ್ದರ ಪರಿಣಾಮ ಏನಾಗಿತ್ತು ತಿಳಿದಿದೆ. ಇಂದು ಅಮಿತ್ ಶಾ ಏ ದೀದಿ, ಕಿವಿ ತೆರೆದು ಕೇಳು ಎಂದು ಬೆದರಿಕೆ ಹಾಕುತ್ತಿದ್ದಾರೆ. ಇದು ಅವರ ನಕಲಿ ನಾರಿಶಕ್ತಿ ನಾಟಕವನ್ನು ಬಯಲು ಮಾಡಿದೆ. ಅವರಿಗೆ ಬಂಗಾಳದ ಸಂಸ್ಕೃತಿ ಗೊತ್ತಿಲ್ಲ. ಬಂಗಾಳದಲ್ಲಿ ಮಹಿಳೆಯರನ್ನು ಯಾರೂ ಈ ರೀತಿ ಮಾತನಾಡಿಸಲ್ಲ. ಬಂಗಾಳದ ಮಹಿಳೆಯರು ಶಾ ಅವರ ಈ ಮಾತನ್ನು ಸಹಿಸುವುದಿಲ್ಲ ಎಂದು ಕಿಡಿಕಾರಿದ್ದಾರೆ.**





**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ತಮ್ಮ ಅಧಿಕೃತ ನಿವಾಸ ಕಾವೇರಿಯಲ್ಲಿ ತೆಂಗಿನ ನಾರಿನ ಮ್ಯಾಟ್ಗಳು ಮತ್ತು ಇತರೆ ಉತ್ಪನ್ನಗಳನ್ನು ದೆಹಲಿಗೆ ಸರಬರಾಜು ಮಾಡುವ ವಾಹನಕ್ಕೆ ಚಾಲನೆ ನೀಡಿದರು. ತೆಂಗಿನ ನಾರಿನ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾದ ನಟರಾಜ್ ಜಾನಕಿರಾಮ್, ಮುಖಂಡರಾದ ರವಿ ಬೋಸರಾಜು ಸೇರಿದಂತೆ ಅನೇಕರು ಈ ವೇಳೆ ಹಾಜರಿದ್ದರು.**

# ಧಾರವಾಡ ಆಕಾಶವಾಣಿ ಸ್ಥಳಾಂತರವಿಲ್ಲ: ಪ್ರಸಾರ ಭಾರತಿ ನಿರ್ಧಾರಕ್ಕೆ ತಡೆ

**ಧಾರವಾಡ, ಏ.22:** ಧಾರವಾಡ ಆಕಾಶವಾಣಿ ಪ್ರಾದೇಶಿಕ ಕೇಂದ್ರವನ್ನು ರಾಜಧಾನಿ ಬೆಂಗಳೂರಿಗೆ ಸ್ಥಳಾಂತರಿಸುವ ಪ್ರಸಾರ ಭಾರತಿಯ ನಿರ್ಧಾರಕ್ಕೆ ಕೊನೆಗೂ ತಡೆ ಸಿಕ್ಕಿದೆ. ಕೇಂದ್ರ ಸಚಿವ ಹಾಗೂ ಧಾರವಾಡ ಸಂಸದ ಪ್ರಲ್ಹಾದ್ ಜೋಶಿ ಅವರ ಮನವಿಗೆ ಸ್ಪಂದಿಸಿರುವ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಅವರು ಆಕಾಶವಾಣಿ ಕೇಂದ್ರವನ್ನು ಧಾರವಾಡದಲ್ಲಿಯೇ ಮುಂದುವರಿಸುವಂತೆ ಮಹತ್ವದ ಆದೇಶ ಹೊರಡಿಸಿದ್ದಾರೆ.

ಇತ್ತೀಚೆಗಷ್ಟೇ ಪ್ರಸಾರ ಭಾರತಿಯ ಸಕ್ಷಮ ಪ್ರಾಧಿಕಾರವು ಧಾರವಾಡದ ಆಕಾಶವಾಣಿ ಪ್ರಾದೇಶಿಕ ವಾರ್ತಾ ವಿಭಾಗವನ್ನು ಬೆಂಗಳೂರಿಗೆ ಸ್ಥಳಾಂತರಿಸಲು ನಿರ್ಧಾರ ಕೈಗೊಂಡಿತ್ತು. ದಶಕಗಳಿಂದಲೂ ಉತ್ತರ ಕರ್ನಾಟಕದ ಧ್ವನಿಯಾಗಿ, ಸಾಹಿತ್ಯ, ಕಲೆ ಮತ್ತು ಸಂಸ್ಕೃತಿಯ ವಾಹಕವಾಗಿ ಕಾರ್ಯನಿರ್ವಹಿಸುತ್ತಿದ್ದ ಈ ಕೇಂದ್ರವನ್ನು ದಿಢೀರನೆ ಶಿಫ್ಟ್ ಮಾಡುವ ನಿರ್ಧಾರಕ್ಕೆ ಈ ಭಾಗದ ಜನರಿಂದ, ಸಾಹಿತಿಗಳಿಂದ, ಕಲಾವಿದರಿಂದ ಹಾಗೂ ಕೇಳುಗರಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು. ಯಾವುದೇ ಕಾರಣಕ್ಕೂ ನಮ್ಮ ಹೆಮ್ಮೆಯ ಆಕಾಶವಾಣಿ ಕೇಂದ್ರವನ್ನು ಸ್ಥಳಾಂತರಿಸಬಾರದು ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದರು. ಜನರ ವಿರೋಧ ಹಾಗೂ ಜನಾಭಿಪ್ರಾಯವನ್ನು ಗಂಭೀರವಾಗಿ ಪರಿಗಣಿಸಿದ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಕ್ಷಣವೇ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವರಾದ ಅಶ್ವಿನಿ ವೈಷ್ಣವ್ ಅವರನ್ನು ಭೇಟಿಯಾಗಿ ಧಾರವಾಡ ಪ್ರಸಾರ ಭಾರತಿ ಕೇಂದ್ರದ ಸುದೀರ್ಘ ಇತಿಹಾಸ, ಅದರ ವಿಸ್ತಾರವಾದ ಕಾರ್ಯವ್ಯಾಪ್ತಿ ಮತ್ತು ಸಾಂಸ್ಕೃತಿಕ ನಗರಿ ಧಾರವಾಡದಲ್ಲಿಯೇ ಅದನ್ನು ಮುಂದುವರಿಸುವ ಅನಿವಾರ್ಯತೆ ಮತ್ತು ಅವಶ್ಯಕತೆಯ ಬಗ್ಗೆ ಸಚಿವರ ಗಮನಕ್ಕೆ ತಂದು ಮನವರಿಕೆ ಮಾಡಿಕೊಟ್ಟರು.

ಪ್ರಲ್ಹಾದ್ ಜೋಶಿ ಅವರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ಅಶ್ವಿನಿ ವೈಷ್ಣವ್ ಅವರು, ಪ್ರಸಾರ ಭಾರತಿಯ ಸ್ಥಳಾಂತರದ ಆದೇಶವನ್ನು ತಡೆಹಿಡಿದಿದ್ದಾರೆ. ಧಾರವಾಡ ಆಕಾಶವಾಣಿ ಪ್ರಾದೇಶಿಕ ಕೇಂದ್ರವು ಎಂದಿನಂತೆ ಧಾರವಾಡದಲ್ಲಿಯೇ ತನ್ನ ಕಾರ್ಯವನ್ನು ಮುಂದುವರಿಸಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ನನ್ನ ಮನವಿಗೆ ಸ್ಪಂದಿಸಿದ ಕೇಂದ್ರ ಸಚಿವರು ಧಾರವಾಡ ಆಕಾಶವಾಣಿ ಪ್ರಾದೇಶಿಕ ಕೇಂದ್ರವನ್ನು ಧಾರವಾಡದಲ್ಲಿಯೇ ಮುಂದುವರಿಸಲು ಆದೇಶಿಸಿದ್ದಾರೆ. ಇದಕ್ಕಾಗಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಅಶ್ವಿನಿ ವೈಷ್ಣವ್ ಅವರಿಗೆ ಉತ್ತರ ಕರ್ನಾಟಕದ ಜನತೆಯ ಪರವಾಗಿ ಧನ್ಯವಾದಗಳು" ಎಂದು ಪ್ರಲ್ಹಾದ್ ಜೋಶಿ ಕೃತಜ್ಞತೆ ಸಲ್ಲಿಸಿದ್ದಾರೆ.

# ಭಯೋತ್ಪಾದನೆ ವಿರುದ್ಧ ಒಗ್ಗಟ್ಟಿಗೆ ರಾಹುಲ್ ಕರೆ



**ನವದೆಹಲಿ, ಏ22:** ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮಡಿದವರಿಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬುಧವಾರ ಗೌರವ ಸಲ್ಲಿಸಿದರು, ಬಲಿಪಶುಗಳನ್ನು ಸ್ಮರಿಸಿದರು ಮತ್ತು ಭಾರತವು ಒಗ್ಗಟ್ಟಿನಿಂದ ಮತ್ತು ಭಯೋತ್ಪಾದನೆಯ ವಿರುದ್ಧ ದೃಢನಿಶ್ಚಯದಿಂದ ಇರುತ್ತದೆ ಎಂದು ಪ್ರತಿಪಾದಿಸಿದರು. ದಾಳಿಯ ವಾರ್ಷಿಕೋತ್ಸವವನ್ನು ಗುರುತಿಸುವ ಘ ನಲ್ಲಿ ಪೋಸ್ಟ್‌ನಲ್ಲಿ ಗಾಂಧಿಯವರು, "ಕಳೆದ ವರ್ಷ ಪಹಲ್ಗಾಮ್‌ನಲ್ಲಿ ನಡೆದ ಹೇಡಿತನದ ಭಯೋತ್ಪಾದಕ ದಾಳಿಯಲ್ಲಿ ಪ್ರಾಣ ಕಳೆದುಕೊಂಡ ಎಲ್ಲಾ ಧೈರ್ಯಶಾಲಿ ಹುತಾತ್ಮರಿಗೆ ನಾನು ನನ್ನ ಹೃತ್ಪೂರ್ವಕ ಗೌರವ ಸಲ್ಲಿಸುತ್ತೇನೆ" ಎಂದು ಹೇಳಿದರು. ಹೊಣೆಗಾರಿಕೆ ಮತ್ತು ಸ್ಮರಣೆಯನ್ನು ಒತ್ತಿ ಹೇಳುತ್ತಾ, "ಭಾರತವು ಅವರ ತ್ಯಾಗ ಅಥವಾ ಅವರ ಕುಟುಂಬಗಳ ನೋವನ್ನು ಎಂದಿಗೂ ಮರೆಯುವುದಿಲ್ಲ ಮತ್ತು ಈ ಘೋರ ಕೃತ್ಯಕ್ಕೆ ಕಾರಣರಾದವರನ್ನು ಎಂದಿಗೂ ಕ್ಷಮಿಸುವುದಿಲ್ಲ" ಎಂದು ಹೇಳಿದರು. ದುರಂತದ ಭಾವನಾತ್ಮಕ ಪರಿಣಾಮವನ್ನು ಪ್ರತಿಬಿಂಬಿಸುತ್ತಾ ಗಾಂಧಿಯವರು, "ಕ್ರೂರವಾಗಿ ದಹಿಸಲಾದ ಮುಗ್ಧ ಜೀವಗಳ ನೆನಪು ಇಂದಿಗೂ ನಮ್ಮ ಹೃದಯಗಳನ್ನು ಅಲುಗಾಡಿಸುತ್ತಲೇ ಇದೆ. ಹುತಾತ್ಮರ ಕುಟುಂಬಗಳ ದುಃಖವು ಇಡೀ ರಾಷ್ಟ್ರದ ದುಃಖವಾಗಿದೆ" ಎಂದು ಅವರು ಹೇಳಿದರು. "ಈ ಮಣ್ಣಿನ ಪುತ್ರರ ತ್ಯಾಗ ಭಾರತದ ಆತ್ಮದಲ್ಲಿ ಶಾಶ್ವತವಾಗಿ ಉಳಿಯುತ್ತದೆ" ಎಂದು ಅವರು ಹೇಳಿದರು. ದೇಶದ ಸಾಮೂಹಿಕ ನಿಲುವನ್ನು ಪುನರುಚ್ಚರಿಸುತ್ತಾ, ಕಾಂಗ್ರೆಸ್ ನಾಯಕಿ, "ಭಯೋತ್ಪಾದನೆ ಮತ್ತು ಹಿಂಸಾಚಾರದ ವಿರುದ್ಧ ಇಡೀ ದೇಶವು ಇತ್ತು, ಇದೆ, ಮತ್ತು ಯಾವಾಗಲೂ ಒಗ್ಗಟ್ಟಿನಿಂದ ಇರುತ್ತದೆ" ಎಂದು ಹೇಳಿದರು. "ದ್ವೇಷ ಮತ್ತು ಭಯವನ್ನು ಹರಡುವ ಶಕ್ತಿಗಳ ಮುಂದೆ ಭಾರತ ಎಂದಿಗೂ ತಲೆಬಾಗುವುದಿಲ್ಲ – ನಾವು ಇನ್ನೂ ಹೆಚ್ಚಿನ ಶಕ್ತಿ, ಏಕತೆ ಮತ್ತು ದೃಢಸಂಕಲ್ಪದಿಂದ ಅವರ ವಿರುದ್ಧ ನಿಲ್ಲುತ್ತೇವೆ" ಎಂದು ಹೇಳುವ ಮೂಲಕ ಅವರು ಸ್ಥಿತಿಸ್ಥಾಪಕತ್ವದ ಅಗತ್ಯವನ್ನು ಒತ್ತಿ ಹೇಳಿದರು. ವಾರ್ಷಿಕೋತ್ಸವವನ್ನು ವಿವಿಧ ರಾಜಕೀಯ ಪಕ್ಷಗಳ ನಾಯಕರಿಂದ ಗೌರವ ಸಲ್ಲಿಸಲಾಯಿತು, ಅನೇಕರು ಬಲಿಪಶುಗಳ ಕುಟುಂಬಗಳೊಂದಿಗೆ ಒಗ್ಗಟ್ಟನ್ನು ಮತ್ತು ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಎದುರಿಸಲು ರಾಷ್ಟ್ರದ ಬದ್ಧತೆಯನ್ನು ಪುನರುಚ್ಚರಿಸಿದರು.

# ಮೋದಿ ಭಯೋತ್ಪಾದಕ ಹೇಳಿಕೆ: ಖರ್ಗೆ ದೇಶದ ಕ್ಷಮೆ ಕೇಳಬೇಕು



**ಬೆಂಗಳೂರು, ಏ.22:** ಪ್ರಧಾನಿ ನರೇಂದ್ರ ಮೋದಿ ಅವರನ್ನು ಭಯೋತ್ಪಾದಕ ಎಂದಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ದೇಶದ ಜನರ ಕ್ಷಮೆ ಕೇಳಬೇಕು ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ಒತ್ತಾಯಿಸಿದ್ದಾರೆ. ಎಕ್ಸ್‌ನಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಪ್ರಧಾನಿಯನ್ನು ಹೀಗೆ ಕರೆಯುವುದು ದುರಹಂಕಾರದ ಪರಮಾವಧಿ ಮಾತ್ರವಲ್ಲ. ನಿಮ್ಮ ಕೊಳಕು ಮತ್ತು ವಿಷಕಾರಿ ಮನಸ್ಥಿತಿಯನ್ನು ತೋರಿಸುತ್ತದೆ ಎಂದಿದ್ದಾರೆ.

ದೇಶದ ಜನರು ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿ ಹುದ್ದೆಯಲ್ಲಿ ಕೂರಿಸಿದ್ದಾರೆ. ಮೋದಿ ಅವರನ್ನು ತೆಗಳುವುದು, ದೇಶದ ಕೋಟ್ಯಂತರ ಜನರಿಗೆ ಅವಮಾನ ಮಾಡಿದಂತೆ. ಚುನಾವಣೆ ಬಂದಾಗಲೆಲ್ಲಾ ಕಾಂಗ್ರೆಸ್ ನಾಯಕರು ಮೋದಿ ಅವರ ವಿರುದ್ಧ ಇಂತಹ ಕೀಳು ಭಾಷೆ ಬಳಸುತ್ತಾರೆ. ಅದಕ್ಕೆ ಜನರು ತಕ್ಕಪಾಠ ಕಲಿಸುತ್ತಲೇ ಬಂದಿದ್ದಾರೆ. ಆದರೂ ಕಾಂಗ್ರೆಸ್‌ನವರು ತಮ್ಮ ತಪ್ಪನ್ನು ತಿದ್ದಿಕೊಳ್ಳುತ್ತಿಲ್ಲ ಎಂದಿದ್ದಾರೆ.

**ಎಐಸಿಸಿ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸಿ:** ಮೋದಿ ಅವರು ಭಯೋತ್ಪಾದಕ ಆಗಿದ್ದರೆ ಕೋಟ್ಯಂತರ ಜನರು ಬಿಜೆಪಿಗೆ ಮತ ಹಾಕುತ್ತಿರಲಿಲ್ಲ. ಅವರು ಸತತ ಮೂರನೇ ಬಾರಿಗೆ ಪ್ರಧಾನಿ ಆಗುತ್ತಿರಲಿಲ್ಲ. ಅವರನ್ನು ಬೆಂಬಲಿಸಿದ ಕೋಟ್ಯಂತರ ಜನರನ್ನು ಮಲ್ಲಿಕಾರ್ಜುನ ಖರ್ಗೆ ಅವರು ಅವಮಾನಿಸಿದ್ದಾರೆ. ಕಾಂಗ್ರೆಸ್ ಪಕ್ಷವು ಕೂಡಲೇ ಅವರನ್ನು ಎಐಸಿಸಿ ಅಧ್ಯಕ್ಷ ಸ್ಥಾನದಿಂದ ಕಿತ್ತುಹಾಕಬೇಕು ಎಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಒತ್ತಾಯಿಸಿದ್ದಾರೆ.

# ಸಾರಿಗೆ ನಿಗಮಗಳು ಸಂಕಷ್ಟದಲ್ಲಿ ವಿಜಯೇಂದ್ರಗೆ ಸಚಿವರ ತಿರುಗೇಟು



**ಬೆಂಗಳೂರು, ಏ.22:** ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರಂಟಿ ಯೋಜನೆಗಳಲ್ಲಿ ಒಂದಾಗಿರುವ 'ಶಕ್ತಿ ಯೋಜನೆ'ಯಿಂದ ನಾಲ್ಕು ಸಾರಿಗೆ ನಿಗಮಗಳು ಸಂಕಷ್ಟದಲ್ಲಿವೆ ಎಂಬ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಆರೋಪಕ್ಕೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿರುಗೇಟು ಕೊಟ್ಟಿದ್ದಾರೆ. ಅಧಿಕಾರದ ಅಮಲಿನಲ್ಲಿ ನೌಕರರ ಹೊಟ್ಟೆಯ ಮೇಲೆ ಹೊಡೆದ ಬಿಜೆಪಿಯವರು, ಇಂದು ಯಾವ ಮುಖ ಇಟ್ಟುಕೊಂಡು ಉಪದೇಶ ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸಾರಿಗೆ ನೌಕರರ ಮೇಲಿನ ನಕಲಿ ಕಾಳಜಿಯ ಮುಖವಾಡವನ್ನು ಕಳಚಿಡಿ. ನಿಮಗೆ ವಿಷಯದ ಅರಿವಿಲ್ಲ, ನಿಮಗಿರುವುದು ಕೇವಲ ಪ್ರಚಾರದ ಹಪಾಹಪಿ. ಒಂದು ತಿಂಗಳ ಕಾಲ ಸಾರಿಗೆ ನೌಕರರ ಮುಷ್ಕರ ನಡೆಯುವಂತೆ ಮಾಡಿದ ಕೀರ್ತಿ ಬಿಜೆಪಿಗೆ ಸಲ್ಲುತ್ತದೆ ಎಂದಿದ್ದಾರೆ.

ಸಾರಿಗೆ ಸಂಸ್ಥೆ ಇಂದಿನ ಸ್ಥಿತಿಗೆ ನಿಮ್ಮ ತಂದೆ ಬಿ.ಎಸ್. ಯಡಿಯೂರಪ್ಪ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಕಾಲದ ಅದಕ್ಷ ಆಡಳಿತವೇ ಕಾರಣ. ನಿಮ್ಮ ಪಾಪದ ರಾಶಿಯನ್ನು ಪದೇಪದೇ ಅಗೆದು ತೆಗೆಯಬೇಕಾಗಿರುವುದು ಈ ರಾಜ್ಯದ ದುರಂತ ಎಂದು ತರಾಟೆಗೆ ತೆಗೆದುಕೊಂಡರು.

ಮುಂದಾದರೂ ಜನರನ್ನು ದಾರಿ ತಪ್ಪಿಸುವ ಪೊಳ್ಳು ಹೇಳಿಕೆ ನೀಡುವುದನ್ನು ನಿಲ್ಲಿಸಿ. ನಿಮ್ಮ ಕಾಲದಲ್ಲಿ ಸಂಸ್ಥೆ ಅಧಃಪತನಕ್ಕೆ ಈಡಾಗಿದ್ದು, ಮೊದಲು ಈ ಪ್ರಶ್ನೆಗಳಿಗೆ ಉತ್ತರಿಸಿ ಎಂದು ಬಿಜೆಪಿಯ ಕಾರ್ಯಗಳ ಪಟ್ಟಿಯನ್ನು ತೆರೆದಿಟ್ಟಿದ್ದಾರೆ.

### ಇಂದು ಎಸ್‌ಎಸ್‌ಎಲ್‌ಸಿ ಫಲಿತಾಂಶ

**ಬೆಂಗಳೂರು: ಏ.22: ಈ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಗುರುವಾರ ಪ್ರಕಟವಾಗಲಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ನಾಳೆ ಮಧ್ಯಾಹ್ನ 12 ಗಂಟೆಗೆ ಸುದ್ದಿಗೋಷ್ಠಿ ನಡೆಸಿ ಫಲಿತಾಂಶ ಪ್ರಕಟಿಸಲಾಗುತ್ತದೆ. ಸುದ್ದಿಗೋಷ್ಠಿಯ ಬಳಿಕ ಇಲಾಖೆ ವೆಬ್‌ಸೈಟ್‌ನಲ್ಲಿ ಫಲಿತಾಂಶವನ್ನು ಪ್ರಕಟಿಸಲಾಗುತ್ತದೆ. ಕೋರ್ಟ್ ಆದೇಶದಂತೆ ಈ ಬಾರಿ ಹಿಂದಿ ಭಾಷೆಯ ಪರೀಕ್ಷೆಗೆ ಅಂಕ ನೀಡಲಾಗಿದೆ. ಮುಂದಿನ ವರ್ಷದಿಂದ ಗ್ರೇಡ್ ವ್ಯವಸ್ಥೆ ನಿಯಮ ಜಾರಿಗೆ ತೀರ್ಮಾನ ಮಾಡಲಾಗಿದೆ. ಹಿಂದಿಗೆ ಅಂಕ ನೀಡುವ ಬಗ್ಗೆ ಸಿಎಂ ಸಿದ್ದರಾಮಯ್ಯನವರ ಗಮನಕ್ಕೆ ತರಲಾಗಿದೆ ಎಂದು ವಿವರಿಸಿದರು.**

# ಹಿಂದಿ ಭಾಷೆ ಪರೀಕ್ಷೆಯಲ್ಲಿ ಗ್ರೇಡ್ ಬದಲು ಅಂಕ: ಮಧು ಬಂಗಾರಪ್ಪ



**ಶಿವಮೊಗ್ಗ, ಏ.22:** ಈ ಬಾರಿಯ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆ ಹಿಂದಿ ವಿಷಯಕ್ಕೆ ಗ್ರೇಡ್ ನೀಡುವ ಬದಲಾಗಿ ಅಂಕಗಳನ್ನೇ ನೀಡಲಾಗುವುದು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಬಂಗಾರಧಾಮದಲ್ಲಿ ತಾಯಿ ಶಕುಂತಲಾ ಬಂಗಾರಪ್ಪ ಅವರ ಪುಣ್ಯಸ್ಮರಣೆ ಅಂಗವಾಗಿ ಸಮಾಧಿಗೆ ಬುಧವಾರ ಪೂಜೆ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಹಿಂದಿ ವಿಷಯಕ್ಕೆ ಅಂಕಗಳ ಬದಲಾಗಿ ಗ್ರೇಡ್ ನೀಡಲು ಸರ್ಕಾರ ಈ ಮೊದಲು ನಿರ್ಧರಿಸಿತ್ತು. ಆದರೆ, ಈ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್, ಅಂಕಗಳನ್ನೇ ನೀಡುವಂತೆ ಆದೇಶಿಸಿತ್ತು. "ನ್ಯಾಯಾಲಯದ ಆದೇಶವನ್ನು ಸರ್ಕಾರ ಸ್ವಾಗತಿಸುತ್ತದೆ. ಅದರಂತೆ ಈ ವರ್ಷ ಅಂಕಗಳನ್ನೇ ನೀಡಲಾಗುವುದು. ಮುಂದಿನ ವರ್ಷ ಗ್ರೇಡ್ ನೀಡುವ ಕುರಿತು ಸರ್ಕಾರ ಮರು ಚಿಂತನೆ ನಡೆಸಿ ನಿರ್ಧರಿಸಲಿದೆ ಎಂದು ತಿಳಿಸಿದ್ದಾರೆ.

# ಚುನಾವಣೆ: ಮತ ಚಲಾಯಿಸಲು ತೆರಳಿದ ಲಕ್ಷಾಂತರ ತಮಿಳರು

ಬೆಂಗಳೂರು, ಏ.22: ತಮಿಳುನಾಡಿನಲ್ಲಿ ಗುರುವಾರ (ಏ.23) ಚುನಾವಣೆ ನಡೆಯಲಿದ್ದು ಮತದಾನ ಮಾಡಲು ನಗರದಲ್ಲಿನ ಲಕ್ಷಾಂತರ ತಮಿಳು ಭಾಷಿಕರು ಸ್ವಂತ ಊರಿನತ್ತ ತೆರಳಿದ ಕಾರಣ ನಗರದೆಲ್ಲೆಡೆ ಬುಧವಾರ ಜನದಟ್ಟಣೆ ಕಂಡುಬಂತು. ನಗರದ ಪ್ರಮುಖ ಪ್ರದೇಶಗಳಾದ ಡೇರಿ ಸರ್ಕಲ್, ವಿಲ್ಸನ್ ಗಾರ್ಡನ್, ಮೈಸೂರು ರಸ್ತೆಯ ಸ್ಯಾಟಲೈಟ್ ಬಸ್ ನಿಲ್ದಾಣ ಹಾಗೂ ಹೊಸೂರು ರಸ್ತೆಯಲ್ಲಿ ಭಾರಿ ಜನಸಂದಣಿ ಉಂಟಾಗಿತ್ತು. ತಮಿಳುನಾಡು ಕಡೆಗೆ ತೆರಳುವ ಬಹುತೇಕ ಬಸ್‌ಗಳು ಭರ್ತಿಯಾಗಿರುವ ದೃಶ್ಯ ಕಂಡಿತು. ಪ್ರಯಾಣಿಕರ ದಟ್ಟಣೆ ಹೆಚ್ಚಿರುವುದರಿಂದ ರಾತ್ರಿ ವೇಳೆಯಲ್ಲಿಯೂ ಹೆಚ್ಚುವರಿ ಬಸ್‌ಗಳನ್ನು ಸೇವೆಗೆ ಒದಗಿಸಲಾಯಿತು. ಸುಮಾರು ಒಂದುವರೆ ಲಕ್ಷದಷ್ಟು ಮಂದಿ ಬೆಂಗಳೂರಿನಿಂದ ತಮಿಳುನಾಡಿಗೆ ಪ್ರಯಾಣಿಸುತ್ತಿದ್ದಾರೆ ಎಂದು ಅಂದಾಜಿಸಲಾಗಿದೆ.

# ಸರ್ಕಾರದ ಅನ್ನಭಾಗ್ಯ ಯೋಜನೆಗೆ ಬಸವಣ್ಣನ ಅನ್ನದಾಸೋಹ ಪ್ರೇರಣೆ: ಈಶ್ವರ ಖಂಡ್ರೆ

**ಬೆಂಗಳೂರು, ಏ.22:** ರಾಜ್ಯ ಸರ್ಕಾರ ಜಾರಿಗೆ ತಂದಿರುವ ಅನ್ನಭಾಗ್ಯ ಯೋಜನೆಗೆ ವಿಶ್ವಗುರು ಬಸವಣ್ಣನವರ ದಾಸೋಹ ಪ್ರೇರಣೆಯಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದ್ದಾರೆ.

ಭಾಲ್ಕಿಯ ಹಿರೇಮಠದಲ್ಲಿ ನಡೆಯುತ್ತಿರುವ ಡಾ. ಬಸವಲಿಂಗಪಟ್ಟದ್ದೇವರ ಅಮೃತಮಹೋತ್ಸವ ಹಾಗೂ ಲಿಂ.ಚನ್ನಬಸವಪಟ್ಟದ್ದೇವರ 27ನೇ ಸಂಸ್ಮರಣೋತ್ಸವದಲ್ಲಿ ಮಾತನಾಡಿದ ಅವರು, ಬಸವಣ್ಣನವರು ಕಾಯಕವೇ ಕೈಲಾಸ ಎಂಬ ಸಂದೇಶದೊಂದಿಗೆ ದುಡಿಯಬೇಕು, ದುಡಿದು ಗಳಿಸಬೇಕು, ಗಳಿಸಿದ್ದನ್ನು ಉಳಿಸಬೇಕು, ಉಳಿಸಿದ್ದನ್ನು ದಾಸೋಹದ ಮೂಲಕ ಸಮಾಜಕ್ಕೆ ಮರಳಿ ನೀಡಬೇಕು ಎಂದು ಸಾರಿದರು. ಅವರ ಜಯಂತಿಯನ್ನು ಈ ಕಾರ್ಯಕ್ರಮದ ಜೊತೆಗೆಯಲ್ಲಿ ಆಚರಿಸುತ್ತಿರುವುದು ಅರ್ಥಪೂರ್ಣ ಎಂದರು.

ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಬಸವಾದಿ ಪ್ರಮಥರು ಅನುಭವಮಂಟಪದಲ್ಲಿ ಎಲ್ಲ, ಜಾತಿ ಜನಾಂಗದವರಿಗೂ ಸಮಾನ ಅವಕಾಶ ನೀಡಿದ್ದರು. ಇಲ್ಲಿ ಲಿಂಗತಾರತಮ್ಯವೂ ಇರಲಿಲ್ಲ, ಅಕ್ಕಮಹಾದೇವಿ, ಸತ್ಯಕ್ಕ, ಐದಕ್ಕಿ ಲಕ್ಕಮ್ಮ, ನೀಲಾಂಬಿಕೆ, ಮುಕ್ತಾಯಕ್ಕ ಮೊದಲಾದವರು ತಮ್ಮ ವಿಚಾರಧಾರೆಗಳನ್ನು ಮುಂಡಿಸುತ್ತಿದ್ದರು. ಇದು ಮಹಿಳಾ ಸಬಲೀಕರಣದ ಸಂಕೇತವಾಗಿದ್ದು, ನಮ್ಮ ಸರ್ಕಾರ ಗೃಹಲಕ್ಷ್ಮೀ, ಶಕ್ತಿ ಯೋಜನೆಯ ಮೂಲಕ ಮುಂದುವರಿಸಿದೆ ಎಂದರು.

ಇಂದು ನಾವು ನಡೆದಾಡುವ ದೇವರು ಎಂದೇ ಖ್ಯಾತರಾಗಿದ್ದ ಶತಾಯುಷಿ ಶ್ರೀ ಚನ್ನಬಸವ ಪಟ್ಟದ್ದೇವರ 27ನೇ ಸಂಸ್ಮರಣೋತ್ಸವ ನಡೆಸುತ್ತಿದ್ದೇವೆ. ಅವರು, ಕ್ರಾಂತಿಪುರುಷರು. ಮುಟ್ಟಿತಟ್ಟಿಯಂತಹ ಅಸ್ಪೃಶ್ಯತೆಯ ಆಚರಣೆ ತೊಡೆದುಹಾಕಲು ನಮ್ಮ ತಂದೆ ಲಿಂಗೈಕ್ಯ ಲೋಕನಾಯಕ ಡಾ. ಭೀಮಣ್ಣ ಖಂಡ್ರೆ ಅವರಿಗೆ ಬೆಂಬಲವಾಗಿ ನಿಂತು ಭಾಲ್ಕೇಶ್ವರ ದೇವಾಲಯಕ್ಕೆ ಅಶೋಕನಗರ ನಿವಾಸಿಗಳ ಪ್ರವೇಶಕ್ಕೆ ಅವಕಾಶ ಕಲ್ಪಿಸಿದರು. ಇಂದು ನಾವು ಕಾಣುತ್ತಿರುವ ಶಿವಲಿಂಗದಾಕಾರದ ಅನುಭವ ಮಂಟಪದ ನಿರ್ಮಾದ ಶ್ರೇಯಸ್ಸು ಚನ್ನಬಸವಪಟ್ಟದ್ದೇವರಿಗೆ ಸಲ್ಲುತ್ತದೆ ಎಂದರು.

ನಿಜಾಮರ ಆಳ್ವಿಕೆಯ ಕಾಲದಲ್ಲಿ ಬೀದರ್ ನಲ್ಲಿ ಕನ್ನಡ ಕಲಿಸಲು ಅವಕಾಶ ಇರಲಿಲ್ಲ. ಆಗ ಹೊರಗೆ ಉರ್ದು ಫಲಕ ಹಾಕಿ ಒಳಗೆ ಕನ್ನಡ ಕಲಿಸಲು ಶ್ರಮಿಸಿದ ಪಟ್ಟದ್ದೇವರು, ಬೀದರ್ ಮಕ್ಕಳಿಗೆ ವಚನ ಸಾರ ತಿಳಿಯುವಂತೆ ಮಾಡಿದ್ದರು. ತಮ್ಮ ದೀಕ್ಷಾ ಗುರು ಚನ್ನಬಸವ ಪಟ್ಟದ್ದೇವರ ಶತಮಾನೋತ್ಸವವನ್ನು ಭೀಮಣ್ಣ ಖಂಡ್ರೆ ಅವರು ಅದ್ದೂರಿಯಾಗಿ ನಡೆಸಿದ್ದರು, ಆಗ ಅಂದಿನ ರಾಷ್ಟ್ರಪತಿ ಡಾ. ಶಂಕರದಯಾಳ್ ಶರ್ಮಾ ಆಗಮಿಸಿದ್ದರು. ಇಂದಿನ ಪೀಠಾಧಿಪತಿಗಳ ಅಮೃತ ಮಹೋತ್ಸವಕ್ಕೆ ಉಪ ರಾಷ್ಟ್ರಪತಿಗಳು ಆಗಮಿಸಿರುವುದು ಯೋಗಾಯೋಗ ಎಂದು ಈಶ್ವರ ಖಂಡ್ರೆ ಹೇಳಿದರು.

ನಾಡೋಜ ಬಸವಲಿಂಗ ಪಟ್ಟದ್ದೇವರು, ಮಾಸಿಕ ಶರಣ ಸಂಗಮ, ಶಿವಾನುಭವ ಪ್ರವಚನ, ವಚನ ಗಾಯನದಂತಹ ಕಾರ್ಯಕ್ರಮಗಳ ಮೂಲಕ ಶರಣರ ವಚನಗಳ ಪ್ರಚಾರ ಪ್ರಸಾರ ಮಾಡುತ್ತಿದ್ದಾರೆ, ಸರಳ ಸಾಮೂಹಿಕ ವಿವಾಹಗಳನ್ನು ಆಯೋಜಿಸುವ ಮೂಲಕ ಬಡವರರು ಸಾಲದ ಸುಳಿಗೆ ಸಿಲುಕದಂತೆ ರಕ್ಷಿಸಿದ್ದಾರೆ. ಇವರ ಸಾಧನೆಗಳನ್ನು ಗುರುತಿಸಿ ಹಂಪಿ ವಿಶ್ವವಿದ್ಯಾಲಯ ಅವರಿಗೆ ನಾಡೋಜ ಗೌರವ ನೀಡಿದೆ. ಅವರು ನೂರ್ಕಾಲ ಬಾಳಲಿ ನಮಗೆ ಮಾರ್ಗದರ್ಶನ ನೀಡಲಿ ಎಂದರು.

ಭಾಲ್ಕಿಯ ಮಣ್ಣಿನ ಮಗನಾದ ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಯತ್ನದ ಫಲವಾಗಿ ಕಲ್ಯಾಣ ಕರ್ನಾಟಕಕ್ಕೆ 371ಜೆ ಸಾಂವಿಧಾನಿಕ ತಿದ್ದುಪಡಿಯೊಂದಿಗೆ ವಿಶೇಷ ಸ್ಥಾನಮಾನ ದೊರಕಿದೆ. ಇಂದು ಅದು ಕಾಯಿದೆಯಾಗಿದ್ದು ನಮ್ಮ ಭಾಗದ ಸರ್ವಾಂಗೀಣ ಅಭಿವೃದ್ಧಿಗೆ ಸಹಕಾರಿಯಾಗಿದೆ ಎಂದರು.

ಬುದ್ಧ, ಬಸವ, ಅಂಬೇಡ್ಕರ್ ಅವರ ಅನುಯಾಯಿಯಾದ ಮಲ್ಲಿಕಾರ್ಜುನ ಖರ್ಗೆ ಅವರು, ತಮ್ಮ ಜೀವನದ ಉದ್ದಕ್ಕೂ ವಂಚಿತರಿಗೆ, ನೊಂದವರಿಗೆ ನ್ಯಾಯದೊರಕಿಸಲು ಹಾಗೂ ಸರ್ವರ ಸಮಾನತೆಗಾಗಿ ಶ್ರಮಿಸುತ್ತಿದ್ದಾರೆ, ಅವರು ಒಬ್ಬ ಮುತ್ಸದ್ದಿ ರಾಜಕಾರಣಿ ಎಂದು ಬಣ್ಣಿಸಿದರು.

ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್, ಸಚಿವರಾದ ರಹೀಂಖಾನ್, ಭಾಲ್ಕಿ ಹಿರೇಮಠದ ಡಾ. ಬಸವಲಿಂಗ ಪಟ್ಟದ್ದೇವರು ಮೊದಲಾದವರು ಪಾಲ್ಗೊಂಡಿದ್ದರು.

**ಭಾಲ್ಕಿ ಹಿರೇಮಠದಲ್ಲಿ ಡಾ. ಬಸವಲಿಂಗಪಟ್ಟದ್ದೇವರ ಅಮೃತ ಮಹೋತ್ಸವದಲ್ಲಿ ಭಾಗಿ**

**ನಿಜಾಮರ ಆಳ್ವಿಕೆಯಲ್ಲಿ ಕನ್ನಡ ಕಲಿಸಲು ಶ್ರಮಿಸಿದ್ದ ಚೇತನ**



# ತಮಿಳುನಾಡು ವಿಧಾನಸಭೆ ಚುನಾವಣೆ: ಇಂದು ಮತದಾನ

## ಡಿಎಂಕೆ, ಎಐಎಡಿಎಂಕೆ ನಡುವೇ ನೇರ ಸ್ಪರ್ಧೆ; ಸಂಚಲನ ಮೂಡಿಸಲಿದ್ದಾರೆಯೇ ವಿಜಯ್?

**ನವದೆಹಲಿ, ಏ.22:** ತಮಿಳುನಾಡು ವಿಧಾನಸಭೆ ಚುನಾವಣೆಗೆ ಗುರುವಾರ ಮತದಾನ ನಡೆಯಲಿದ್ದು, ರಾಜ್ಯದ ಒಟ್ಟು 234 ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ಸರ್ಕಾರ ರಚನೆಗೆ ಕನಿಷ್ಠ 118 ಸ್ಥಾನಗಳು ಅಗತ್ಯವಿದ್ದು ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ.

ಚುನಾವಣೆಯು ಡಿಎಂಕೆ ಮತ್ತು ಕಾಂಗ್ರೆಸ್ ನೇತೃತ್ವದ ಇಂಡಿಯಾ ಒಕ್ಕೂಟ ಮತ್ತು ಎಐಎಡಿಎಂಕೆ ಮತ್ತು ಬಿಜೆಪಿ ನೇತೃತ್ವದ ಎನ್‌ಡಿಎ ಒಕ್ಕೂಟದ ನಡುವೆ ನೇರ ಸ್ಪರ್ಧೆ ನಡೆಯಲಿದೆ. ಇದೇ ಮೊದಲ ಬಾರಿಗೆ ತಮಿಳು ಜನಪ್ರಿಯ ನಟ ಟಿವಿಕೆ ಪಕ್ಷ ಕಟ್ಟಿ ಸ್ವತಂತ್ರವಾಗಿ ಸ್ಪರ್ಧಿಸಿ ಚುನಾವಣಾ ಕಣಕ್ಕೆ ಧುಮುಕಿದ್ದಾರೆ. 234 ವಿಧಾನಸಭಾ ಕ್ಷೇತ್ರಗಳಲ್ಲಿ 4,000 ಕ್ಕೂ ಹೆಚ್ಚು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮೇ 4ರಂದು ಪಂಚರಾಜ್ಯಗಳ ಫಲಿತಾಂಶ ಪ್ರಕಟವಾಗಲಿದೆ.

ರಾಜ್ಯದಲ್ಲಿ ಅಂದಾಜು 6.2 ಕೋಟಿ ಮತದಾರರು ಮತದಾನಕ್ಕೆ ಅರ್ಹರಾಗಿದ್ದಾರೆ. ಇವರಲ್ಲಿ ಸುಮಾರು 3.1 ಕೋಟಿ ಮಹಿಳಾ ಮತದಾರರು ಹಾಗೂ 3 ಕೋಟಿ ಪುರುಷ ಮತದಾರರು ಇದ್ದಾರೆ. ಒಟ್ಟು 88,000ಕ್ಕೂ ಹೆಚ್ಚು ಮತಗಟ್ಟೆಗಳು ಸ್ಥಾಪನೆಯಾಗಿದ್ದು, ಪ್ರತಿ ಮತಗಟ್ಟೆಯಲ್ಲಿ ಸರಾಸರಿ 800?900 ಮತದಾರರು ಮತ ಚಲಾಯಿಸಲಿದ್ದಾರೆ.

ಪ್ರತಿ ಕ್ಷೇತ್ರದಲ್ಲಿ ಸರಾಸರಿ 12–15 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದು, ಕೆಲವು ಕ್ಷೇತ್ರಗಳಲ್ಲಿ ಇದು 20ಕ್ಕಿಂತ ಹೆಚ್ಚು ಆಗಿದೆ. ಭದ್ರತಾ ಮತ್ತು ಮೇಲ್ವಿಚಾರಣೆ ವ್ಯವಸ್ಥೆಗೆ 1.5 ಲಕ್ಷಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿ ನಿಯೋಜನೆಗೊಂಡಿದ್ದು, 20,000ಕ್ಕೂ ಹೆಚ್ಚು ಸಂವೇದನಾಶೀಲ ಮತಗಟ್ಟೆಗಳಲ್ಲಿ ಹೆಚ್ಚುವರಿ ಪೊಲೀಸ್ ಕಾವಲು ಏರ್ಪಡಿಸಲಾಗಿದೆ. 45,000 ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿಗಾವಹಿಸಲಾಗುತ್ತದೆ.

ಚುನಾವಣಾ ಕಣದಲ್ಲಿರುವ ಪ್ರಮುಖ ಪಕ್ಷಗಳು ಮತದಾರರನ್ನು ಸೆಳೆಯಲು ಭರಪೂರ ಕೊಡುಗೆಗಳನ್ನು ಘೋಷಿಸಿವೆ. ಆಡಳಿತಾರೂಢ ಡಿಎಂಕೆ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಮುಂದುವರಿಕೆ, ಶಿಕ್ಷಣ ಮತ್ತು ಆರೋಗ್ಯಕ್ಕೆ ಆದ್ಯತೆ ನೀಡುವ ಭರವಸೆ ನೀಡಿದೆ. ಮತ್ತೊಂದೆಡೆ ಎಐಎಡಿಎಂಕೆ ನೇರ ನಗದು ವರ್ಗಾವಣೆ, ಅಗತ್ಯ ವಸ್ತುಗಳ ಮೇಲಿನ ಸಬ್ಸಿಡಿ ಮತ್ತು ಕಾನೂನು ಸುವ್ಯವಸ್ಥೆಯ ಸುಧಾರಣೆಯ ವಾಗ್ದಾನ ಮಾಡಿದೆ. ಈ ನಡುವೆ, ಭ್ರಷ್ಟಾಚಾರ ಮುಕ್ತ ಆಡಳಿತ ಮತ್ತು ಯುವಜನತೆಗೆ ಉದ್ಯೋಗದ ಭರವಸೆಯೊಂದಿಗೆ ನಟ ವಿಜಯ್ ಕಣಕ್ಕಿಳಿದಿದ್ದು, ಅತಂತ್ರ ಅಥವಾ ಜಿದ್ದಾಜಿದ್ದಿನ ಪೈಪೋಟಿ ಇರುವ ಕ್ಷೇತ್ರಗಳಲ್ಲಿ ಇವರ ಮತ ಹಂಚಿಕೆ ನಿರ್ಣಾಯಕವಾಗುವ ಸಾಧ್ಯತೆಯಿದೆ.

ತಮಿಳುನಾಡಿನ ರಾಜಕಾರಣದಲ್ಲಿ ಯಾವಾಗಲೂ ಮಹಿಳೆಯರು ಮತ್ತು ಯುವ ಮತದಾರರು ಕಿಂಗ್ ಮೇಕರ್‌ಗಳಾಗಿ ಹೊರಹೊಮ್ಮಿದ್ದಾರೆ. ಈ ಬಾರಿಯೂ ಮಹಿಳಾ ಮತದಾರರನ್ನು ಸೆಳೆಯಲು ಗ್ಯಾಸ್ ಸಿಲಿಂಡರ್ ಸಬ್ಸಿಡಿ ಮತ್ತು ಆರ್ಥಿಕ ನೆರವಿನಂತಹ ಯೋಜನೆಗಳನ್ನು ಪಕ್ಷಗಳು ಘೋಷಿಸಿವೆ. ಇನ್ನು ಹೊಸ ಮತದಾರರನ್ನು ಸೆಳೆಯಲು ಸೋಷಿಯಲ್ ಮೀಡಿಯಾ ಮತ್ತು ಡಿಜಿಟಲ್ ಪ್ರಚಾರವನ್ನು ಅತೀ ಹೆಚ್ಚಾಗಿ ಬಳಸಿಕೊಳ್ಳಲಾಗಿದೆ. ನಾಳೆಯ ಮತದಾನದ ಪ್ರಮಾಣ ಹೆಚ್ಚಾದಷ್ಟು ಫಲಿತಾಂಶದಲ್ಲಿ ಅಚ್ಚರಿಗಳು ಕಾದಿರಬಹುದು ಎನ್ನಲಾಗುತ್ತಿದೆ. ಮಹಿಳೆಯರ ಬೆಂಬಲ ಯಾರಿಗೆ ಸಿಗಲಿದೆ? ನಟ ವಿಜಯ್ ಸಿನಿಮಾರಂಗದಂತೆ ರಾಜಕೀಯದಲ್ಲೂ ಮಿಂಚುತ್ತಾರೆಯೇ ಎಂಬ ಪ್ರಶ್ನೆಗೆ ಮೇ 4 ರಂದು ಉತ್ತರ ಸಿಗಲಿದೆ.

ಈ ಚುನಾವಣೆಯು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ನೇತೃತ್ವದ ಡಿಎಂಕೆ ಮತ್ತು ವಿರೋಧ ಪಕ್ಷವಾದ ಎಐಎಡಿಎಂಕೆ ನಡುವಿನ ನೇರ ಹಣಾಹಣಿಯಂತೆ ಮೇಲ್ನೋಟಕ್ಕೆ ಕಂಡರೂ, ನಟ ವಿಜಯ್ ಅವರ ರಾಜಕೀಯ ಪ್ರವೇಶವು ಹೊಸ ಸಂಚಲನ ಮೂಡಿಸಿದೆ. ಪ್ರಮುಖವಾಗಿ ನಗರ ಪ್ರದೇಶದ ಯುವ ಮತದಾರರು ಮತ್ತು ಮೊದಲ ಬಾರಿಗೆ ಮತ ಚಲಾಯಿಸುತ್ತಿರುವವರ ಮೇಲೆ ವಿಜಯ್ ಅವರ ಪ್ರಭಾವ ಎಷ್ಟಿರಲಿದೆ ಎಂಬುದು ಕುತೂಹಲ ಮೂಡಿಸಿದೆ.

ಡಿಎಂಕೆ ತನ್ನ ಸಮಾಜ ಕಲ್ಯಾಣ ಯೋಜನೆಗಳು ಮತ್ತು ಸಾಮಾಜಿಕ ನ್ಯಾಯದ ಅಜೆಂಡಾವನ್ನು ಮುಂದಿಟ್ಟುಕೊಂಡು ಮತ ಕೇಳುತ್ತಿದ್ದರೆ, ಎಐಎಡಿಎಂಕೆ ಆಡಳಿತ ವಿರೋಧಿ ಅಲೆ ಮತ್ತು ಕೇಂದ್ರದ ಮೈತ್ರಿ ಪಕ್ಷಗಳ ಬೆಂಬಲದ ಮೇಲೆ ವಿಶ್ವಾಸ ಇಟ್ಟಿದೆ.

# ಎನ್‌ಸಿಪಿ (ಎಸ್‌ಪಿ) ಪಕ್ಷದ ಹಿರಿಯ ಉಪಾಧ್ಯಕ್ಷರಾಗಿ ಲಕ್ಷ್ಮಣ್ ಸಿ.ಪೂಜಾರಿ ಆಯ್ಕೆ



ಮುಂಬಯಿ, ಎ.22: ಮುಂಬಯಿ ಪ್ರಾದೇಶಿಕ ರಾಷ್ಟ್ರೀಯತಾವಾದಿ ಕಾಂಗ್ರೆಸ್ ಪಕ್ಷ–ಶರದ್‌ಚಂದ್ರ ಪವಾರ್ (ಎನ್‌ಸಿಪಿ–ಎಸ್‌ಪಿ), ಪಕ್ಷದ ನೂತನ ಅಧ್ಯಕ್ಷರಾಗಿ ಮಿಲಿಂದ್ (ಅಣ್ಣ) ಕಾಂಬ್ಳೆ ಹಾಗೂ ಹಿರಿಯ ಉಪಾಧ್ಯಕ್ಷ ಆಗಿ ಲಕ್ಷ್ಮಣ ಸಿ.ಪೂಜಾರಿ ಚಿತ್ರಾಪು ಮತ್ತು ಉತ್ತಮ್‌ರಾವ್ ಮಾನೆ ಅವರನ್ನು ಪಕ್ಷದ ವರಿಷ್ಠರು ಆಯ್ಕೆಗೊಳಿಸಿದರು.

ಈ ಸಂದರ್ಭದಲ್ಲಿ ಎನ್‌ಸಿಪಿ–ಪಕ್ಷದ ಈ ಆಡಳಿತ ಸಮಿತಿಗೆ ನೂತನ ಹುದ್ದೆದಾರರಾಗಿ ಆಯ್ಕೆಯಾದ ಮುಂಬಯಿ ಪ್ರದೇಶ ಎನ್‌ಸಿಪಿ–ಎಸ್‌ಪಿ ಕಾರ್ಯಾಧ್ಯಕ್ಷ ಸುಹೇಲ್ ಸುಬೇದಾರ್ ಪಕ್ಷದ ಕಾರ್ಯಾಲಯದಲ್ಲಿ ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದರು.



ನವದೆಹಲಿಯ ಖನ್ನಾ ಮಾರುಕಟ್ಟೆ ಬಳಿ ಜನಗಣತಿ ಕಾರ್ಯದ ಭಾಗವಾಗಿ ಜನಗಣತಿ ಗಣತಿದಾರರು ಬುಧವಾರ ಮನೆ ಮನೆಗೆ ತೆರಳಿ ಡಿಜಿಟಲ್ ಮ್ಯಾಪಿಂಗ್ ಸಮೀಕ್ಷೆ ನಡೆಸಿದರು.

### ಐ-ಪಿಎಸಿ-ಇಡಿ VS ಮಮತಾ ಬ್ಯಾನರ್ಜಿ

# ತನಿಖೆ ವೇಳೆ ಮಮತಾ ಹಸ್ತಕ್ಷೇಪ: ಸುಪ್ರೀಂ ಕೋರ್ಟ್ ತೀವ್ರ ಆಕ್ಷೇಪ– ಎಚ್ಚರಿಕೆ

**ನವದೆಹಲಿ, ಏ.22:** ಜನವರಿ 8 ರಂದು ಜಾರಿ ನಿರ್ದೇಶನಾಲಯ (ಇಡಿ) ಶೋಧ ನಡೆಸುತ್ತಿದ್ದಾಗ ರಾಜಕೀಯ ಸಲಹಾ ಸಂಸ್ಥೆ ಐ–ಪಿಎಸಿ ಸಹ–ಸಂಸ್ಥಾಪಕ ಪ್ರತೀಕ್ ಜೈನ್ ಅವರ ಆವರಣಕ್ಕೆ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ನುಗ್ಗಿದ್ದನ್ನು ಸುಪ್ರೀಂ ಕೋರ್ಟ್ ಬುಧವಾರ ತೀವ್ರವಾಗಿ ಖಂಡಿಸಿದೆ. ಈ ವರ್ಷ ಸಾಂವಿಧಾನಿಕ ಅಧಿಕಾರಿಯೊಬ್ಬರು ಪ್ರಜಾಪ್ರಭುತ್ವ ಪ್ರಕ್ರಿಯೆಗಳನ್ನು ದುರ್ಬಲಗೊಳಿಸುವ ಸಾಮರ್ಥ್ಯವನ್ನು ಹೊಂದಿದ್ದಾರೆ ಎಂದು ಗಮನಿಸುವ ಮೂಲಕ ಅಂತಹ ನಡವಳಿಕೆಯನ್ನು ಗಮನಿಸಲಾಗಿದೆ.



ಇದನ್ನು "ಅಸಾಧಾರಣ" ಎಂದು ಬಣ್ಣಿಸಿದ ನ್ಯಾಯಮೂರ್ತಿಗಳಾದ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಎನ್ ವಿ ಅಂಜಾರಿಯಾ ಅವರ ಪೀಠ, "ಯಾವುದೇ ರಾಜ್ಯದ ಮುಖ್ಯಮಂತ್ರಿ ತನಿಖೆಯ ಮಧ್ಯದಲ್ಲಿ ನಡೆದು ಪ್ರಜಾಪ್ರಭುತ್ವವನ್ನು ಅಪಾಯಕ್ಕೆ ಸಿಲುಕಿಸಲು ಸಾಧ್ಯವಿಲ್ಲ. ಇದು ಮುಖ್ಯಮಂತ್ರಿಯಾಗಿರುವ ವ್ಯಕ್ತಿಯೊಬ್ಬರು ಮಾಡಿದ ಕೃತ್ಯವಾಗಿದ್ದು, ಇಡೀ ಪ್ರಜಾಪ್ರಭುತ್ವವನ್ನು ಅಪಾಯದಲ್ಲಿರಿಸಿದೆ" ಎಂದು ಹೇಳಿದೆ.

ಘಟನೆಯ ಸಮಯದಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತು ಅವರೊಂದಿಗೆ ಇದ್ದ ಇತರ ರಾಜ್ಯ ಪೊಲೀಸ್ ಅಧಿಕಾರಿಗಳ ವಿರುದ್ಧ ಕೇಂದ್ರ ತನಿಖಾ ದಳ (ಸಿಬಿಐ) ತನಿಖೆ ನಡೆಸಬೇಕೆಂದು ಕೋರಿ ಜಾರಿ ನಿರ್ದೇಶನಾಲಯ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ ಪೀಠದ ಈ ಬಲವಾದ ಅಭಿಪ್ರಾಯ ಬಂದಿತು. ಸಂವಿಧಾನದ 32ನೇ ವಿಧಿಯ ಅಡಿಯಲ್ಲಿ ಉನ್ನತ ನ್ಯಾಯಾಲಯದ ನ್ಯಾಯವ್ಯಾಪ್ತಿಯನ್ನು ಪ್ರಶ್ನಿಸಿ ಕೇಂದ್ರ ಸಂಸ್ಥೆ ಮತ್ತು ಅದರ ಅಧಿಕಾರಿಗಳು ಸುಪ್ರೀಂ ಕೋರ್ಟ್ ಅನ್ನು ಸಂಪರ್ಕಿಸಿದ್ದಾರೆ. ಸಾಮಾನ್ಯವಾಗಿ, ರಾಜ್ಯದ ವಿರುದ್ಧ ತಮ್ಮ ಹಕ್ಕುಗಳನ್ನು ರಕ್ಷಿಸಿಕೊಳ್ಳಲು ನಾಗರಿಕರು 32 ನೇ ವಿಧಿಯನ್ನು ಆಶ್ರಯಿಸಬಹುದು. ಪಶ್ಚಿಮ ಬಂಗಾಳ ಸರ್ಕಾರವು ಇಳ ಯ ಅರ್ಜಿಗಳ ನಿರ್ವಹಣೆಯನ್ನು ಪ್ರಶ್ನಿಸಿದೆ.

ಪಶ್ಚಿಮ ಬಂಗಾಳ ಸರ್ಕಾರದ ಪರವಾಗಿ ಹಾಜರಾಗಿದ್ದ ಹಿರಿಯ ವಕೀಲರು, ಇಡಿ ಅರ್ಜಿಯ ನಿರ್ವಹಣೆಯನ್ನು ವಿರೋಧಿಸಿ, ತಮ್ಮ ವಾದವನ್ನು ಬೆಂಬಲಿಸಲು ಖ್ಯಾತ ನ್ಯಾಯಶಾಸ್ತ್ರಜ್ಞ ಎಂಎಚ್ ಸಿಆರ್‌ವೈ ಮತ್ತು ಡಾ. ಅಂಬೇಡ್ಕರ್ ಅವರನ್ನು ಉಲ್ಲೇಖಿಸಿದಾಗ, ಪೀಠವು "ನೀವು ಸೀರ್ವೈ, ಅಂಬೇಡ್ಕರ್ ಮೂಲಕ ನಮ್ಮನ್ನು ಕರೆದಿದ್ದೀರಿ, ಆದರೆ ಅವರಲ್ಲಿ ಯಾರೂ ಮುಖ್ಯಮಂತ್ರಿಗಳು ಈ ಕಚೇರಿಯನ್ನು ನೋಡಲು ಬಯಸುವ ಪರಿಸ್ಥಿತಿಯನ್ನು ಒಪ್ಪಿಕೊಳ್ಳುತ್ತಿರಲಿಲ್ಲ" (ಇ.ಡಿ.ಯಿಂದ ಶೋಧಗಳು ನಡೆಯುತ್ತಿವೆ) ಎಂದು ಟೀಕಿಸಿತು.

ಜನವರಿ 8 ರಂದು ಐ–ಪ್ಯಾಕ್ ಸಹ–ಸಂಸ್ಥಾಪಕ ಪ್ರತೀಕ್ ಜೈನ್ ಅವರ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿದ ಸಂದರ್ಭದಲ್ಲಿ ಏನಾಯಿತು ಎಂಬುದರ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, "ನಾವು ವಾಸ್ತವಕ್ಕೆ ಕಣ್ಣು ಮುಚ್ಚಿಕೊಳ್ಳಲು ಸಾಧ್ಯವಿಲ್ಲ. ಇದು ಅಸಾಧಾರಣ ಸನ್ನಿವೇಶವಾಗಿದ್ದು, ಇಲ್ಲಿ ರೂಪರೇಷೆಗಳು ಸಂಪೂರ್ಣವಾಗಿ ಭಿನ್ನವಾಗಿವೆ, ನ್ಯಾಯಾಲಯವು ಸಾಮಾಜಿಕ–ರಾಜಕೀಯ ವಾಸ್ತವಗಳನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಗಿದೆ."

ಏಪ್ರಿಲ್ 1 ರಂದು ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR) ನಲ್ಲಿ ತೊಡಗಿದ್ದ ಮೂವರು ಮಹಿಳಾ ನ್ಯಾಯಾಧೀಶರು ಸೇರಿದಂತೆ ಏಳು ನ್ಯಾಯಾಂಗ ಅಧಿಕಾರಿಗಳಿಗೆ ಘೇರಾವ್ ಹಾಕಲಾಯಿತು, ಮತ್ತು ಕಲ್ಕತ್ತಾ ಹೈಕೋರ್ಟ್‌ನಿಂದ ಕರೆಗಳಿದ್ದರೂ ರಾಜ್ಯ ಪೊಲೀಸರ ಪ್ರತಿಕ್ರಿಯೆ ತಕ್ಷಣವೇ ಇರಲಿಲ್ಲ. ಘಟನೆಯ ತನಿಖೆಯನ್ನು ಈಗ ರಾಷ್ಟ್ರೀಯ ತನಿಖಾ ಸಂಸ್ಥೆಗೆ ಹಸ್ತಾಂತರಿಸಲಾಗಿದೆ.

ಹಿಂದಿನ ವಿಚಾರಣೆಯಲ್ಲಿ ಪಶ್ಚಿಮ ಬಂಗಾಳ ಸರ್ಕಾರವು ಸುಪ್ರೀಂ ಕೋರ್ಟ್‌ಗೆ, ರಾಜಕೀಯ ವಿರೋಧಿಗಳ ವಿರುದ್ಧ ಕೇಂದ್ರ ಸರ್ಕಾರವು ಜಾರಿ ನಿರ್ದೇಶನಾಲಯವನ್ನು "ಆಯುಧ"ವಾಗಿ ಬಳಸುತ್ತಿದೆ ಎಂದು ಹೇಳಿತ್ತು.

ಪಶ್ಚಿಮ ಬಂಗಾಳ ಸರ್ಕಾರ, ಮುಖ್ಯಮಂತ್ರಿ ಬ್ಯಾನರ್ಜಿ ಮತ್ತು ರಾಜ್ಯ ಪೊಲೀಸ್ ಅಧಿಕಾರಿಗಳ ಪರವಾಗಿ ಹಾಜರಾದ ಹಿರಿಯ ವಕೀಲರಾದ ಅಭಿಷೇಕ್ ಮನು ಸಿಂಘ್ವಿ, ಸಿದ್ಧಾರ್ಥ್ ಲೂತ್ರಾ ಮತ್ತು ಮೇನಕಾ ಗುರುಸ್ವಾಮಿ, ಸಂವಿಧಾನದ 32 ನೇ ವಿಧಿಯ ಅಡಿಯಲ್ಲಿ ಅರ್ಜಿಯನ್ನು ವಿಚಾರಣೆಗೆ ಒಳಪಡಿಸಲಾಗುವುದಿಲ್ಲ ಎಂದು ವಾದಿಸಿದರು.

ಆದಾಗ್ಯೂ, ಕಾನೂನಿನ ಪ್ರಶ್ನೆಗಳು ಒಳಗೊಂಡಿರುವುದರಿಂದ ಮಾತ್ರ ಈ ವಿಷಯವನ್ನು ದೊಡ್ಡ ಪೀಠಕ್ಕೆ ಉಲ್ಲೇಖಿಸುವ ಅಗತ್ಯವಿದೆ ಎಂದು ನ್ಯಾಯಪೀಠಕ್ಕೆ ಮನವರಿಕೆಯಾಗಲಿಲ್ಲ. ಪ್ರತಿಯೊಂದು ವಿಷಯದಲ್ಲೂ ಕಾನೂನಿನ ಪ್ರಶ್ನೆ ಇರುತ್ತದೆ, ಆದರೆ ದೊಡ್ಡ ಪೀಠಕ್ಕೆ ಉಲ್ಲೇಖಿಸುವ ಅಗತ್ಯವಿಲ್ಲ ಎಂದು ಅದು ಗಮನಿಸಿತು. ಕಲ್ಲಿದ್ದಲು ಕಳ್ಳಸಾಗಣೆ ಪ್ರಕರಣದಲ್ಲಿ ಹಣ ವರ್ಗಾವಣೆ ತನಿಖೆಗೆ ಸಂಬಂಧಿಸಿದ ಇಡಿ ಶೋಧ ಕಾರ್ಯಾಚರಣೆಯ ಸಮಯದಲ್ಲಿ ಬ್ಯಾನರ್ಜಿ ಅವರು ಜನವರಿ 8 ರಂದು ಐ–ಪ್ಯಾಕ್ ಸಹ–ಸಂಸ್ಥಾಪಕ ಪ್ರತೀಕ್ ಜೈನ್ ಅವರ ನಿವಾಸಕ್ಕೆ ಪ್ರವೇಶಿಸಿದಾಗ ಈ ಪ್ರಕರಣವು ಹುಟ್ಟಿಕೊಂಡಿದೆ.

# ಕೇದಾರನಾಥ ಧಾಮ ಉದ್ಘಾಟನೆ, ಚಾರ್ ಧಾಮ್ ಯಾತ್ರೆಗೆ ಪ್ರಧಾನಿ ಚಾಲನೆ



**ನವದೆಹಲಿ, ಏ.22:** ಈ ವರ್ಷದ ಚಾರ್ ಧಾಮ್ ಯಾತ್ರೆಯ ಆರಂಭದ ಅಂಗವಾಗಿ ದೇವಭೂಮಿ ಉತ್ತರಾಖಂಡದಲ್ಲಿ ಕೇದಾರನಾಥ ಧಾಮದ ಬಾಗಿಲು ತೆರೆದ ಪವಿತ್ರ ಸಂದರ್ಭದಲ್ಲಿ ಪ್ರಧಾನಮಂತ್ರಿ ಇಂದು ಗೌರವ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ, ಯಾತ್ರೆಗಾಗಿ ಉತ್ತರಾಖಂಡಕ್ಕೆ ಭೇಟಿ ನೀಡುವ ಎಲ್ಲಾ ಭಕ್ತರನ್ನು ಉದ್ದೇಶಿಸಿ ಪತ್ರದ ಮೂಲಕ ಪ್ರಧಾನಮಂತ್ರಿ ಅವರು ತಮ್ಮ ಹೃತ್ಪೂರ್ವಕ ಭಾವನೆಗಳನ್ನು ಹಂಚಿಕೊಂಡಿದ್ದಾರೆ ಮತ್ತು ಅವರ ಯೋಗಕ್ಷೇಮಕ್ಕಾಗಿ ತಮ್ಮ ಶುಭ ಹಾರೈಕೆ ಮತ್ತು ಪ್ರಾರ್ಥನೆ ತಿಳಿಸಿದ್ದಾರೆ.

ಈ ಸಂದರ್ಭದ ಆಧ್ಯಾತ್ಮಿಕ ಮಹತ್ವವನ್ನು ಒತ್ತಿ ಹೇಳಿದ ಶ್ರೀ ನರೇಂದ್ರ ಮೋದಿ ಅವರು, ಕೇದಾರನಾಥ ಧಾಮ ಮತ್ತು ಚಾರ್ ಧಾಮ್ ಪ್ರಯಾಣವು ಭಾರತದ ನಿರಂತರ ನಂಬಿಕೆ, ಏಕತೆ ಮತ್ತು ಶ್ರೀಮಂತ ಸಾಂಸ್ಕೃತಿಕ ಸಂಪ್ರದಾಯಗಳ ದೈವಿಕ ಆಚರಣೆಯಾಗಿದೆ ಎಂದು ಹೇಳಿದರು. ಇಂತಹ ತೀರ್ಥಯಾತ್ರೆಗಳು ದೇಶದ ಶಾಶ್ವತ ಪರಂಪರೆ ಮತ್ತು ಆಧ್ಯಾತ್ಮಿಕ ಪ್ರಜ್ಞೆಯ ಒಂದು ನೋಟವನ್ನು ನೀಡುತ್ತವೆ ಎಂದು ಅವರು ಒತ್ತಿ ಹೇಳಿದರು.

# ಮುರುಘಾಮಠ ಆಸ್ತಿ ಪ್ರಕರಣ: ಕರ್ನಾಟಕ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ನೋಟೀಸ್




ನವದೆಹಲಿ, ಏ.22: ಮುರುಘಾ ಮಠದ ಆಸ್ತಿಯನ್ನು ಸರ್ಕಾರದ ವಶಕ್ಕೆ ನೀಡುವಂತೆ ಕೋರಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ರಾಜ್ಯ ಸರ್ಕಾರಕ್ಕೆ ನೋಟೀಸ್ ನೀಡಿದೆ.

ಎಚ್. ಏಕಾಂತಯ್ಯ ಸಲ್ಲಿಸಿದ್ದ ಅರ್ಜಿಯನ್ನು ನ್ಯಾ. ಪಂಕಜ್ ಮಿಥಲ್ ನೇತೃತ್ವದ ದ್ವಿ ಸದಸ್ಯ ಪೀಠ ವಿಚಾರಣೆ ನಡೆಸಿತು. ಅರ್ಜಿಯಲ್ಲಿ ಮಠದ ಆಸ್ತಿಯನ್ನು ಸರ್ಕಾರದ ವಶಕ್ಕೆ ನೀಡಬೇಕು ಎಂದು ಮನವಿ ಮಾಡಲಾಗಿದೆ.

ಇದಕ್ಕೂ ಮೊದಲು ಮಠದ ಆಸ್ತಿಯನ್ನು ಮಠದ ಸುಪರ್ದಿಗೆ ನೀಡುವಂತೆ ಹೈಕೋರ್ಟ್ ಆದೇಶ ನೀಡಿತ್ತು. ಹೈಕೋರ್ಟ್‌ನ ಈ ಆದೇಶವನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲಾಗಿತ್ತು.

ಸುಪ್ರೀಂಕೋರ್ಟ್‌ನ ವಿಚಾರಣೆ ವೇಳೆ ಮಠದ ಭಕ್ತೆಯೊಬ್ಬರು ಮಧ್ಯಪ್ರವೇಶ ಅರ್ಜಿ ಸಲ್ಲಿಸಿ, ಈಗಾಗಲೇ ಸ್ವಾಮೀಜಿ ಮಠದ ಆಸ್ತಿಯನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದಾರೆ ಎಂಬ ಆತಂಕ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ತಮ್ಮನ್ನು ಕೂಡ ಪ್ರಕರಣದಲ್ಲಿ ಭಾಗಿಯಾಗಲು ಅವಕಾಶ ನೀಡುವಂತೆ ಮನವಿ ಮಾಡಿದರು. ಈ ಮನವಿಗೆ ಸುಪ್ರೀಂಕೋರ್ಟ್ ಒಪ್ಪಿಗೆ ಸೂಚಿಸಿದ್ದು, ಮುಂದಿನ ವಿಚಾರಣೆ ವೇಳೆ ಹೆಚ್ಚಿನ ವಿವರಗಳನ್ನು ಪರಿಶೀಲಿಸುವುದಾಗಿ ತಿಳಿಸಿದೆ.



ಪಶ್ಚಿಮ ಬಂಗಾಳದ ಮುರ್ಷಿದಾಬಾದ್‌ನ ಬೆರ್ಹಾಂಪುರದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಯ ಮೊದಲ ಹಂತದ ಸಿದ್ಧತೆಗಳ ಒಂದು ನೋಟ.

# ಪಹಲ್ಗಾಮ್ ಭಯೋತ್ಪಾದಕ ದಾಳಿಯ ಸಂತ್ರಸ್ತರಿಗೆ ಗೌರವ ನಮನ ಸಲ್ಲಿಸಿದ ಪ್ರಧಾನಮಂತ್ರಿ



**ನವದೆಹಲಿ, ಏ.22:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕಳೆದ ವರ್ಷ ಇದೇ ದಿನದಂದು ಪಹಲ್‌ಗಾಮ್ ಭಯೋತ್ಪಾದಕ ದಾಳಿಯಲ್ಲಿ ಕಳೆದುಕೊಂಡ ಮುಗ್ಧ ಜೀವಗಳಿಗೆ ಗೌರವ ನಮನ ಸಲ್ಲಿಸಿದರು. ಸಂತ್ರಸ್ತರನ್ನು ಸ್ಮರಿಸಿದ ಪ್ರಧಾನಮಂತ್ರಿ ಅವರು, ಅವರನ್ನು ಎಂದಿಗೂ ಮರೆಯಲಾಗುವುದಿಲ್ಲ ಮತ್ತು ಈ ದುಃಖದ ಸಮಯದಲ್ಲಿ ಅವರ ಕುಟುಂಬಗಳೊಂದಿಗೆ ನಿಲ್ಲುವ ರಾಷ್ಟ್ರದ ನಿರಂತರ ಬದ್ಧತೆಯನ್ನು ಪುನರುಚ್ಚರಿಸಿದರು. ಭಯೋತ್ಪಾದನೆಯ ವಿರುದ್ಧ ದುಃಖ ಮತ್ತು ಅಚಲ ಸಂಕಲ್ಪದಲ್ಲಿ ಭಾರತವು ಒಗ್ಗಟ್ಟಿನಿಂದ ನಿಂತಿದೆ ಎಂದು ನರೇಂದ್ರ ಮೋದಿ ಅವರು ಒತ್ತಿ ಹೇಳಿದರು. ದೇಶ ಎಂದಿಗೂ ಯಾವುದೇ ರೀತಿಯ ಭಯೋತ್ಪಾದನೆಗೆ ತಲೆಬಾಗುವುದಿಲ್ಲ ಮತ್ತು ಭಯೋತ್ಪಾದಕರ ಘೋರ ಉದ್ದೇಶಗಳು ಎಂದಿಗೂ ಯಶಸ್ವಿಯಾಗುವುದಿಲ್ಲ ಎಂದು ಅವರು ಪುನರುಚ್ಚರಿಸಿದರು.

ಪ್ರಧಾನಮಂತ್ರಿ ಅವರು ಈ ಬಗ್ಗೆ ಎಕ್ಸ್ ನಲ್ಲಿ ಹಂಚಿಕೊಂಡಿದ್ದಾರೆ:

"ಕಳೆದ ವರ್ಷ ಇದೇ ದಿನದಂದು ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಕಳೆದುಕೊಂಡ ಮುಗ್ಧ ಜೀವಗಳನ್ನು ಸ್ಮರಿಸುತ್ತೇನೆ. ಅವರನ್ನು ಎಂದಿಗೂ ಮರೆಯಲಾಗುವುದಿಲ್ಲ. ಈ ನಷ್ಟವನ್ನು ನಿಭಾಯಿಸುತ್ತಿರುವ ದುಃಖತಪ್ತ ಕುಟುಂಬಗಳೊಂದಿಗೆ ನನ್ನ ಸಂವೇದನೆ ಇದೆ.

ಒಂದು ರಾಷ್ಟ್ರವಾಗಿ, ನಾವು ದುಃಖ ಮತ್ತು ಸಂಕಲ್ಪದಲ್ಲಿ ಒಗ್ಗಟ್ಟಿನಿಂದ ನಿಲ್ಲುತ್ತೇವೆ. ಭಾರತವು ಎಂದಿಗೂ ಯಾವುದೇ ರೀತಿಯ ಭಯೋತ್ಪಾದನೆಗೆ ತಲೆಬಾಗುವುದಿಲ್ಲ. ಭಯೋತ್ಪಾದಕರ ಘೋರ ಯೋಜನೆಗಳು ಎಂದಿಗೂ ಯಶಸ್ವಿಯಾಗುವುದಿಲ್ಲ."




ಜರ್ಮನಿಯ ಬರ್ಲಿನ್‌ನಲ್ಲಿ ನಡೆದ ದ್ವಿಪಕ್ಷೀಯ ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ಜರ್ಮನಿಯ ಫೆಡರಲ್ ರಕ್ಷಣಾ ಸಚಿವ ಬೋರಿಸ್ ಪಿಸ್ಟೋರಿಯಸ್ ಅವರು ರಕ್ಷಣಾ ಕೈಗಾರಿಕಾ ಮಾರ್ಗಸೂಚಿಗೆ ಸಹಿ ಹಾಕುವುದನ್ನು ಮತ್ತು ವಿಶ್ವಸಂಸ್ಥೆಯ ಶಾಂತಿಪಾಲನಾ ತರಬೇತಿಯಲ್ಲಿ ಸಹಕಾರಕ್ಕಾಗಿ ವ್ಯವಸ್ಥೆಯನ್ನು ಅನುಷ್ಠಾನಗೊಳಿಸುವ ಕಾರ್ಯಕ್ರಮವನ್ನು ವೀಕ್ಷಿಸಿದರು.




ನವದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಬುಧವಾರ 9ನೇ ಭಾರತ ಅಂತರರಾಷ್ಟ್ರೀಯ ಜಲ ಸಪ್ತಾಹವನ್ನು ಉದ್ಘಾಟಿಸಿದರು.

# ನವದೆಹಲಿ: ಹಿರಿಯ ಅಧಿಕಾರಿಯ ಮಗಳ ಮೇಲೆ ಲೈಂಗಿಕ ದೌರ್ಜನ್ಯ, ಕೊಲೆ

**ನವದೆಹಲಿ, ಏ.22:** ರಾಷ್ಟ್ರ ರಾಜಧಾನಿಯಲ್ಲಿ ಆಘಾತಕಾರಿ ಘಟನೆ ನಡೆದಿದ್ದು, ಹಿರಿಯ ಸರ್ಕಾರಿ ಅಧಿಕಾರಿಯೊಬ್ಬರ 22 ವರ್ಷದ ಮಗಳು ಬುಧವಾರ ಬೆಳಗ್ಗೆ ಆಗ್ನೇಯ ದೆಹಲಿಯ ವಸಾಹತು ಪ್ರದೇಶದಲ್ಲಿರುವ ಅವರ ಮನೆಯಲ್ಲಿ ಕೊಲೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸ್ ಮೂಲಗಳ ಪ್ರಕಾರ, ಎಂಜಿನಿಯರಿಂಗ್ ಮುಗಿಸಿ ಯುಪಿಎಸ್‌ಸಿ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ ಹಿರಿಯ ಅಧಿಕಾರಿಯ ಪುತ್ರಿಯನ್ನು ಕೊಲ್ಲುವ ಮುನ್ನ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ.



ಯುವತಿಯನ್ನು ಕತ್ತು ಹಿಸುಕಿ ಕೊಲೆ ಮಾಡಲಾಗಿದ್ದು, ಕೃತ್ಯಕ್ಕೆ ಮೊಬೈಲ್ ಫೋನ್ ಚಾರ್ಜಿಂಗ್ ಕೇಬಲ್ ಬಳಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಯ ಸಮಯದಲ್ಲಿ ಮನೆಯಲ್ಲಿ ಯುವತಿ ಒಬ್ಬಳೇ ಇದ್ದಳು. ಆಕೆಯ ಪೋಷಕರು ಜಿಮ್‌ಗೆ ಹೋಗಿದ್ದರು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಸುಮಾರು ಒಂದೂವರೆ ತಿಂಗಳ ಹಿಂದೆ ಕೆಲಸದಿಂದ ತೆಗೆದುಹಾಕಲ್ಪಟ್ಟ ಮನೆ ಕೆಲಸದ ವ್ಯಕ್ತಿಯ ಮೇಲೆ ಅನುಮಾನ ಬಂದಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ಶಂಕಿತನನ್ನು ಪತ್ತೆಹಚ್ಚಲು ತಂಡಗಳನ್ನು ರಚಿಸಿದ್ದಾರೆ. ಈ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಭಾರತೀಯ ಉದ್ಯಮಿಗಳಿಗೆ ದಾಖಲೆ ಪ್ರಕ್ರಿಯೆ ಸುಲಭ, ಪರಿಣಾಮಕಾರಿಯಾಗಿ ಲಭ್ಯ

# ಭಾರತ್-ಅರಬ್ ದೇಶಗಳ ನಡುವೆ ವಾಣಿಜ್ಯ, ಕೈಗಾರಿಕೆ, ತಂತ್ರಜ್ಞಾನ ಒಪ್ಪಂದ

**ಬೆಂಗಳೂರು, ಏ.22:** ಸರ್ಕಾರಗಳು ಮತ್ತು ನಾಗರಿಕರಿಗೆ ಎಐ ಹಾಗೂ ತಂತ್ರಜ್ಞಾನ ಆಧಾರಿತ ಸೇವೆಗಳನ್ನು ಒದಗಿಸುವ ಪ್ರಮುಖ ಜಾಗತಿಕ ಸಂಸ್ಥೆಯಾದ ಬಿಎಲ್‌ಎಸ್ ಇಂಟರ್‌ನ್ಯಾಷನಲ್, ಭಾರತ ಮತ್ತು ಅರಬ್ ದೇಶಗಳ ವಾಣಿಜ್ಯ, ಕೈಗಾರಿಕಾ ಮತ್ತು ಕೃಷಿ ಮಂಡಳಿ (ಐಎಸಿಸಿಐಎ) ಜೊತೆ ತಂತ್ರಜ್ಞಾನದ ಒಡಂಬಡಿಕೆ ಮಾಡಿಕೊಂಡಿದೆ.

ಈ ಒಪ್ಪಂದದ ಮೂಲಕ ಭಾರತದಲ್ಲಿರುವ 17 ಕೇಂದ್ರಗಳ ಜಾಲದ ಮೂಲಕ ವಾಣಿಜ್ಯ ಅಟೆಸ್ಟೇಶನ್ ಹಾಗೂ ಸಂಬಂಧಿತ ಸೇವೆಗಳನ್ನು ವಿಸ್ತರಿಸಲಾಗುತ್ತದೆ. ಇದರ 22 ಅರಬ್ ಲೀಗ್ ದೇಶಗಳೊಂದಿಗೆ ವ್ಯಾಪಾರ ನಡೆಸುತ್ತಿರುವ ಭಾರತೀಯ ಉದ್ಯಮಿಗಳಿಗೆ ದಾಖಲೆ ಪ್ರಕ್ರಿಯೆಗಳು ಇನ್ನಷ್ಟು ವೇಗವಾಗಿ, ಸುಲಭವಾಗಿ ಮತ್ತು ಪರಿಣಾಮಕಾರಿಯಾಗಿ ಲಭ್ಯವಾಗಲಿವೆ.

ಈ ಒಪ್ಪಂದಕ್ಕೆ ಐಎಸಿಸಿಐಎ ಕಾರ್ಯದರ್ಶಿ (ಹುದ್ದೆ ನಿರ್ವಹಣೆಯಲ್ಲಿ) ಡಾ. ವಿ.ಎಲ್ ಎಸ್. ಎಚ್. ಅವ್ವಾದ್ ಹಾಗೂ ಬಿಎಲ್‌ಎಸ್ ಇಂಟರ್‌ನ್ಯಾಷನಲ್ ಸಂಸ್ಥೆಯ ಸ್ಟ್ರಾಟೆಜಿಕ್ ಮಾರ್ಕೆಟ್ಸ್, ಸರ್ಕಾರಗಳು ಮತ್ತು ಸಂಸ್ಥೆಗಳ ಮುಖ್ಯ ಕಾರ್ಯಾಚರಣಾಧಿಕಾರಿ ಚಾರು ಖೋಸ್ಲಾ ಸಮ್ಮುಖದಲ್ಲಿ ಅಧಿಕೃತ ಮುದ್ರೆ ಬಿದ್ದಿದೆ.

ಇತ್ತೀಚೆಗೆ ಭಾರತ ಸರ್ಕಾರದ ವಿದೇಶಿ ವ್ಯಾಪಾರ ಮಹಾನಿರ್ದೇಶನಾಲಯ



(ಡಿಜಿಎಫ್ಟಿ)ದಿಂದ ಅಧಿಕೃತ ಮಾನ್ಯತೆ ಪಡೆದಿರುವ ಐಎಸಿಸಿಐಎ, ಇದು ಪ್ರಮುಖ ಸಾಧನೆಯಾಗಿದೆ. ಈ ಮಾನ್ಯತೆ ಮೂಲಕ ಐಎಸಿಸಿಐಎಗೆ ನಾನ್-ಪ್ರಿಫರೆನ್ಷಿಯಲ್ ಸರಕು ಮೂಲ ಪ್ರಮಾಣಪತ್ರಗಳನ್ನು (Certificate of Origin) ನೀಡುವ ಹಾಗೂ ವಾಣಿಜ್ಯ ದಾಖಲೆಗಳ ಅಟೆಸ್ಟೇಶನ್ ನೆರವೇರಿಸುವ ಅಧಿಕಾರ ದೊರೆತಿದೆ. ಇದರಿಂದ ಭಾರತ ಮತ್ತು ಅರಬ್ ರಾಷ್ಟ್ರಗಳ ನಡುವಿನ ವ್ಯಾಪಾರ ಪ್ರಕ್ರಿಯೆಗಳು ಇನ್ನಷ್ಟು ಸುಗಮವಾಗಲಿವೆ ಮತ್ತು ದ್ವಿಪಕ್ಷೀಯ ವ್ಯಾಪಾರ ವೃದ್ಧಿಗೆ ಉತ್ತೇಜನ ನೀಡಲಿದೆ.

ಬಿಎಲ್‌ಎಸ್ ಇಂಟರ್‌ನ್ಯಾಷನಲ್ ಸಂಯುಕ್ತ ವ್ಯವಸ್ಥಾಪಕ ನಿರ್ದೇಶಕ ಶಿಖರ್ ಅಗ್ಗರ್‌ವಾಲ್ ಮಾತನಾಡಿ, "ಈ ಸಹಭಾಗಿತ್ವವು ವಿಶ್ವಮಟ್ಟದ ಸಂಪರ್ಕವನ್ನು ಸುಗಮಗೊಳಿಸುವ ನಮ್ಮ ಪ್ರಯಾಣದಲ್ಲಿ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ಐಎಸಿಸಿಐಎ ಜೊತೆ ಕೈಜೋಡಿಸುವ ಮೂಲಕ ಭಾರತ ಮತ್ತು ಅರಬ್ ರಾಷ್ಟ್ರಗಳ ನಡುವಿನ ವ್ಯಾಪಾರ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುತ್ತಿದ್ದೇವೆ. ವ್ಯಕ್ತಿಗಳು ಮತ್ತು ಸಂಸ್ಥೆಗಳಿಗಾಗಿ ಸುರಕ್ಷಿತ, ಸುಗಮ ಮತ್ತು ವಿಸ್ತರಿಸಬಹುದಾದ ಅಟೆಸ್ಟೇಶನ್ ಸೇವೆಗಳನ್ನು ಒದಗಿಸುವುದು ನಮ್ಮ ಮುಖ್ಯ ಗುರಿಯಾಗಿದೆ ಎಂದರು.

ಐಎಸಿಸಿಐಎ ಕಾರ್ಯದರ್ಶಿ ಡಾ. ವಾಇಲ್ ಎಸ್. ಎಚ್. ಅವ್ವಾದ್ ಅವರು, "ಡಿಜಿಎಫ್ಟಿ ಮಾನ್ಯತೆ ನಮಗೆ ಪ್ರಮುಖ ಸಂಸ್ಥಾತ್ಮಕ ಮೈಲುಗಲ್ಲಾಗಿದೆ. ಇದು ಭಾರತ ಮತ್ತು ಅರಬ್ ರಾಷ್ಟ್ರಗಳ ನಡುವಿನ ವಾಣಿಜ್ಯ ವಿನಿಮಯದಲ್ಲಿ ನಮ್ಮ ವಿಶ್ವಾಸಾರ್ಹ ಪಾತ್ರವನ್ನು ಮತ್ತಷ್ಟು ಬಲಪಡಿಸುತ್ತದೆ. ಬಿಎಲ್‌ಎಸ್ ಇಂಟರ್‌ನ್ಯಾಷನಲ್ ಜೊತೆಗಿನ ಈ ಸಹಭಾಗಿತ್ವದಿಂದ ನಾವು ಸೇವಾ ವ್ಯಾಪ್ತಿಯನ್ನು ವಿಸ್ತರಿಸಿ, ಎರಡೂ ಭಾಗದ ಉದ್ಯಮಿಗಳಿಗೆ ಸುಗಮ ಸೇವೆಗಳನ್ನು ಒದಗಿಸಲು ಸಾಧ್ಯವಾಗುತ್ತದೆ. ಇದು ವ್ಯಾಪಾರ ಮತ್ತು ಹೂಡಿಕೆ ಅವಕಾಶಗಳನ್ನು ಹೆಚ್ಚಿಸುವಲ್ಲಿ ಸಹಕಾರಿ ಆಗಲಿದೆ," ಎಂದು ಹೇಳಿದರು.

ನವದೆಹಲಿ ಕೇಂದ್ರವಾಗಿರುವ ಐಎಸಿಸಿಐಎ, ಭಾರತ ಮತ್ತು 22 ಅರಬ್ ಲೀಗ್ ರಾಷ್ಟ್ರಗಳ ನಡುವಿನ ದೀರ್ಘಕಾಲೀನ ವ್ಯಾಪಾರ, ಹೂಡಿಕೆ ಮತ್ತು ವ್ಯವಹಾರ ಸಹಭಾಗಿತ್ವವನ್ನು ಉತ್ತೇಜಿಸುವ ಪ್ರಮುಖ ವೇದಿಕೆಯಾಗಿದೆ. ಭಾರತ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಬೆಂಬಲ ಹೊಂದಿರುವ ಈ ಸಂಸ್ಥೆ, ಅರಬ್ ಲೀಗ್‌ನ ಮಾನ್ಯತೆಯೊಂದಿಗೆ ಕಾರ್ಯನಿರ್ವಹಿಸುತ್ತದೆ. ಕೃಷಿ, ಜಾಗತಿಕ ಆಹಾರ ಭದ್ರತೆ ಹಾಗೂ ಸ್ಥಿರ ಸಹಭಾಗಿತ್ವದ ಮೇಲೆ ವಿಶೇಷ ಒತ್ತಡದೊಂದಿಗೆ ಬಿ2ಬಿ, ಬಿ2ಜಿ ಸಂವಾದಗಳು, ನೀತಿ ಚರ್ಚೆಗಳು ಮತ್ತು ವಿವಿಧ ಕ್ಷೇತ್ರಾಧಾರಿತ ಕಾರ್ಯಕ್ರಮಗಳನ್ನು ಉತ್ತೇಜಿಸುತ್ತದೆ.



ಐಟಿ ಮತ್ತು ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನ ಎಂಬಸಿ ಟೆಕ್ ವಿಲೇಜ್‌ನಲ್ಲಿ AI, ಕ್ಲೌಡ್ ಮತ್ತು ಡಿಜಿಟಲ್ ರೂಪಾಂತರದಲ್ಲಿ ನಾವೀನ್ಯತೆಯನ್ನು ಬಲಪಡಿಸುವ ಜಾಗತಿಕ ಸಾಮರ್ಥ್ಯ ಕೇಂದ್ರವನ್ನು ಉದ್ಘಾಟಿಸಿದರು. ಮಾಹಿತಿ ತಂತ್ರಜ್ಞಾನದ ಕಾರ್ಯನಿರ್ವಾಹಕ ಉಪಾಧ್ಯಕ್ಷ ಗ್ರೆಗ್ ಚಾಂಡ್ಲರ್, ದಿ ಸ್ಟ್ಯಾಂಡರ್ಡ್ ಇಂಡಿಯಾದ ಹಿರಿಯ ಉಪಾಧ್ಯಕ್ಷ ಮತ್ತು ಮುಖ್ಯಸ್ಥ ಮೋಹುವಾ ಸೇನ್‌ಗುಪ್ತಾ ಇದ್ದರು..

# ರಮೇಶ್ ಕುಮಾರ್ ಅರಣ್ಯ ಒತ್ತುವರಿ ತೆರವು ಆದೇಶಕ್ಕೆ ಹೈಕೋರ್ಟ್ ತಡೆ

## ಅರಣ್ಯ ಇಲಾಖೆ ಆದೇಶ ಪ್ರಶ್ನಿಸಿ ಉಚ್ಚನ್ಯಾಯಾಲಯದ ಮೊರೆಹೋಗಿದ್ದ ಮಾಜಿ ಸ್ಪೀಕರ್




**ಬೆಂಗಳೂರು, ಏ.22:** ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಹೊಸಹುಡ್ಯ ಗ್ರಾಮದಲ್ಲಿ 60 ಎಕರೆಗೂ ಅಧಿಕ ಅರಣ್ಯ ಭೂಮಿ ಒತ್ತುವರಿ ಮಾಡಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ, ಒತ್ತುವರಿ ತೆರವುಗೊಳಿಸುವಂತೆ ಅರಣ್ಯ ಇಲಾಖೆ ನೀಡಿದ್ದ ಆದೇಶಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ಮುಂದಿನ ವಿಚಾರಣೆಯವರೆಗೂ ಯಾವುದೇ ಬಲವಂತದ ಕ್ರಮ ಕೈಗೊಳ್ಳಬಾರದೆಂದು ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಂ ಅವರಿದ್ದ ಏಕಸದಸ್ಯ ಪೀಠವು ರಾಜ್ಯ ಸರ್ಕಾರಕ್ಕೆ ಸೂಚಿಸಿ, ನೋಟಿಸ್ ಜಾರಿ ಮಾಡಿದೆ. ಶ್ರೀನಿವಾಸಪುರ ತಾಲೂಕಿನ ಜಿನಗಲಕುಂಟೆ ಅರಣ್ಯ ವಲಯದ ಹೊಸಹುಡ್ಯ ಗ್ರಾಮದ ಸರ್ವೇ ಸಂಖ್ಯೆ 1 ಮತ್ತು 2 ರಲ್ಲಿ ಒಟ್ಟು 60 ಎಕರೆ 23 ಗುಂಟೆ ಜಮೀನನ್ನು ಮಾಜಿ ಸ್ಪೀಕರ್ ರಮೇಶ್ ಕುಮಾರ್ ಒತ್ತುವರಿ ಮಾಡಿದ್ದಾರೆ ಎಂದು ಅರಣ್ಯ ಇಲಾಖೆ ಈ ಹಿಂದೆ ನೋಟಿಸ್ ನೀಡಿತ್ತು.

ಕಳೆದ ಏಪ್ರಿಲ್ 10 ರಂದು ಮೇಲ್ಮನವಿ ಪ್ರಾಧಿಕಾರವು ಈ ಒತ್ತುವರಿಯನ್ನು ದೃಢೀಕರಿಸಿ, 30 ದಿನಗಳೊಳಗೆ ಜಮೀನು ಹಸ್ತಾಂತರಿಸುವಂತೆ ಆದೇಶಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ರಮೇಶ್ ಕುಮಾರ್ ಹೈಕೋರ್ಟ್ ಮೆಟ್ಟಿಲೇರಿದ್ದರು. ವಿಚಾರಣೆ ವೇಳೆ ರಮೇಶ್ ಕುಮಾರ್ ಅವರ ಪರ ವಕೀಲರು ಪ್ರಮುಖ ಅಂಶಗಳನ್ನು ನ್ಯಾಯಾಲಯದ ಗಮನಕ್ಕೆ ತಂದರು: ಅರಣ್ಯ ಇಲಾಖೆಯು ಅರಣ್ಯದ ಗಡಿಯನ್ನು ಇನ್ನೂ ಅಧಿಕೃತವಾಗಿ ನಿಗದಿಪಡಿಸಿಲ್ಲ (ಸೆಕ್ಷನ್ 19ರ ಅನ್ವಯ). ಗಡಿಯೇ ನಿಗದಿಯಾಗದಿದ್ದಾಗ ಒತ್ತುವರಿ ಎಂದು ಘೋಷಿಸುವುದು ಕಾನೂನುಬಾಹಿರ. ದಾಖಲೆಗಳ ಪ್ರಕಾರ 113 ಎಕರೆ ಅರಣ್ಯ ಭೂಮಿ ಇರಬೇಕು. ಆದರೆ ಅರಣ್ಯ ಇಲಾಖೆ ಈಗ 245 ಎಕರೆ ತನ್ನದೆಂದು ಹಕ್ಕು ಮಂಡಿಸುತ್ತಿದೆ.

ಜಿಲ್ಲಾಧಿಕಾರಿಗಳು ಈ ಹಿಂದೆ ನಡೆಸಿದ ಜಂಟಿ ಸಮೀಕ್ಷೆಯಲ್ಲಿ, ಅರಣ್ಯ ಇಲಾಖೆಯು ತನ್ನ ಹಕ್ಕು ಮಂಡನೆಗೆ ಯಾವುದೇ ಪೂರಕ ದಾಖಲೆ ಸಲ್ಲಿಸಿಲ್ಲ ಎಂದು ತಿಳಿಸಲಾಗಿದೆ. ಅಲ್ಲದೆ, ಸುಮಾರು 50-60 ವರ್ಷಗಳ ಹಿಂದೆಯೇ ಕಂದಾಯ ಇಲಾಖೆ ಈ ಜಮೀನನ್ನು ಮಂಜೂರು ಮಾಡಿದೆ ಎಂದು ವಾದಿಸಿದರು.

ಅರ್ಜಿದಾರರ ವಾದವನ್ನು ಆಲಿಸಿದ ನ್ಯಾಯಪೀಠವು, ಅರಣ್ಯ ಸಂರಕ್ಷಣಾಧಿಕಾರಿಗಳು ಹೊರಡಿಸಿದ್ದ ತೆರವು ದೇಶಕ್ಕೆ ತಡೆ ನೀಡಿದೆ. "ಮುಂದಿನ ವಿಚಾರಣೆಯವರೆಗೂ ಅರ್ಜಿದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬಾರದು" ಎಂದು ನ್ಯಾಯಾಲಯ ಆದೇಶಿಸಿತ್ತು.

# ಚಿನ್ನ ಸ್ಮಗ್ಲಿಂಗ್: ನಟಿ ರನ್ಯಾರಾವ್‌ಗೆ ಷರತ್ತುಬದ್ಧ ಜಾಮೀನಿಗೆ ಆದೇಶ

**ಬೆಂಗಳೂರು, ಏ.22:** ಬಹು ಚರ್ಚಿತ ಚಿನ್ನದ ಸ್ಮಗ್ಲಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧನಕ್ಕೊಳಗಾಗಿದ್ದ ನಟಿ ರನ್ಯಾ ರಾವ್‌ಅವರಿಗೆ ದೊಡ್ಡ ರಿಲೀಫ್ ಸಿಕ್ಕಿದೆ. ಪ್ರಕರಣದ ವಿಚಾರಣೆ ನಡೆಸುತ್ತಿದ್ದ ಆರ್ಥಿಕ ಅಪರಾಧಗಳ ತಡೆ ನ್ಯಾಯಾಲಯವು ನಟಿಗೆ ಜಾಮೀನು ಮಂಜೂರು ಮಾಡಿ ಬುಧವಾರ ಆದೇಶ ಹೊರಡಿಸಿದೆ.

ಕಳೆದ ಕೆಲವು ದಿನಗಳಿಂದ ನ್ಯಾಯಾಂಗ ಬಂಧನದಲ್ಲಿದ್ದ ರನ್ಯಾ ರಾವ್, ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿದ್ದರು. ಇಂದು ನ್ಯಾಯಾಲಯದ ಪ್ರಕ್ರಿಯೆಗಳು ಪೂರ್ಣಗೊಂಡ ಬಳಿಕ ಅವರು ಜೈಲಿನಿಂದ ಬಿಡುಗಡೆಯಾಗಲಿದ್ದಾರೆ. ಚಿನ್ನದ ಅಕ್ರಮ ಸಾಗಾಟದ ಗಂಭೀರ ಆರೋಪದ ಮೇಲೆ ತನಿಖಾ ಸಂಸ್ಥೆಗಳು ನಟಿಯನ್ನು ಬಂಧಿಸಿ ವಿಚಾರಣೆ ನಡೆಸಿದ್ದವು.



ಜಾಮೀನು ಅರ್ಜಿಯ ಸುದೀರ್ಘ ವಾದ-ಪ್ರತಿವಾದಗಳನ್ನು ಆಲಿಸಿದ ನ್ಯಾಯಾಧೀಶರು, ಅಂತಿಮವಾಗಿ ಕೆಲವು ಷರತ್ತುಗಳನ್ನು ವಿಧಿಸಿ ಜಾಮೀನು ನೀಡಿದ್ದಾರೆ.

ಈ ಬೆಳವಣಿಗೆಯು ನಟಿ ಹಾಗೂ ಅವರ ಬೆಂಬಲಿಗರಲ್ಲಿ ಹರ್ಷ ತಂದಿದೆ. ಸದ್ಯಕ್ಕೆ ತನಿಖೆ ಮುಂದುವರಿಯುತ್ತಿದ್ದು, ನ್ಯಾಯಾಲಯದ ಆದೇಶದಂತೆ ರನ್ಯಾ ರಾವ್ ಅವರು ತನಿಖಾಧಿಕಾರಿಗಳ ವಿಚಾರಣೆಗೆ ಸಹಕರಿಸಬೇಕಿದೆ.

# ಡಾ.ರಾಜ್ 97ನೇ ಜನ್ಮದಿನಾಚರಣೆ: ನಾಳೆ ಕಂಠೀರವ ಸ್ಟುಡಿಯೋ ಆವರಣದಲ್ಲಿ ಗೀತಗಾಯನ

**ಬೆಂಗಳೂರು, ಏ.22:** ವರನಟ ಡಾ.ರಾಜಕುಮಾರ್ ಅವರ 97ನೇ ಜನ್ಮದಿನಾಚರಣೆಯ ಅಂಗವಾಗಿ ಏ.24ರಂದು ಕಂಠೀರವ ಸ್ಟುಡಿಯೋದ ಆವರಣದಲ್ಲಿ ಗೀತ ಗಾಯನ ಹಾಗೂ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಸ್ಟುಡಿಯೋ ಆವರಣದಲ್ಲಿರುವ ಡಾ. ರಾಜ್‌ಕುಮಾರ್ ಪುಣ್ಯಭೂಮಿಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಡಾ.ರಾಜಕುಮಾರ್ ಪ್ರತಿಷ್ಠಾನದ ಸಹಯೋಗದಲ್ಲಿ ಶುಕ್ರವಾರ ಬೆಳಗ್ಗೆ 10:30ಕ್ಕೆ ಕಾರ್ಯಕ್ರಮ ಆಯೋಜಿಸ ಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ, ಎಂಎಸ್‌ಎಂಇ ಖಾತೆ ರಾಜ್ಯ ಸಚಿವರಾದ ಶೋಭಾ ಕರಂದ್ಲಾಜೆ ಹಾಗೂ ಮಹಾಲಕ್ಷ್ಮೀ ಲೇಔಟ್ ಕ್ಷೇತ್ರದ ಶಾಸಕರಾದ ಕೆ. ಗೋಪಾಲಯ್ಯ ಅವರು ಭಾಗಿಯಾಗಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಕಂಠೀರವ ಸ್ಟುಡಿಯೋ ಪ್ರೈ.ಲಿ. ಅಧ್ಯಕ್ಷರಾದ ಮಹಬೂಬ್ ಪಾಷಾ, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸಾಧು ಕೋಕಿಲ, ವಾರ್ತಾ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಬಿ.ಬಿ.ಕಾವೇರಿ ಮತ್ತು ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಇರಲಿದ್ದಾರೆ.

ಡಾ.ಶಿವರಾಜ್ ಕುಮಾರ್, ರಾಘವೇಂದ್ರ ರಾಜ್‌ಕುಮಾರ್ ಹಾಗೂ ನಿರ್ಮಾಪಕರಾದ ಅಶ್ವಿನಿ ಪುನೀತ್ ರಾಜಕುಮಾರ್ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮದಲ್ಲಿ ಡಾ.ರಾಜಕುಮಾರ್ ಅವರ ಸಮಗ್ರ ಚರಿತ್ರೆಯ ಕೃತಿಕಾರ ದೊಡ್ಡ ಹುಲ್ಲೂರು ರುಕ್ಕೋಜಿ ಉಪನ್ಯಾಸ ನೀಡಲಿದ್ದಾರೆ.



ವಿಕಾಸ್ ವಸಿಷ್ಠ, ಸ್ಪರ್ಶ ಆರ್.ಕೆ ಹಾಗೂ ತಂಡ ದವರಿಂದ ಡಾ.ರಾಜಕುಮಾರ್ ಹಾಡಿರುವ ಗೀತೆಗಳ ಗಾಯನ ಇರಲಿದೆ.

# ಉಗ್ರ ಕೃತ್ಯಕ್ಕೆ ಸಂಚು ಪ್ರಕರಣ: ಟಿ.ನಾಸೀರ್ ಸೇರಿ 7 ಮಂದಿಗೆ 7 ವರ್ಷ ಜೈಲು

**ಬೆಂಗಳೂರು, ಏ.22:** ನಗರದ ಮನೆಯೊಂದರಲ್ಲಿ ಜೀವಂತ ಗ್ರೇನೇಡ್ ಪತ್ತೆ ಹಾಗೂ ಜೈಲಿನಿಂದಲೇ ಉಗ್ರ ಕೃತ್ಯಕ್ಕೆ ಸಂಚು ರೂಪಿಸಿದ ಪ್ರಕರಣ ಸಂಬಂಧ 2008ರ ಬೆಂಗಳೂರು ಸರಣಿ ಬಾಂಬ್ ಸ್ಫೋಟ ಪ್ರಕರಣದ ರೂವಾರಿ, ಲಷ್ಕರ್-ಎ-ತೊಯ್ಬಾ ಸಂಘಟನೆಯ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಟಿ.ನಾಸೀರ್ ಸೇರಿ 7 ಮಂದಿ ಅಪರಾಧಿಗಳಿಗೆ ಎನ್‌ಐಎ ವಿಶೇಷ ನ್ಯಾಯಾಲಯ 7 ವರ್ಷಗಳ ಕಾರಾಗೃಹ ಶಿಕ್ಷೆ ಹಾಗೂ 48 ಸಾವಿರ ರೂ. ದಂಡ ವಿಧಿಸಿದೆ.

ಎಲ್‌ಇಟಿ ಉಗ್ರ ಟಿ.ನಾಸೀರ್, ಆತನ ಸಹಚರರಾದ ಸಯ್ಯೆದ್ ಸುಹೇಲ್, ಮೊಹಮ್ಮದ್ ಉಮರ್, ಜಾಹೀದ್ ತಬ್ರೇಜ್, ಸೈಯದ್ ಮುದಾಸೀರ್ ಪಾಷಾ, ಮೊಹಮ್ಮದ್ ಫೈಜಲ್ ರಬಾನಿ, ಸನ್ಮಾನ್ ಖಾನ್‌ಗೆ ಶಿಕ್ಷೆ ವಿಧಿಸಲಾಗಿದೆ. ಆರೋಪಿಗಳು ಜೈಲಿನಲ್ಲೇ ಕುಳಿತು ಕರ್ನಾಟಕ ಸೇರಿ ದೇಶದ ವಿವಿಧೆಡೆ ವಿಧ್ವಂಸಕ ಕೃತ್ಯ ಎಸಗಲು ಸಂಚು ರೂಪಿಸಿದ್ದರು. ಪ್ರಮುಖವಾಗಿ ವಿವಿಧ ಅಪರಾಧ ಕೃತ್ಯಗಳಲ್ಲಿ ಜೈಲಿಗೆ ಬರುವ ನಿರ್ದಿಷ್ಟ ಸಮುದಾಯದ ಯುವಕರಿಗೆ ಪ್ರಚೋದನೆ ನೀಡಿ, ಉಗ್ರ ಸಂಘಟನೆಗೆ ನೇಮಕ ಮಾಡಿಕೊಳ್ಳುವುದು, ಉಗ್ರ ತರಬೇತಿ ನೀಡುವುದು, ಮತಾಂತರಕ್ಕೂ ಪ್ರಚೋದನೆ ನೀಡುವುದು ಹಾಗೂ ಮೂಲಭೂತವಾದಿಗಳನ್ನಾಗಿ ಮಾಡುವ ಸಂಚು ರೂಪಿಸಿದ್ದರು ಎಂದು ಎನ್‌ಐಎ ತಿಳಿಸಿದೆ.

2023ರಲ್ಲಿ ಸಿಸಿಬಿಯ ಅಂದಿನ ಹೆಚ್ಚುವರಿ ಪೊಲೀಸ್ ಆಯುಕ್ತರಾಗಿದ್ದ ಶರಣಪ್ಪ ಅವರ ನೇತೃತ್ವದ ತಂಡ ಆರ್.ಟಿ.ನಗರದಲ್ಲಿರುವ ಜುನೈದ್ ಅಹ್ಮದ್ ಮನೆ ಮೇಲೆ ದಾಳಿ ನಡೆಸಿತ್ತು. ಈ ವೇಳೆ ಜೀವಂತ ಗ್ರೇನೇಡ್‌ಗಳು ಪತ್ತೆಯಾಗಿತ್ತು. ಈ ಸಂಬಂಧ 2023ರ ಜುಲೈನಲ್ಲಿ ಪ್ರಕರಣ ದಾಖಲಿಸಿಕೊಂಡಿತ್ತು. ಆ ನಂತರ ಆರೋಪಿಗಳಿಂದ ಭಾರೀ ಪ್ರಮಾಣದಲ್ಲಿ ಶಸ್ತ್ರಾಸ್ತ್ರಗಳು, ವಾಕಿಟಾಕಿಗಳು, ಮದ್ದುಗುಂಡುಗಳು ಮತ್ತು ಡಿಜಿಟಲ್ ಸಾಧನಗಳನ್ನು ವಶಕ್ಕೆ ಪಡೆಯಲಾಗಿತ್ತು. ಬಳಿಕ ಉಗ್ರ ಸಂಘಟನೆ ಕೃತ್ಯ ಬಯಲಾದ ಮೇರೆಗೆ ಎನ್‌ಐಎ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿತ್ತು.

ಈ ವೇಳೆ ಎಲ್‌ಇಟಿ ಸಂಘಟನೆಯ ಟಿ.ನಾಸೀರ್ ಕೈವಾಡದ ಬಗ್ಗೆ ಮಾಹಿತಿ ದೊರಕಿತ್ತು. ಮತ್ತೊಂದು ಸ್ಫೋಟಕ ವಿಚಾರವೆಂದರೆ, ಜೀವಾವಧಿ ಶಿಕ್ಷೆಗೆ ಗುರಿಯಾಗಿ ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಟಿ.ನಾಸೀರ್‌ನನ್ನು ಜೈಲಿನಿಂದ ನ್ಯಾಯಾಲಯಕ್ಕೆ ಕರೆದೊಯ್ಯುವ ಮಾರ್ಗ ಮಧ್ಯೆಯೇ ತಪ್ಪಿಸಿಕೊಳ್ಳಲು ಅನುಕೂಲವಾಗುವಂತೆ ದೊಡ್ಡ ಸಂಚು ರೂಪಿಸಲಾಗಿತ್ತು.

ಈ ಸಂಬಂಧ ಪ್ರಕರಣದ ಮಾಸ್ಟರ್ ಮೈಂಡ್, ವಿದೇಶದಲ್ಲಿ ತಲೆಮರೆಸಿ ಕೊಂಡಿರುವ ಜುನೈದ್ ಅಹ್ಮದ್ ಮತ್ತು ಬಂಧಿತ 11 ಆರೋಪಿಗಳ ವಿರುದ್ಧ ಎನ್‌ಐಎ ಆರೋಪಪಟ್ಟಿ ಸಲ್ಲಿಸಿತ್ತು. ಮತ್ತೊಂದೆಡೆ ಸೂಕ್ಷ್ಮ ತನಿಖೆ ನಡೆಸಿ ಎನ್‌ಐಎ, ರುವಾಂಡದಲ್ಲಿರುವ ತನಿಖಾ ಸಂಸ್ಥೆಗಳ ಸತತ ಪ್ರಯತ್ನದಿಂದ ಅಪರಾಧಿ ಸನ್ಮಾನ್ ಖಾನ್‌ನನ್ನು ರವಾಂಡ ದೇಶದಿಂದ ಗಡಿಪಾರು ಮಾಡಿಸಿಕೊಂಡು ದೇಶಕ್ಕೆ ಬಂದಾಗ ಬಂಧಿಸಲಾಗಿತ್ತು. ಸದ್ಯ ವಿದೇಶದಲ್ಲಿರುವ ಜುನೈದ್ ಅಹ್ಮದ್‌ಗಾಗಿ ಶೋಧ ಕಾರ್ಯ ಮುಂದುವರೆದಿದೆ ಎಂದು ಎನ್‌ಐಎ ತಿಳಿಸಿದೆ.

# ಕಟ್ಟಡ, ಇತರ ನಿರ್ಮಾಣ ಕಾರ್ಮಿಕರ ಆರೋಗ್ಯ ರಕ್ಷಣೆ ಹೈಟೆಕ್ ಸಂಚಾರಿ ಆರೋಗ್ಯ ಘಟಕ

**ಬೆಂಗಳೂರು, ಏ.22:** ರಾಜ್ಯದ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಆರೋಗ್ಯ ರಕ್ಷಣೆಗೆ ಸರ್ಕಾರ ಮಹತ್ವದ ಹೆಜ್ಜೆಯನ್ನಿಟ್ಟಿದೆ. ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಹೈಟೆಕ್ ಸಂಚಾರಿ ಆರೋಗ್ಯ ಘಟಕ ಕಾರ್ಯಕ್ರಮವನ್ನು ಜಾರಿಗೆ ತರಲಾಗಿದ್ದು, ಇನ್ಮುಂದೆ ಕಾರ್ಮಿಕರು ಕೆಲಸ ಮಾಡುವ ಸ್ಥಳದಲ್ಲೇ ಉಚಿತ ಚಿಕಿತ್ಸೆ ಪಡೆಯಬಹುದಾಗಿದೆ.

ಶಂಕರ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಗೋಪಾಲಯ್ಯ ಭರವಸೆ

# ಮುಂದಿನ ವರ್ಷದೊಳಗೆ ಮಹಾಲಕ್ಷ್ಮೀ ಲೇಔಟ್‌ನಲ್ಲಿ ಶಂಕರಾಚಾರ್ಯರ ಬೃಹತ್ ಪ್ರತಿಮೆ ಸ್ಥಾಪನೆ

**ಬೆಂಗಳೂರು, ಏ.22:** ಮುಂದಿನ ವರ್ಷ ಶಂಕರ ಜಯಂತಿಗೂ ಮುನ್ನ ಮಹಾಲಕ್ಷ್ಮಿ ಲೇಔಟ್‌ನಲ್ಲಿ ಆದಿಶಂಕರಾಚಾರ್ಯರ ಬೃಹತ್ ಪ್ರತಿಮೆ ಸ್ಥಾಪಿಸಲಾಗುವುದು ಎಂದು ಶಾಸಕ ಕೆ. ಗೋಪಾಲಯ್ಯ ಭರವಸೆ ನೀಡಿದ್ದಾರೆ.

ಶಂಕರ ಜಯಂತಿ ಅಂಗವಾಗಿ ಮಹಾಲಕ್ಷ್ಮಿಪುರದ ಬ್ರಾಹ್ಮಣ ಮಹಾಸಭಾ ಮಂಗಳವಾರ ಮಹಾಲಕ್ಷ್ಮಿ ಲೇಔಟ್‌ನಲ್ಲಿ ಏರ್ಪಡಿಸಿದ್ದ ತತ್ವಜ್ಞಾನಿಗಳ ದಿನಾಚರಣೆಯಲ್ಲಿ ಮಾತನಾಡಿದ ಅವರು, ಪ್ರತಿಮೆ ನಿರ್ಮಾಣಕ್ಕಾಗಿ ಜಾಗ ಗುರುತಿಸುವ ಪ್ರಕ್ರಿಯೆ ನಡೆದಿದ್ದು ಶೀಘ್ರದಲ್ಲೇ ಅಂತಿಮಗೊಳಿಸಲಾಗುವುದು ಎಂದೂ ತಿಳಿಸಿದರು.

ದೇವಾಲಯಗಳ ಕ್ಷೇತ್ರ ಎಂದೇ ಹೆಸರಾದ ಮಹಾಲಕ್ಷ್ಮಿ ಲೇಔಟ್ ಬೆಂಗಳೂರು ನಗರದ ಪ್ರವಾಸಿ ಕೇಂದ್ರವಾಗಿಯೂ ಅಭಿವೃದ್ಧಿ ಆಗುತ್ತಿದ್ದು ಮುಂದಿನ ವರ್ಷ ಶಂಕರಾಚಾರ್ಯರ ಬೃಹತ್ ಪ್ರತಿಮೆ ಅನಾವರಣದೊಂದಿಗೆ ಶಂಕರ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಗುವುದು.

ವಿದಾನಸಭಾ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ನೀಡುವ ಅನುದಾನವನ್ನು ಬಳಸಿಕೊಂಡು ಈ ಯೋಜನೆ ಪೂರ್ಣಗೊಳಿಸಲಾಗುವುದಲ್ಲದೇ ಇದನ್ನೊಂದು ಪ್ರಮುಖ ಆಧ್ಯಾತ್ಮಿಕ ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಗೊಳಿಸುವ ಯೋಜನೆಯೂ ಇದರಲ್ಲಿ ಸೇರಿದೆ ಎಂದರು.




ಶಂಕರಜಯಂತಿ ಹಾಗೂ ತತ್ವಜ್ಞಾನಿಗಳ ದಿನಾಚರಣೆ ಅಂಗವಾಗಿ ಮಂಗಳವಾರ ಮಹಾಲಕ್ಷ್ಮಿ ಲೇಔಟ್ ಬ್ರಾಹ್ಮಣ ಮಹಾಸಭಾ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ರಾಜ್ಯ ಹೈಕೋರ್ಟ್ ನ ನ್ಯಾಯಮೂರ್ತಿ ವಿ. ಶ್ರೀಶಾನಂದ, ಶಾಸಕ ಕೆ. ಗೋಪಾಲಯ್ಯ, ರಾಜ್ಯದ ಹೆಚ್ಚುವರಿ ಅಡ್ವೊಕೇಟ್ ಜನರಲ್ ಮಲ್ಹಾರಿರಾವ್ ಹಾಗೂ ಮಹಾ ಸಭಾ ಅಧ್ಯಕ್ಷ ಡಾ. ಬಿ.ಎಸ್. ರಾಘವೇಂದ್ರ ಭಟ್ ಪಾಲ್ಗೊಂಡಿದ್ದರು.

ರಾಜ್ಯದ ಹೆಚ್ಚುವರಿ ಅಡ್ವೊಕೇಟ್ ಜನರಲ್ ಮಲ್ಹಾರಿರಾವ್ ಉಪಸ್ಥಿತರಿದ್ದರು. ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಡಾ. ಬಿ.ಎಸ್. ರಾಘವೇಂದ್ರ ಭಟ್ ಮಾತನಾಡಿದರು. ವೇದ ವಿದ್ವಾಂಸರಾದ ಡಾ. ರಾಮಚಂದ್ರಭಟ್ ಕೋಟೆಮನೆ, ವಿದ್ವಾನ್ ಉಮಾಕಾಂತ ಭಟ್ ಕೆರೆಕೈ ,ಮಹಾಬಲೇಶ್ವರ ಭಟ್, ತಿರುಪತಿ ವಿಶ್ವ ವಿದ್ಯಾನಿಲಯದ ವೇದಾಂತ ವಿಭಾಗದ ಮುಖ್ಯಸ್ಥರಾದ ಡಾ. ಕೆ. ಗಣಪತಿ ಭಟ್, ಡಾ. ಚಂದ್ರಕಾಂತ ಸೋಮಯಾಜಿ ಅವರಿಗೆ ಶಂಕರಸೇವಾ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಆದಿ ಶಂಕರಾಚಾರ್ಯರ ಕುರಿತ ಸಂಕ್ಷಿಪ್ತ ವಿವರಗಳನ್ನು ನೀಡುವ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಸಮಾಜ ಸೇವೆಯಲ್ಲಿ ಗುರುತಿಸಿಕೊಂಡಿರುವ ಶ್ರೀಮತಿ ರಾಜೇಶ್ವರಿ ರಮೇಶ್, ಹಾಗೂ ಶೇಷಗಿರಿರಾವ್ ದಂಪತಿಯನ್ನು ಸನ್ಮಾನಿಸಲಾಯಿತು.

**ಜಗತ್ತಿಗೆ ಅದ್ವೈತ ತತ್ವದ ದೊಡ್ಡ ಆಧ್ಯಾತ್ಮಿಕ ಸಂಪತ್ತು ನೀಡಿದ್ದು ಶಂಕರಾಚಾರ್ಯ**

ಕರ್ನಾಟಕದ ಪ್ರಸಿದ್ಧ ಯಾತ್ರಾ ಸ್ಥಳ ಶೃಂಗೇರಿಯೂ ಸೇರಿದಂತೆ ಭಾರತದ ನಾಲ್ಕೂ ದಿಕ್ಕುಗಳಲ್ಲಿ ಚತುರಾಮ್ನಾಯ ಪೀಠಗಳನ್ನು ಸ್ಥಾಪಿಸಿ, ಇಡೀ ಜಗತ್ತಿಗೆ ಅದ್ವೈತ ತತ್ವವನ್ನು ಸಾರಿದ ಶಂಕರರು ಲೋಕಕ್ಕೆ ದೊಡ್ಡ ಆಧ್ಯಾತ್ಮಿಕ ಸಂಪತ್ತನ್ನು ನೀಡಿದ್ದಾರೆ. ಅವರ ಜನ್ಮದಿನವನ್ನು ತತ್ವಜ್ಞಾನಿಗಳ ದಿನವಾಗಿ ಆಚರಿಸುತ್ತಿರುವುದು ಹೆಚ್ಚು ಅರ್ಥಪೂರ್ಣವಾಗಿದೆ. ಶಂಕರರ ಪ್ರತಿಮೆ ಸ್ಥಾಪಿಸುವ ಮೂಲಕ ಆಧ್ಯಾತ್ಮದ ಬೆಳಕು ಇನ್ನಷ್ಟು ಪ್ರಜ್ವಲಿಸಬೇಕೆಂಬುದು ತನ್ನ ಹಂಬಲವಾಗಿದೆ ಎಂದೂ ಗೋಪಾಲಯ್ಯ ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ವೇದ ವಿದ್ವಾಂಸರಿಗೆ ಶಂಕರ ಸೇವಾ ಪ್ರಶಸ್ತಿ ಪ್ರದಾನ ಮಾಡಿ ಆಶಯ ಭಾಷಣ ಮಾಡಿದ ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿ ವೇದವ್ಯಾಸಾಚಾರ್ ಶ್ರೀಶಾನಂದ, ಅದ್ವೈತ ತತ್ವವನ್ನು ಜಗತ್ತಿಗೆ ಸಾರಿದ ಶಂಕರಾಚಾರ್ಯರು ಹೊಸ ಲೋಕಜ್ಞಾನದ ಬೆಳಕನ್ನು ನೀಡಿದ್ದಾರೆ. ಶಂಕರರೂ ಸೇರಿದಂತೆ ಆಧುನಿಕ ಕಾಲದ ಕವಿಗಳವರೆಗೆ ಎಲ್ಲರೂ ಶಾಂತಿ, ಸಹಬಾಳ್ವೆಯ ಸಂದೇಶವನ್ನೇ ಸಾರಿದ್ದಾರೆ.

ವಿಜ್ಞಾನದ ಆಚೆಗೂ ಅದರ ವ್ಯಾಪ್ತಿಗೆ ನಿಲುಕದೇ ಇರುವ ಅನೇಕ ವಿಚಾರಗಳನ್ನು ಆಳವಾಗಿ ಅಧ್ಯಯನ ನಡೆಸಿದರೆ ಅನೇಕ ವಿಸ್ಮಯ ಸಂಗತಿಗಳು ಗೋಚರವಾಗುತ್ತವೆ. ಬೌದ್ಧಿಕ ಚಿಂತನೆ ಎಂಬುದು ನಿರಂತರ ಹುಡುಕಾಟದಿಂದ ಮನುಷ್ಯ ಜ್ಞಾನಿ ಆಗುತ್ತಾನೆ ಎಂದೂ ವಿಶ್ಲೇಷಿಸಿದರು.

ಕಾಂಗ್ರೆಸ್‌ಗೆ ಮುಸ್ಲಿಮರ ಅವಶ್ಯಕತೆ ಇದೆಯೇ ಹೊರತು ಸಮುದಾಯಕ್ಕಿಲ್ಲ

# ಸಮಾಜದ ನಾಯಕರನ್ನು ಪಕ್ಷದಲ್ಲಿ ಮೂಲೆಗುಂಪು ಮಾಡಲಾಗುತ್ತಿದೆ: ಮೌಲಾನಾ ಮುಫ್ತಿ ಸಯ್ಯದ್ ಇಬ್ರಾಹಿಂ ಆರೋಪ

**ಬೆಂಗಳೂರು, ಏ.22:** ಸುಮಾರು 70 ವರ್ಷಗಳಿಂದ ಮುಸ್ಲಿಂ ಸಮುದಾಯದಿಂದ ಕಾಂಗ್ರೆಸ್‌ನವರು ಮತ ಪಡೆಯುತ್ತಿದ್ದಾರೆ. ಆದರೆ ನಮಗೆ ಅನ್ಯಾಯ ಮಾಡಲಾ ಗುತ್ತಿದೆ. ಇದರ ವಿರುದ್ಧ ಮುಂದಿನ ಚುನಾವಣೆಯಲ್ಲಿ ತಕ್ಕ ಉತ್ತರ ನೀಡಬೇಕಾಗುತ್ತದೆ ಎಂದು ಮೌಲಾನ ಮಫ್ತಿ ಸಯ್ಯದ್ ಇಬ್ರಾಹಿಂ ಎಚ್ಚರಿಕೆ ನೀಡಿದ್ದಾರೆ.

ಪ್ರೆಸ್‌ಕ್ಲಬ್‌ನಲ್ಲಿ ಮುಸ್ಲಿಂ ಧರ್ಮಗುರುಗಳು ಬುಧವಾರ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ದಾವಣಗೆರೆ ಉಪಚುನಾವಣೆಯಲ್ಲಿ ಹಿರಿಯ ನಾಯಕರನ್ನು ಮೂಲೆಗುಂಪು ಮಾಡುವ ಕೆಲಸ ಕಾಂಗ್ರೆಸ್ ನಾಯಕರು ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ. ಹಿರಿಯ ನಾಯಕರಾದ ಅಬ್ದುಲ್ ಜಬ್ಬಾರ್, ನಸೀರ್ ಅಹಮದ್ ಅವರು ದೇವರಾಜ ಅರಸು ಕಾಲದಿಂದ ಕಾಂಗ್ರೆಸ್‌ಗೆ ಕೆಲಸ ಮಾಡಿದ್ದಾರೆ. ಈಗ ಇವರನ್ನು ಗುರಿ ಮಾಡಿ ಮೂಲೆಗೆ ಸೇರಿಸಿದ್ದು ಸಮುದಾಯಕ್ಕೆ ಬೇಸರ ತಂದಿದೆ. ಮುಂದಿನ ದಿನಗಳಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಅವರನ್ನು ಗುರಿ ಮಾಡುವುದು ಸರಿಯಲ್ಲ ಎಂದಿದ್ದಾರೆ.



ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು ಮೂರು ವರ್ಷವಾದರೂ ಹಿಜಾಬ್ ಸಮಸ್ಯೆ ಬಗೆಹರಿಸಿಲ್ಲ, ಶೇ.4 ಮೀಸಲಾತಿ ವಾಪಸ್ ನೀಡಿಲ್ಲ. ಸಮುದಾಯದ ನಾಯಕರಿಗೆ ಪಕ್ಷ ಗೌರವ ನೀಡಬೇಕು. ವಿಧಾನಸೌಧದ ಮೂರನೇ ಮಹಡಿಯಲ್ಲಿ ಕೂರುವವರಿಗೆ ಅವಕಾಶ ಮಾಡಿಕೊಟ್ಟಿರುವುದು ಮುಸ್ಲಿಂ ಸಮುದಾಯ, ಅದು ಸಿದ್ದರಾಮಯ್ಯ ಇರಬಹುದು, ಮುಂದೆ ಯಾರೇ ಬರಬಹುದು ಅದಕ್ಕೆ ಮುಸ್ಲಿಂರಿಂದಲೇ ಆಗುತ್ತದೆ. ಕಾಂಗ್ರೆಸ್‌ಗೆ ಮುಸ್ಲಿಂ ಅವಶ್ಯಕತೆ ಇದೆಯೇ ಹೊರತು, ಮುಸ್ಲಿಮರಿಗೆ ಕಾಂಗ್ರೆಸ್‌ನ ಅವಶ್ಯಕತೆ ಇಲ್ಲ. ಕಾಂಗ್ರೆಸ್ ನಿಂದಲೇ ನಮ್ಮ ಹೊಟ್ಟೆ ತುಂಬುತ್ತಿದೆ ಎಂದು ಭಾವಿಸಬೇಡಿ ಎಂದು ಕಿಡಿಕಾರಿದ್ದಾರೆ.

# ಕರಾವಳಿ ಸೇರಿದಂತೆ ಉತ್ತರ, ದಕ್ಷಿಣ ಒಳನಾಡಿನಲ್ಲಿ ಏ.26ರವರೆಗೆ ಸಾಧಾರಣ ಮಳೆ

**ಬೆಂಗಳೂರು, ಏ.22:** ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದಿನ ಒಂದು ವಾರದವರೆಗೆ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಏಪ್ರಿಲ್ 22 ರಿಂದ 26 ರವರೆಗೆ ಕರಾವಳಿ ಸೇರಿದಂತೆ ಉತ್ತರ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಮಳೆಯಾಗುವ ನಿರೀಕ್ಷೆಯಿದೆ. ಇಂದು (ಏಪ್ರಿಲ್ 22) ರಾಜ್ಯದ 17 ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಕಲಬುರಗಿ, ವಿಜಯಪುರ, ಯಾದಗಿರಿ, ರಾಯಚೂರು, ಕೊಪ್ಪಳ, ಗದಗ, ಬಳ್ಳಾರಿ, ವಿಜಯನಗರ, ಹಾವೇರಿ, ದಾವಣಗೆರೆ, ಉತ್ತರ ಕನ್ನಡ, ಬೆಳಗಾವಿ, ಉಡುಪಿ, ದಕ್ಷಿಣ ಕನ್ನಡ, ಹಾಸನ, ಕೊಡಗು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಇಂದು ಮಳೆಯಾಗುವ ಸಾಧ್ಯತೆ.ನಾಳೆ ಬೆಳಗಾವಿ, ಗದಗ, ಹಾವೇರಿ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಕೊಡಗು ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಒಂದೆಡೆ ಮಳೆಯ ಮುನ್ಸೂಚನೆ ಇದ್ದರೂ, ಮತ್ತೊಂದೆಡೆ ರಾಜ್ಯದಲ್ಲಿ ಬಿಸಿಲಿನ ಬೇಗೆ ಮುಂದುವರಿದಿದೆ. ಸುಮಾರು 10ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ತಾಪಮಾನವು 40 ಡಿಗ್ರಿ ಸೆಲ್ಸಿಯಸ್ ಗಡಿ ದಾಟಿದೆ. ಕರಾವಳಿ ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚಿನ ಉಷ್ಣಾಂಶ ದಾಖಲಾಗುತ್ತಿದೆ.





ಪೂಜ್ಯ ಶ್ರೀ ಡಾಕ್ಟರ್ ಚನ್ನಬಸವ ಪಟ್ಟದ್ದೇವರ 27ನೆಯ ಸ್ಮರಣೋತ್ಸವ, ಹಾಗೂ ಡಾಕ್ಟರ್ ಬಸವಲಿಂಗಪಟ್ಟದ್ದೇವರ ಅಮೃತ ಮಹೋತ್ಸವದ ಹಾರ್ದಿಕ ಶುಭಾಶಯಗಳನ್ನು ವಿ.ಬಿ.ಬಿರಾದರ್ ಕೋರಿದ್ದಾರೆ.

### ಕುಟ್ಟ ಠಾಣೆಯಲ್ಲಿ ಪ್ರಕರಣ ದಾಖಲು, ಆರೋಪಿಗಳು ನ್ಯಾಯಾಂಗ ಬಂಧನಕ್ಕೆ

## ಮಾದಕ ದ್ರವ್ಯ ನೀಡಿ ಅಮೆರಿಕ ಮಹಿಳೆ ಮೇಲೆ ಅತ್ಯಾಚಾರ: ಇಬ್ಬರ ಬಂಧನ

**ಮಡಿಕೇರಿ, ಏ.22:** ಜಿಲ್ಲೆಯ ಪೊನ್ನಂಪೇಟೆ ತಾಲೂಕಿನ ಕುಟ್ಟ ಪೊಲೀಸ್ ಠಾಣೆ ವ್ಯಾಪ್ತಿಯ ಕುಟ್ಟ ಗ್ರಾಮದ ಹೋಂಸ್ಟೇವೊಂದರಲ್ಲಿ ಅಮೆರಿಕದ ಮಹಿಳೆಗೆ ಮಾದಕ ದ್ರವ್ಯ ಬೆರೆಸಿದ ಪಾನೀಯ ನೀಡಿ ಅತ್ಯಾಚಾರ ಎಸಗಲಾಗಿದೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರನ್ನು ಬಂಧಿಸಲಾಗಿದೆ.

ವಾಷಿಂಗ್ಟನ್ ಮೂಲದ ಮಹಿಳೆ ಇಲ್ಲಿನ ಖಾಸಗಿ ಹೋಂಸ್ಟೇನಲ್ಲಿ ವಾಸ್ತವ್ಯ ಹೂಡಿದ್ದ ವೇಳೆ, ಜಾರ್ಖಂಡ್ ಮೂಲದ ವೃಜೇಶ್ ಕುಮಾರ್ ಎಂಬಾತ ಅತ್ಯಾಚಾರ ಎಸಗಿದ್ದಾನೆ ಎನ್ನುವುದು ಪೊಲೀಸರ ತನಿಖೆಯಿಂದ ತಿಳಿದು ಬಂದಿದೆ.

ಈ ಸಂಬಂಧ ಕುಟ್ಟ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ವೃಜೇಶ್ ಕುಮಾರ್‌ನನ್ನು ಬಂಧಿಸಿದ್ದಾರೆ. ಇದೇ ಪ್ರಕರಣದಲ್ಲಿ ಹೋಂಸ್ಟೇ ಮಾಲೀಕನ ವಿರುದ್ಧವೂ ಆರೋಪಗಳಿದ್ದು ಆತನನ್ನು ಸಹ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಗಳು ಮತ್ತು ಹೋಂಸ್ಟೇ ಮಾಲೀಕರಿಬ್ಬರನ್ನೂ ಸ್ಥಳೀಯ ನ್ಯಾಯಾಲಯವು ಮೇ 3ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

ಭಾರತಕ್ಕೆ ಭೇಟಿ ನೀಡಿದ್ದ ಮಹಿಳೆ ಕುಟ್ಟಾ ಗ್ರಾಮದ ಹೋಂಸ್ಟೇಯಲ್ಲಿ ತಂಗಿದ್ದರು. ಹೋಂಸ್ಟೇ ಮಾಲೀಕರು ಸಂತ್ರಸ್ತೆಯ ವೈಫೈ ಸಂಪರ್ಕವನ್ನು ಮೂರು ದಿನ ಕಡಿತಗೊಳಿಸಿದ್ದರು, ಇದರಿಂದಾಗಿ ಅವರು ಯಾರನ್ನೂ ಸಂಪರ್ಕಿಸಲು ಅಥವಾ ಸಹಾಯ ಪಡೆಯಲು ಸಾಧ್ಯವಾಗುತ್ತಿರಲಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ತನಗೆ ಮಾದಕ ವಸ್ತು ಬೆರೆಸಿದ ಪಾನೀಯವನ್ನು ನೀಡಿ ಲೈಂಗಿಕ ದೌರ್ಜನ್ಯ ಎಸಗಲಾಗಿದೆ. ಎಂದು ಸಂತ್ರಸ್ತ ಮಹಿಳೆ ಪೊಲೀಸರಿಗೆ ದೂರು ನೀಡಿದ್ದಾರೆ. ಈ ದೂರಿನ ಆಧಾರದಲ್ಲಿ ಪ್ರಕರಣ ದಾಖಲಿಸಿ ಆರೋಪಿಯನ್ನು ವಶಕ್ಕೆ ಪಡೆದಿದ್ದೇವೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

**ಅಮೇರಿಕ ರಾಯಭಾರ ಕಚೇರಿ ಸಂಪರ್ಕ:** ಮೂರು ದಿನಗಳ ನಂತರ ಸಂತ್ರಸ್ತೆ ಹೋಂಸ್ಟೇಯಿಂದ ಹೊರ ಬರುವಲ್ಲಿ ಯಶಸ್ವಿಯಾಗಿದ್ದು, ಮೈಸೂರಿಗೆ ಹೋಗುತ್ತಿರುವುದಾಗಿ ಮಾಲೀಕರಿಗೆ ತಿಳಿಸಿದ್ದಾರೆ. ನಂತರ, ಅವರು ಯುನೈಟೆಡ್ ಸ್ಟೇಟ್ಸ್‌ನ ಅಧಿಕಾರಿಗಳನ್ನು ಸಂಪರ್ಕಿಸಿದ ನಂತರ ಅಮೆರಿಕದ ಅಧಿಕಾರಿಗಳು ಇಮೇಲ್ ಮೂಲಕ ಭಾರತೀಯ ಪೊಲೀಸರನ್ನು ಸಂಪರ್ಕಿಸಿದ್ದಾರೆ. ಅಮೆರಿಕ ರಾಯಭಾರ ಕಚೇರಿ ಅಧಿಕಾರಿಗಳ ಸಂವಹನದ ಮೇರೆಗೆ ಔಪಚಾರಿಕ ಕ್ರಮಗಳನ್ನು ಪ್ರಾರಂಭಿಸಿದ್ದೇವೆ. ಪ್ರಕರಣವನ್ನು ತಕ್ಷಣವೇ ದಾಖಲಿಸಲಾಯಿತು ಮತ್ತು ತನಿಖಾ ತಂಡಗಳನ್ನು ನಿಯೋಜಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಪೊಲೀಸರೊಂದಿಗೆ ಸಂಪರ್ಕ ದಲ್ಲಿರುವ ವಿದೇಶಾಂಗ ಸಚಿವಾಲಯದ



ಅಧಿಕಾರಿಗಳು, ದೆಹಲಿ ಮತ್ತು ಚೆನ್ನೈ ಅಧಿಕಾರಿಗಳು ಪೊಲೀಸರನ್ನು ಸಂಪರ್ಕಿಸಿದ್ದಾರೆ. ವಿಧಿವಿಜ್ಞಾನ ಪರೀಕ್ಷೆ ಮತ್ತು ಡಿಜಿಟಲ್ ಸಾಕ್ಷ್ಯಗಳ ಸಂಗ್ರಹ ಸೇರಿ ಹೆಚ್ಚಿನ ತನಿಖೆ ನಡೆಯುತ್ತಿದೆ. ನಿಷ್ಪಕ್ಷಪಾತ ತನಿಖೆಯನ್ನು ಖಚಿತಪಡಿಸುತ್ತಿದ್ದೇವೆ. ಸಂಭವನೀಯ ತೊಡಕು ಸೇರಿದಂತೆ ಎಲ್ಲಾ ಆಯಾಮಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಅಧಿಕಾರಿ ಹೇಳಿದ್ದಾರೆ.

## ಸಮಗ್ರ ತನಿಖೆ ನಡೆಸಿ ವರದಿ ನೀಡಿ: ಅಧಿಕಾರಿಗಳಿಗೆ ಬೋಸರಾಜು ಖಡಕ್ ಸೂಚನೆ

**ಮಡಿಕೇರಿ, ಏ.22:** ಕೊಡಗು ಜಿಲ್ಲೆಯ ಕುಟ್ಟದ ಖಾಸಗಿ ಹೋಂಸ್ಟೇ ಒಂದರಲ್ಲಿ ಅಮೆರಿಕ ಮೂಲದ ಮಹಿಳೆಯೊಬ್ಬರ ಮೇಲೆ ನಡೆದಿರುವ ದೌರ್ಜನ್ಯ ಪ್ರಕರಣವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಈ ಘಟನೆಯ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್. ಬೋಸರಾಜು, ಪ್ರಕರಣದ ಕುರಿತು ತಕ್ಷಣವೇ ಸಮಗ್ರ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

ಘಟನೆ ಬೆಳಕಿಗೆ ಬರುತ್ತಿದ್ದಂತೆಯೇ ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ ಸಚಿವರು, ಘಟನೆಯ ಸಂಪೂರ್ಣ ವಿವರಗಳನ್ನು ಪಡೆದುಕೊಂಡಿದ್ದಾರೆ. ಈ ಕೃತ್ಯಕ್ಕೆ ಸಂಬಂಧಿಸಿದಂತೆ



ಈಗಾಗಲೇ ಎಫ್‌ಐಆರ್ ದಾಖಲಾಗಿದ್ದು, ಇಬ್ಬರು ಆರೋಪಿಗಳನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ ಎಂದು ತಿಳಿದುಬಂದಿದೆ.

ಜಾಗತಿಕ ಪ್ರವಾಸೋದ್ಯಮದ ನಕ್ಷೆಯಲ್ಲಿ ಪ್ರಮುಖ ಸ್ಥಾನ ಪಡೆದಿರುವ ಕೊಡಗು ಜಿಲ್ಲೆಯಲ್ಲಿ ಇಂತಹ ಘಟನೆ ನಡೆದಿರುವುದು ಜಿಲ್ಲೆಯ ಗೌರವಕ್ಕೆ ಧಕ್ಕೆ ತರುವುದಲ್ಲದೆ, ಪ್ರವಾಸೋದ್ಯಮದ ಮೇಲೆ ಗಂಭೀರ ನಕಾರಾತ್ಮಕ ಪರಿಣಾಮ ಬೀರುತ್ತವೆ. ಆದ್ದರಿಂದ, ಯಾವುದೇ ಮುಲಾಜಿಲ್ಲದೆ ಪ್ರಕರಣದ ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಬೋಸರಾಜು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ.

**ಎಂಎಲ್‌ಸಿ ಸಿ.ಟಿ. ರವಿ ಖಂಡನೆ:** ಈ ಘಟನೆಯನ್ನು ಎಂಎಲ್‌ಸಿ ಸಿ.ಟಿ. ರವಿ ತೀವ್ರವಾಗಿ ಖಂಡಿಸಿದ್ದು, "ಕೊಡಗಿನಲ್ಲಿ ವಿದೇಶಿ ಮಹಿಳೆಯ ಮೇಲೆ ನಡೆದಿರುವ ದೌರ್ಜನ್ಯ ಅತ್ಯಂತ ನಾಚಿಕೆಗೇಡಿನ ಸಂಗತಿ. ಇದು ಭಾರತದ 'ಅತಿಥಿ ದೇವೋ ಭವ' ಸಂಸ್ಕೃತಿಗೆ ಎಸಗಿದ ದ್ರೋಹವಾಗಿದೆ. ಇದು ಕೇವಲ ಒಬ್ಬ ವ್ಯಕ್ತಿಯ ವಿರುದ್ಧದ ಅಪರಾಧವಲ್ಲ,



ಬದಲಾಗಿ ದೇಶದ ಪ್ರತಿಷ್ಠೆಗೆ ಉಂಟಾದ ಕಳಂಕ" ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರವು ತಪ್ಪಿತಸ್ಥರ ವಿರುದ್ಧ ವಿಳಂಬ ಮಾಡದೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದ್ದಾರೆ.

## ಪ್ರಕರಣದ ಕೈಬಿಡಲು ಲಂಚಕ್ಕೆ ಬೇಡಿಕೆ: ಲೋಕಾ ಬಲೆಗೆ ಬಿದ್ದ ಪಿಎಸ್‌ಐ ಹಾಗೂ ಕಾನ್ಸ್‌ಟೇಬಲ್

**ಬಾಗಲಕೋಟೆ, ಏ.22:** ಆರೋಪಿಯೊಬ್ಬನನ್ನು ಪ್ರಕರಣದಿಂದ ಕೈಬಿಡಲು ಪಿಎಸ್‌ಐ 2 ಲಕ್ಷ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟಿದ್ದು, ಲಂಚ ಸ್ವೀಕರಿಸುವ ವೇಳೆ ರೆಡ್‌ಹ್ಯಾಂಡ್ ಆಗಿ ಪಿಎಸ್‌ಐ ಹಾಗೂ ಕಾನ್ಸ್‌ಟೇಬಲ್ ಲೋಕಾಯುಕ್ತ ಬಲೆಗೆ ಸಿಕ್ಕಿಬಿದ್ದಿರುವ ಘಟನೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ಕೆರೂರಿನಲ್ಲಿ ನಡೆದಿದೆ.

ಬಂಧಿತರನ್ನು ಕೆರೂರು ಠಾಣೆಯ ಪಿಎಸ್‌ಐ ಭೀಮಪ್ಪ ರಬಕವಿ ಮತ್ತು ಪೇದೆ ಸಂತೋಷ್ ಬಿರಾದರ್ ಎಂದು ಗುರುತಿಸಲಾಗಿದೆ.



ಇಸ್ಪೀಟ್ ಆಡುವಾಗ ಸಿಕ್ಕಿಬಿದ್ದಿದ್ದ ಆರೋಪಿಯನ್ನು ಪ್ರಕರಣದಿಂದ ಕೈಬಿಡಲು ಹಾಗೂ ಆತನ ಬೈಕ್ ಬಿಡಲು 2 ಲಕ್ಷ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಅದರಂತೆ 1.70 ಲಕ್ಷ ರೂ. ಸ್ವೀಕರಿಸುತ್ತಿದ್ದಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದ್ದಾರೆ.

ಲೋಕಾಯುಕ್ತ ಎಸ್‌ಪಿ ಮಹಾಲಿಂಗ್ ನಂದಗಾಂವಿ ಮಾರ್ಗದರ್ಶನದಲ್ಲಿ, ಲೋಕಾ ಡಿವೈಎಸ್‌ಪಿ ಸುರೇಶ್ ರೆಡ್ಡಿ ನೇತೃತ್ವದಲ್ಲಿ ಈ ದಾಳಿ ನಡೆದಿದೆ. ಲಂಚದ ಬೇಡಿಕೆ ಬಗ್ಗೆ ಮುತ್ತಪ್ಪ ನಾಯ್ಕರ್ ಎಂಬವರು ಲೋಕಾಯುಕ್ತಕ್ಕೆ ದೂರು ನೀಡಿದ್ದರು. ಫೋನ್ ಕರೆ ರೆಕಾರ್ಡಿಂಗ್ ಆಧಾರದ ಮೇಲೆ ದಾಳಿ ಮಾಡಿ ಇಬ್ಬರನ್ನು ಲೋಕಾಯುಕ್ತ ಬಂಧಿಸಿದೆ. ಈ ಬಗ್ಗೆ ಹೆಚ್ಚಿನ ವಿಚಾರಣೆ ನಡೆಯುತ್ತಿದೆ.

## ಭೂಸ್ವಾಧೀನ ಅಧಿಸೂಚನೆ ಪ್ರಕ್ರಿಯೆ ರದ್ದತಿ ಆದೇಶ ಪ್ರಶ್ನಿಸಿದ್ದ ಮೇಲ್ಮನವಿ ಹೈಕೋರ್ಟ್‌ನಲ್ಲಿ ವಜಾ

**ಮೈಸೂರು, ಏ.22:** ಶಾಸನಬದ್ಧ ಪ್ರಾಧಿಕಾರವೊಂದು ಸಾಕಷ್ಟು ವಿಳಂಬವಾಗಿ ಮೇಲ್ಮನವಿ ಸಲ್ಲಿಸಿದೆ ಎಂಬ ಒಂದೇ ಕಾರಣಕ್ಕೆ ಕಾನೂನು ಮಿತಿಗಳನ್ನು ಮೀರಿ ಕಾರ್ಯನಿರ್ವಹಿಸಲಾಗದು ಎಂದು ಅಭಿಪ್ರಾಯಪಟ್ಟಿರುವ ಹೈಕೋರ್ಟ್, ಭೂಸ್ವಾಧೀನ ಪ್ರಕ್ರಿಯೆ ಅಧಿಸೂಚನೆ ರದ್ದುಪಡಿಸಿದ್ದ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ) ಸಲ್ಲಿಸಿದ್ದ ಮೇಲ್ಮನವಿಯನ್ನು ವಜಾಗೊಳಿಸಿದೆ.

ಧರ್ಮಸ್ಥಳ ಗ್ರಾಮದ ಡಾ.ಡಿ.ವೀರೇಂದ್ರ ಹೆಗ್ಗಡೆ ಸೇರಿ ಮತ್ತಿತರರಿಗೆ ಸೇರಿದ್ದ ಜಮೀನಿನ ಸ್ವಾಧೀನಕ್ಕಾಗಿ ಹೊರಡಿಸಿದ್ದ ಪ್ರಾಥಮಿಕ ಮತ್ತು ಅಂತಿಮ ಅಧಿಸೂಚನೆ ರದ್ದುಪಡಿಸಿದ್ದ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಮುಡಾ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನು ಶಿವರಾಮನ್ ಮತ್ತು ನ್ಯಾ.ವಿಜಯಕುಮಾರ್ ಎ.ಪಾಟೀಲ್ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿತು.

ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಸುಮಾರು 460ಕ್ಕೂ ಹೆಚ್ಚು ದಿನಗಳ ವಿಳಂಬವಾಗಿ ಮುಡಾ ಮೇಲ್ಮನವಿ ಸಲ್ಲಿಸಿದೆ. ವಿಳಂಬಕ್ಕೆ ಮುಡಾ ನೀಡಿದ ಕಾರಣಗಳು ಅಸ್ಪಷ್ಟವಾಗಿದ್ದು, ಅಧಿಕಾರಿಗಳ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ. ಕಾನೂನು ಮಿತಿಗಳ ಕಾಯಿದೆ (ಲಿಮಿಟೇಷನ್ ಆಕ್ಟ್)ನ ಉದ್ದೇಶವು ದಾವೆಗಳಿಗೆ ಒಂದು ಅಂತಿಮ ರೂಪ ನೀಡುವುದಾಗಿದೆ. ಅಧಿಕಾರಿಗಳ ವಿಳಂಬ ಮತ್ತು ನಿರ್ಲಕ್ಷ್ಯದ ಧೋರಣೆಯನ್ನು ನ್ಯಾಯಾಲಯವು ಒಪ್ಪಲು ಸಾಧ್ಯವಿಲ್ಲ. ಸೂಕ್ತ ಕಾರಣಗಳಿಲ್ಲದೆ ಇಂತಹ ವಿಳಂಬವನ್ನು ಪುರಸ್ಕರಿಸುವುದು ಸಾರ್ವಜನಿಕ ನೀತಿಗೆ ವಿರುದ್ಧ ಎಂದು ತಿಳಿಸಿ ಮೇಲ್ಮನವಿ ಅರ್ಜಿಯನ್ನು ವಜಾಗೊಳಿಸಿದೆ.

ಅಲ್ಲದೆ, ವಿಳಂಬಕ್ಕೆ ಸಂಬಂಧಿಸಿದಂತೆ ಮುಡಾ ಆಯುಕ್ತರು ಸಲ್ಲಿಸಿರುವ ಪ್ರಮಾಣಪತ್ರ ಅತ್ಯಂತ ಅಸ್ಪಷ್ಟವಾಗಿದೆ. ಈ ವಿಳಂಬವನ್ನು ಪರಿಗಣಿಸುವುದಕ್ಕೆ ಸೂಕ್ತ ವಿವರಣೆ ನೀಡಿಲ್ಲ.

ಇಂತಹ ವಿಳಂಬವನ್ನು ಪರಿಗಣಿಸಿದಲ್ಲಿ ಸತ್ತಂತಿರುವ ಮುಡಾದ ಹಕ್ಕನ್ನು ಮತ್ತೆ ಉಳಿಸಿದಂತಾಗುತ್ತದೆ. ತಮ್ಮ ಹಕ್ಕಿನ ಬಗ್ಗೆ ಶ್ರದ್ಧೆ ಇಲ್ಲದವರ ಪರ ಆದೇಶ ನೀಡಿದಂತಾಗುತ್ತದೆ. ಜೊತೆಗೆ, ಲಿಮಿಟೇಷನ್ ಕಾಯಿದೆಯ ಉದ್ದೇಶ ಮತ್ತು ಸಾರ್ವಜನಿಕ ನೀತಿಗೆ ವಿರುದ್ಧವಾಗಿ




ನಡೆದಂತಾಗಲಿದ್ದು, ಪ್ರತಿವಾದಿಗಳಿಗೆ ದೊಡ್ಡ ಅನ್ಯಾಯವನ್ನುಂಟು ಮಾಡಿದಂತಾಗಲಿದೆ ಎಂದು ಪೀಠ ಹೇಳಿದೆ.

ಮುಡಾ ಆಯುಕ್ತರು ಸಲ್ಲಿಸಿರುವ ಪ್ರಮಾಣಪತ್ರದಲ್ಲಿ ಸಮಂಜಸವಾದ ವಿವರಣೆ ಇಲ್ಲವಾಗಿದ್ದು, ಅಲ್ಲಿನ ಅಧಿಕಾರಿಗಳ ನಿರ್ಲಕ್ಷ್ಯ ಮನೋಭಾವದಿಂದ ವಿಳಂಬಕ್ಕೆ ಕಾರಣವಾಗಿದೆ ಎಂಬ ಅಂಶ ಗೊತ್ತಾಗುತ್ತದೆ. ಆದ್ದರಿಂದ ಮೇಲ್ಮನವಿ ಅರ್ಜಿ ವಜಾಗೊಳಿಸುತ್ತಿರುವುದಾಗಿ ಪೀಠ ತಿಳಿಸಿತು.

ಪ್ರಕರಣದ ಹಿನ್ನೆಲೆ: ಮೈಸೂರಿನ ಆಲನಹಳ್ಳಿ ಗ್ರಾಮದಲ್ಲಿ ಧರ್ಮಸ್ಥಳದ ಡಾ.ಡಿ.ವೀರೇಂದ್ರ ಹೆಗ್ಗಡೆ ಸೇರಿದಂತೆ ಮತ್ತಿತರರಿಗೆ ಸೇರಿದ್ದ ವಿವಿಧ ಸರ್ವೇ ನಂಬರ್‌ಗಳ ಜಮೀನುಗಳನ್ನು ಆಲನಹಳ್ಳಿ 2ನೇ ಹಂತದ ಬಡಾವಣೆ ನಿರ್ಮಾಣಕ್ಕಾಗಿ ಭೂಸ್ವಾಧೀನಪಡಿಸಿಕೊಳ್ಳಲು 1992ರ ಜೂನ್ 25ರಂದು ಪ್ರಾಥಮಿಕ ಮತ್ತು 1996ರ ಮಾರ್ಚ್ 18ರಂದು ಮುಡಾ ಅಂತಿಮ ಅಧಿಸೂಚನೆ ಹೊರಡಿಸಿತ್ತು.

ಇದನ್ನು ಪ್ರಶ್ನಿಸಿ ಭೂಮಾಲೀಕರಾದ ಡಾ.ಡಿ.ವೀರೇಂದ್ರ ಹೆಗ್ಗಡೆ ಮತ್ತು ಸಿ.ನಾಗರಾಜು ಎಂಬವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಏಕಸದಸ್ಯ ಪೀಠ, ಭೂ ಸ್ವಾಧೀನಕ್ಕೆ ಹೊರಡಿಸಿದ್ದ ಅಧಿಸೂಚನೆಗಳನ್ನು 2022ರ ಆಗಸ್ಟ್ 1ರಂದು ರದ್ದುಪಡಿಸಿ ಆದೇಶಿಸಿತ್ತು. ಇದನ್ನು ಪ್ರಶ್ನಿಸಿ ಮುಡಾ, ದ್ವಿಸದಸ್ಯ ಪೀಠಕ್ಕೆ ಮೇಲ್ಮನವಿ ಅರ್ಜಿ ಸಲ್ಲಿಸಿತ್ತು.

## ಅನಧಿಕೃತ ಸಾರಾಯಿ ಅಂಗಡಿಗಳ ಮೇಲೆ ನಿಗಾ ಇಡಿ: ಅಕ್ರಮ ಚಟುವಟಿಕೆ ಕಂಡುಬಂದರೆ ಕ್ರಮ ಕೈಗೊಳ್ಳಿ: ಡಿ.ಸಿ ಸ್ನೇಹಲ್ ಸೂಚನೆ

**ಧಾರವಾಡ, ಏ.22:** ಜಿಲ್ಲೆಯಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುವ ಸಾರಾಯಿ ಅಂಗಡಿಗಳ ವಿರುದ್ಧ ತೀವ್ರ ನಿಗಾ ವಹಿಸಬೇಕು. ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆ, ತಪಾಸಣೆ ಕಾರ್ಯವನ್ನು ಮತ್ತಷ್ಟು ಬಲಪಡಿಸಿ. ಯಾವುದೇ ಸ್ಥಳದಲ್ಲಿ ಅಕ್ರಮ ಚಟುವಟಿಕೆ ಕಂಡುಬಂದಲ್ಲಿ ತಕ್ಷಣವೇ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಅಬಕಾರಿ ಇಲಾಖೆಯ ಸಾಯಿ ಸಮಿತಿ ಸಭೆ ಜರುಗಿಸಿ, ಮಾತನಾಡಿದರು.ನಕಲಿ ಸಾರಾಯಿ ಹಾಗೂ ಕಳ್ಳ ಬಟ್ಟಿ ಸಾರಾಯಿ ತಯಾರಿಕೆ ಪ್ರಕರಣಗಳು ಸಾರ್ವಜನಿಕ ಆರೋಗ್ಯಕ್ಕೆ ಗಂಭೀರ ಅಪಾಯ ಉಂಟುಮಾಡುವ ಹಿನ್ನೆಲೆಯಲ್ಲಿ, ಇವುಗಳ ನಿರ್ಮೂಲನೆಗೆ ವಿಶೇಷ ತಂಡಗಳನ್ನು ರಚಿಸಿ. ಇಂತಹ ಮದ್ಯ ಸೇವನೆಯಿಂದ ಜನರ ಆರೋಗ್ಯ ಹಾನಿಯಾಗುವ ಸಾಧ್ಯತೆ ಇರುವುದರಿಂದ, ಈ ಚಟುವಟಿಕೆಗಳನ್ನು ಸಂಪೂರ್ಣವಾಗಿ ತಡೆಯಲು ಎಲ್ಲರೂ ಸಹಕರಿಸಬೇಕು ಎಂದು ತಿಳಿಸಿದರು.

ಗೋವಾ ರಾಜ್ಯದಿಂದ ಅಕ್ರಮವಾಗಿ ಮದ್ಯ ಸಾಗಾಟವಾಗುತ್ತಿರುವ ಬಗ್ಗೆ ಗಮನ ಹರಿಸಿ, ಜಿಲ್ಲೆಯ ಗಡಿಭಾಗಗಳಲ್ಲಿ ತಪಾಸಣೆ ಕಠಿಣಗೊಳಿಸಿ, ವಿಶೇಷವಾಗಿ ರಾತ್ರಿ ವೇಳೆಯಲ್ಲಿ ವಾಹನಗಳ ಪರಿಶೀಲನೆ ಹೆಚ್ಚಿಸಿ, ಸಂಶಯಾಸ್ಪದ ವಾಹನಗಳನ್ನು ತಡೆದು ಪರಿಶೀಲನೆ ನಡೆಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಉದ್ಯೋಗದ ಕೊರತೆ ಮತ್ತು ವ್ಯಸನಿ ವ್ಯಕ್ತಿಗಳ ಪರಿಣಾಮವಾಗಿ ಹಲವಾರು ಯುವಕರು ವ್ಯಸನಗಳಿಗೆ ಒಳಗಾಗುತ್ತಿರುವುದು ಗಮನಕ್ಕೆ ಬಂದಿದೆ. ಇದನ್ನು ತಡೆಯಲು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು, ಅರಿವು ಮೂಡಿಸುವ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಅವರು ತಿಳಿಸಿದರು. ವ್ಯಸನಕ್ಕೆ ಒಳಗಾದ ಯುವಕರನ್ನು ಗುರುತಿಸಿ, ಅವರಿಗೆ ಸಮಾಲೋಚನೆ ಹಾಗೂ ಪುನರ್ವಸತಿ ಸೇವೆಗಳನ್ನು ಒದಗಿಸುವತ್ತ ಗಮನ ಹರಿಸಬೇಕು. ಕೇವಲ ದಂಡಾತ್ಮಕ ಕ್ರಮಗಳಷ್ಟೇ ಅಲ್ಲದೆ, ಸಾಮಾಜಿಕ ಜವಾಬ್ದಾರಿಯ ದೃಷ್ಟಿಯಿಂದ ಅವರನ್ನು ಸರಿಯಾದ ದಾರಿಗೆ ತರುವ ಪ್ರಯತ್ನಗಳು ನಡೆಯಬೇಕು ಎಂದು ಅವರು ಹೇಳಿದರು. ಸಾರ್ವಜನಿಕರ ಸಹಕಾರವೂ ಅತ್ಯಂತ ಅಗತ್ಯವಾಗಿದ್ದು, ಅಕ್ರಮ ಸಾರಾಯಿ ಮಾರಾಟ ಅಥವಾ ವ್ಯಸನ ಸಂಬಂಧಿತ ಯಾವುದೇ ಮಾಹಿತಿ ದೊರೆತಲ್ಲಿ, ತಕ್ಷಣವೇ ಅಬಕಾರಿ ಇಲಾಖೆಗೆ ತಿಳಿಸಲು ಜಾಗೃತಿ ಮೂಡಿಸಲು ಕ್ರಮವಹಿಸಬೇಕು. ಮಾಡಲಾಯಿತು. ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಎಲ್ಲರ ಸಹಭಾಗಿತ್ವ ಅಗತ್ಯವೆಂದು ಅವರು ತಿಳಿಸಿದರು.

ಯುವಕರಲ್ಲಿ ಹೆಚ್ಚುತ್ತಿರುವ ಮಾದಕ ವಸ್ತುಗಳ ಬಳಕೆ ಹಾಗೂ ಅದರ ಪರಿಣಾಮಗಳನ್ನು ನಿಯಂತ್ರಿಸುವ ಉದ್ದೇಶದಿಂದ ಪೊಲೀಸ್ ಇಲಾಖೆಯವರು ಸನಿತ್ರರ ಎಂಬ ವಿಶೇಷ ಕಾರ್ಯಕ್ರಮವನ್ನು ನಡೆಸುತ್ತಿದ್ದಾರೆ. ಈ ಕಾರ್ಯಕ್ರಮದ ಮೂಲಕ ಗಾಂಜಾ ಸೇರಿದಂತೆ ಇತರೆ ಮಾದಕ ವಸ್ತುಗಳ ಬಳಕೆ, ಸಾಗಾಟ ಮತ್ತು ವಿತರಣೆಯ ಮೇಲೆ ನಿಗಾ ವಹಿಸಿದ್ದಾರೆ. ಇಂತಹ ಕಾರ್ಯಗಳು ಇಲಾಖೆಗಳ ಪರಸ್ಪರ ಸಮನ್ವಯದಿಂದ ಆಗಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಮಾತನಾಡಿ, ಮಾದಕ ವಸ್ತುಗಳಿಗೆ ಒಳಗಾಗಿರುವ ಅಥವಾ ಅವುಗಳ ಚಟುವಟಿಕೆಗಳಲ್ಲಿ ತೊಡಗಿರುವ ವ್ಯಕ್ತಿಗಳನ್ನು ಗುರುತಿಸಿ, ಅವರ ಚಲನವಲನಗಳ ಮೇಲೆ ನಿಗಾ ಇಡಲಾಗುತ್ತದೆ. ಅವರ ಸಂಪರ್ಕ ವಲಯ, ಆರ್ಥಿಕ ಚಟುವಟಿಕೆಗಳು ಹಾಗೂ ಸಂಶಯಾಸ್ಪದ ವರ್ತನೆಗಳನ್ನು ಗಮನಿಸಿ, ಅಗತ್ಯವಿದ್ದಲ್ಲಿ ತನಿಖೆ ನಡೆಸಲಾಗುತ್ತದೆ. ಇದರ ಮೂಲಕ ಮಾದಕ ವಸ್ತುಗಳ ಜಾಲವನ್ನು ಪತ್ತೆಹಚ್ಚಿ, ದೊಡ್ಡ ಮಟ್ಟದ ಜಾಲವನ್ನು ಭೇದಿಸುವುದು ಸಾಧ್ಯವಾಗುತ್ತದೆ ಎಂದು ಹೇಳಿದರು. ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ, ವ್ಯಸನಕ್ಕೆ ಒಳಗಾದವರನ್ನು ಪುನರ್ವಸತಿ ಕೇಂದ್ರಗಳಿಗೆ ಕಳುಹಿಸುವ ವ್ಯವಸ್ಥೆಯನ್ನು ಮಾಡಬೇಕು. ಈ ಕಾರ್ಯಕ್ರಮದ ಮುಖ್ಯ ಉದ್ದೇಶ ಸಮಾಜವನ್ನು ಮಾದಕ ವಸ್ತುಗಳ ಹಾನಿಯಿಂದ ರಕ್ಷಿಸುವುದಾಗಿದೆ. ಕೇವಲ ಅಪರಾಧಿಗಳನ್ನು ಬಂಧಿಸುವುದರಿಂದ ಇಲಾಖೆ ಕೆಲಸ ಅಲ್ಲ, ಯುವಕರನ್ನು ಸರಿಯಾದ ದಾರಿಗೆ ತರುವುದಕ್ಕೂ ಆದ್ಯತೆ ನೀಡಲಾಗಿದೆ ಎಂದು ಅವರು ತಿಳಿಸಿದರು. ಅಬಕಾರಿ ಇಲಾಖೆಯ



ಉಪಆಯುಕ್ತ ರಮೇಶಕುಮಾರ ಎಚ್. ಪ್ರಾಸ್ತಾವಿಕವಾಗಿ ಮಾತನಾಡಿ, ಅಬಕಾರಿ ಇಲಾಖೆಯಿಂದ ಕೈಗೊಂಡ ನಿಯಂತ್ರಣ ಕ್ರಮಗಳನ್ನು ಮತ್ತು ಪರಿಹಾರ ಕ್ರಮಗಳನ್ನು ವಿವರಿಸಿದರು.

ಅಬಕಾರಿ ಅಧೀಕ್ಷಕ ಮಂಜುನಾಥ ಅರೆಗುಳ ಅವರು ಸ್ವಾಗತಿಸಿ, ವಂದಿಸಿದರು.ಸಭೆಯಲ್ಲಿ ಸಹಾಯಕ ಪೊಲೀಸ್ ಆಯುಕ್ತ ಪ್ರಶಾಂತ ಸಿದ್ದನಗೌಡರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಡಾ. ಎಚ್.ಎಚ್.ಕುಕನೂರ, ಜಿಲ್ಲಾ ಪಂಚಾಯತ ಸಹಾಯಕ ಕಾರ್ಯದರ್ಶಿ ಅಜಯ ಎನ್., ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಎಮ್. ಹೊನಕೇರಿ ಸೇರಿದಂತೆ ಅಬಕಾರಿ, ಪೊಲೀಸ್ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಉಪಸ್ಥಿತರಿದ್ದರು. ಜಿಲ್ಲೆಯ ಎಲ್ಲ ತಹಶಿಲ್ದಾರರು ವಿಡಿಯೋ ಸಂವಾದ ಮೂಲಕ ಭಾಗವಹಿಸಿದ್ದರು.

## ಮಿನಿಸ್ಟರ್‌ಗಳಿಗೂ ಪಾಲು ಕೊಡಬೇಕ್ರೀ, ರಾಜಾರೋಷವಾಗಿ ಲಂಚ ಬೇಡಿದ ಅಧಿಕಾರಿ

**ರಾಯಚೂರು, ಏ. 22:** ಜಿಲ್ಲೆಯ ಲಿಂಗಸುಗೂರು ಪಟ್ಟಣದ ಯೋಜನಾ ಪ್ರಾಧಿಕಾರದ ಕಚೇರಿಯಲ್ಲಿ ಅಧಿಕಾರಿಯೊಬ್ಬರ 'ಲಂಚಾವತಾರ' ಬಯಲಾಗಿದ್ದು, ಲಂಚಕ್ಕಾಗಿ ಬೇಡಿಕೆ ಯಿಡುತ್ತಿರುವ ವಿಡಿಯೋ ಈಗ ಜಿಲ್ಲೆಯಾದ್ಯಂತ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತ ಭಾರಿ ಸಂಚಲನ ಮೂಡಿಸಿದೆ.

ಲಿಂಗಸುಗೂರು ತಾಲ್ಲೂಕು ಟೌನ್ ಪ್ಲಾನಿಂಗ್ ಅಧಿಕಾರಿ ಶರಣಪ್ಪ ಮಡಿವಾಳರ ಎಂಬುವವರೇ ವಿಡಿಯೋದಲ್ಲಿ ಸಿಕ್ಕಿಬಿದ್ದ ಅಧಿಕಾರಿ. ಲೇ–ಔಟ್ ಒಂದರ ಮ್ಯಾಪ್ (ನಕ್ಷೆ) ಅನುಮೋದನೆ ಮಾಡಿಕೊಡಲು ಇವರು ನೇರವಾಗಿಯೇ ವ್ಯಕ್ತಿಯೊಬ್ಬರ ಬಳಿ 3,60,000 ರೂ ಲಂಚಕ್ಕೆ ಬೇಡಿಕೆಯಿಟ್ಟಿದ್ದಾರೆನ್ನಲಗಿದೆ. ಹಣದ ಮಾತುಕತೆ ನಡೆಯುವ ವೇಳೆ ಕಚೇರಿಯ ಸಿಬ್ಬಂದಿ ಒಳಗೆ ಬಂದಾಗ, ಅವರನ್ನು ದಬಾಯಿಸಿ ಹೊರಗೆ ಕಳುಹಿಸಿ ಡೀಲ್ ಮುಂದುವರಿಸುವ ಮೂಲಕ ಅಧಿಕಾರಿಯ ಧನದಾಹದ



ಮಾತುಕತೆಗಳು ರೆಕಾರ್ಡ್ ಆಗಿ ಈಗ ಜಗಜ್ಜಾಹೀರಾಗಿದೆ.

ಸಚಿವರಿಗೂ ಪಾಲು ಕೊಡಬೇಕೆಂದ ಅಧಿಕಾರಿ!: ವಿಡಿಯೋದಲ್ಲಿರುವ ಮತ್ತೊಂದು ಆಘಾತಕಾರಿ ಅಂಶವೆಂದರೆ, ಅಧಿಕಾರಿ ಶರಣಪ್ಪ ಅವರು "ಈ ಲಂಚದ ಹಣದಲ್ಲಿ ಮಿನಿಸ್ಟರ್ (ಸಚಿವರಿಗೂ) ಪಾಲು ನೀಡಬೇಕು" ಎಂದು ಹೇಳಿರುವುದು. ರಿಯಲ್ ಎಸ್ಟೇಟ್ ಮಾಡುವವರು ಸರ್ಕಾರಿ ನಿಯಮಗಳನ್ನು ಗಾಳಿಗೆ ತೂರಿದರೂ ಪರವಾಗಿಲ್ಲ, ತಮಗೆ ಮಾತ್ರ ಹಣ ತಲುಪಬೇಕು ಎಂಬಂತೆ ವರ್ತಿಸುತ್ತಿರುವುದು ವಿಡಿಯೋದಲ್ಲಿ ಸ್ಪಷ್ಟವಾಗಿ ಸೆರೆಯಾಗಿದೆ.

ಲೇ–ಔಟ್‌ಗಳಲ್ಲಿ ಸಾರ್ವಜನಿಕ ರಸ್ತೆ, ಚರಂಡಿ, ಉದ್ಯಾನವನ ಮತ್ತು ಬೀದಿ ದೀಪಗಳಿಗೆ ಜಾಗ ಬಿಟ್ಟು ನಿಯಮದಂತೆ ನಕ್ಷೆ ತಯಾರಿಸಬೇಕು. ಆದರೆ, ಇಲ್ಲಿ ಅಧಿಕಾರಿ ತಮಗೆ ಲಂಚ ಕೊಟ್ಟರೆ ಬಿಲ್ಡರ್‌ಗಳಿಗೆ ಅನುಕೂಲವಾಗುವಂತೆ ಮ್ಯಾಪ್ ಮಾಡಿಕೊಡುವುದಾಗಿ ಭರವಸೆ ನೀಡುತ್ತಿದ್ದಾರೆ.

ಲಂಚದ ಹಣ ಕಡಿಮೆ ಮಾಡುವಂತೆ ವ್ಯಕ್ತಿ ಬೇಡಿಕೊಂಡಾಗ, ಅಧಿಕಾರಿ ಕನಿಷ್ಠ ಇಷ್ಟಾದರೂ ಕೊಡಬೇಕು ಎಂದು ಕ್ಯಾಲ್ಕುಲೇಟರ್‌ನಲ್ಲಿ ಮೊತ್ತವನ್ನು ಟೈಪ್ ಮಾಡಿ ತೋರಿಸುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

ಸದ್ಯ ಈ ವಿಡಿಯೋ ಸಾರ್ವಜನಿಕ ವಲಯದಲ್ಲಿ ದೊಡ್ಡ ಚರ್ಚೆಗೆ ಕಾರಣವಾಗಿದ್ದು, ಭ್ರಷ್ಟ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹ ಕೇಳಿಬಂದಿದೆ.

## ಭಾರತೀಯ ಸಂಸ್ಕೃತಿಗೆ ಜಾನಪದವೇ ಅಡಿಪಾಯ: ಡಾ. ಪೆರ್ಲ



ಕನ್ನಡ ಭವನದಲ್ಲಿ ಪ್ರಿಯದರ್ಶಿನಿ ಸಂಗೀತ, ಸಾಂಸ್ಕೃತಿಕ ಸೇವಾ ಸಂಸ್ಥೆ ಏರ್ಪಡಿಸಿದ ಗ್ರಾಮೀಣ ಜಾನಪದ ಕಲಾ ಮಹೋತ್ಸವ ಉದ್ಘಾಟಿಸಿದ ಡಾ.ಸದಾನಂದ ಪೆರ್ಲ ಮಾತನಾಡಿದರು. ಸಾಹಿತಿ ಧರ್ಮಣ್ಣಧನ್ನಿ, ಶಿವಶಂಕರ ಬಿಳಾಲಕರ್ ಮತ್ತಿತರಿದ್ದರು.

ಕಲಬುರಗಿ: ಭಾರತೀಯ ಸಂಸ್ಕೃತಿ ವಿಶ್ವ ಮಟ್ಟದಲ್ಲಿ ಮೇರು ಸ್ಥಾನದಲ್ಲಿ ನಿಲ್ಲಲುಅದಕ್ಕೆ ಮೂಲ ಅಡಿಪಾಯ ಜಾನಪದ ಎಂದು ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಡಾ.ಸದಾನಂದ ಪೆರ್ಲ ಹೇಳಿದರು.

ಅನಕ್ಷರಸ್ತ ಗ್ರಾಮೀಣ ಜನರಿಂದ ಹುಟ್ಟಿಕೊಂಡ ಜನಪದ ಸಾಹಿತ್ಯ ಮತ್ತು ಕಲಾ ಪ್ರಕಾರಗಳು ತಲೆಮಾರಿನಿಂದ ತಲೆಮಾರಿಗೆ ಹರಿದು ಬಂದು ಭಾರತೀಯ ಸಂಸ್ಕೃತಿಗೆ ಗಟ್ಟಿ ಅಡಿಪಾಯವಾಗಿ ನಿಂತಿದೆ. ಅದರ ತಳಹದಿಯಲ್ಲಿ ಜೀವನ ಮೌಲ್ಯ ಮತ್ತು ಆದರ್ಶಗಳನ್ನು ಚಿರಕಾಲ ಉಳಿಯುವಂತೆ ಮಾಡಿದೆ. ಆಧುನಿಕ ಯುಗದಲ್ಲಿ ತಾಂತ್ರಿಕ ಮತ್ತು ವೈಜ್ಞಾನಿಕ ಬೆಳವಣಿಗೆಯ ನಾಗಾಲೋಟದಲ್ಲಿ ಮಾನವೀಯ ಮೌಲ್ಯಗಳು ಮತ್ತು ಮನುಷ್ಯ ಸಂಬಂಧಗಳು ದೂರಾಗುತ್ತಿವೆ. ಈ ಸಂದರ್ಭದಲ್ಲಿ ಜನಪದ ಕಲೆ, ಸಾಹಿತ್ಯ, ಸಂಗೀತ ವೈದ್ಯ ಪದ್ಧತಿ ಹೀಗೆ ಜನಪದದ ನಾನಾ ಪ್ರಕಾರಗಳನ್ನು ಮುಂದಿನ ಜನಮಾನಸಕ್ಕೆ ಅದರಲ್ಲೂ ಮುಖ್ಯವಾಗಿ ಯುವಜನತೆಗೆ ಮುಟ್ಟಿಸುವ ದೊಡ್ಡ ಕೆಲಸವನ್ನು ಸ್ವಯಂಸೇವಾ ಸಂಸ್ಥೆಗಳು ಕೈಗೊಳ್ಳಬೇಕಾದ ಅಗತ್ಯವಿದೆ ಎಂದರು.

ಜಿಲ್ಲಾಕನ್ನಡ ಸಾಹಿತ್ಯ ಪರಿಷತ್ತಿನಗೌರವ ಕಾರ್ಯದರ್ಶಿ ಧರ್ಮಣ್ಣಎಚ್. ಧನ್ನಿಅವರು ಅಧ್ಯಕ್ಷತೆ ವಹಿಸಿ, ಜನಪದ ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಕಲಾವಿದರ ಪಾತ್ರ ಹಿರಿದು, ವಿಜ್ಞಾನ ಮತ್ತುತಾಂತ್ರಿಕಯುಗದಲ್ಲಿ ಜನಪದ ಕಲೆಗಳು ನಶಿಸಿ ಹೋಗುತ್ತಿವೆ. ಅವುಗಳ ಉಳುವಿಗಾಗಿ ಕಲಾವಿದರಿಗೆ ಸೂಕ್ತ ಅವಕಾಶಗಳನ್ನು ಕಲ್ಪಿಸಿಕೊಡಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಸಂಸ್ಥೆಯ ಮುಖಂಡ ಶಿವಶಂಕರ ಬಿಳಾಲಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು.ವೇದಿಕೆ ಮೇಲೆ ಅಖಿಲ ಕರ್ನಾಟಕ ಸರಕಾರಿ ಮಹಿಳಾ ನೌಕರರ ಸಂಘದಜಿಲ್ಲಾಧ್ಯಕ್ಷರೇಣುಕಾಡಾಂಗೆ, ಪ್ರಿಯದರ್ಶಿನಿ ಸಂಗೀತ ಸಾಂಸ್ಕೃತಿಕ ಸೇವಾ ಸಂಸ್ಥೆ ಅಧ್ಯಕ್ಷರವಿಕುಮಾರ ಪಿ.ಕಾರ್ಯದರ್ಶಿ ರೇಖಾಎಸ್.ಬಿ. ನಿವೃತ್ತ ಶಿಕ್ಷಕರಾದ ಶಿವಮೂರ್ತಿ ಹಡಗಿಲಕರ, ಹೆಚ್.ಎಸ್. ಬರಗಾಲಿ,ಉಪನ್ಯಾಸಕ ಕಾಶಿನಾಥ ಮುಖರ್ಜಿ, ಕಲಾವಿದೆ ಅಕ್ಕಮಹಾದೇವಿ ಅಡಕಿ, ಮಲ್ಲಿಕಾರ್ಜುನದೊಡ್ಡಿ, ಶಿವಕುಮಾರ ಕಟ್ಟಿ ಸೇರಿದಂತೆಇತರಗಣ್ಯರು ಪಾಲ್ಗೊಂಡಿದ್ದರು.

ನಂತರ 'ಖ್ಯಾತ ಕಲಾವಿದರಾದ ಶಿವಶಂಕರ ಬಿರಾದಾರ, ರೇವಣಸಿದ್ದಪ್ಪ ಹೊಸಮನಿ, ಹುಲಿಕಂಠರಾಯ ಯಡ್ರಾಮಿ, ಶಿವಮೂರ್ತಿ ಬಲಿ ಚಕ್ರವರ್ತಿ, ಸಿದ್ದಣ್ಣ ಗುಡ್ಡ, ಭೀಮರಾಯಗೌಡ ಭಾಸ್ಗಿ, ಶಶಿರೇಖಾ, ಚಂದಮ್ಮ ಪಿ.ಅವರುಜಾನಪದ, ಭಕ್ತಿಗೀತೆ, ಜೋಗುಳ ಪದ, ಸೋಬಾನ ಪದ ಹಾಗು ಸುಗಮ ಸಂಗೀತ ಹಾಡುಗಳನ್ನು ಹಾಡಿದರು.ಜನಪದ ನಾದಕ್ಕೆ ಪ್ರೇಕ್ಷಕರುತಲೆದೂಗಿ ಸಂತಸಪಟ್ಟರು.

### ಕೋಮುಸೌಹಾರ್ದ ಕಾಪಾಡಲು ಕೈಗೊಂಡ ಕ್ರಮಕ್ಕೆ ಶ್ಲಾಘನೆ

## ಕರಾವಳಿ ಕಾವಲುಪಡೆ, ಉಡುಪಿ ಜಿಲ್ಲಾ ಪೊಲೀಸರೊಂದಿಗೆ ಡಿಜಿಪಿ ಡಾ.ಸಲೀಂ ಸಭೆ

**ಉಡುಪಿ, ಏ.22:** ರಾಜ್ಯ ಪೊಲೀಸ್ ಮಹಾನಿರ್ದೇಶಕ ಹಾಗೂ ಮಹಾ ನಿರೀಕ್ಷಕ ಡಾ.ಎಂ.ಎ.ಸಲೀಂ ಅವರು ಬುಧವಾರ ಉಡುಪಿಗೆ ಭೇಟಿ ನೀಡಿದ್ದು, ಕರಾವಳಿ ಕಾವಲು ಪಡೆ, ಮಲ್ಪೆ ಹಾಗೂ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದಾರೆ.

ಮಲ್ಪೆಯ ಕರಾವಳಿ ಕಾವಲು ಪಡೆಯ ಪರಿವೀಕ್ಷಣೆಯ ವೇಳೆ ಪೊಲೀಸ್ ಮಹಾನಿರೀಕ್ಷಕರು, ಪಶ್ಚಿಮ ವಲಯ ಮಂಗಳೂರು ಹಾಗೂ ಕರಾವಳಿ ಕಾವಲು ಪಡೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲೆಯಲ್ಲಿ ಕೋಮು ಸೌಹಾರ್ದ ಕಾಪಾಡಲು ಕೈಗೊಂಡ ಕ್ರಮಗಳನ್ನು ಡಿಜಿಪಿ ಶ್ಲಾಘಿಸಿದ್ದಾರೆ. ರೌಡಿ ಚಟುವಟಿಕೆಗಳು ಹಾಗೂ ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗಿರುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಸೊತ್ತು ಕಳವು ಪ್ರಕರಣಗಳನ್ನು ಪತ್ತೆ ಹಚ್ಚುವುದರ ಜೊತೆಗೆ ತಡೆಗಟ್ಟುವ ಕ್ರಮಗಳನ್ನು ಬಲಪಡಿಸಬೇಕು. ಅಪರಾಧ ಪ್ರಕರಣಗಳನ್ನು ಕಾಲಮಿತಿಯೊಳಗೆ ಇತ್ಯರ್ಥಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಆಸರೆ ಕಾರ್ಯಕ್ರಮವನ್ನು ತಾವು ಉಡುಪಿ ಜಿಲ್ಲಾ ಎಸ್‌ಪಿ ಆಗಿದ್ದ ಸಂದರ್ಭದಲ್ಲಿ ಪರಿಚಯಿಸಿದ್ದು, ಈಗ ರಾಜ್ಯಾದ್ಯಂತ ಅನುಷ್ಠಾನ ಗೊಳ್ಳುತ್ತಿದೆ. ಉಡುಪಿ



ಜಿಲ್ಲೆಯಲ್ಲಿ ಈ ಕಾರ್ಯಕ್ರಮವನ್ನು ಪರಿಣಾಮ ಕಾರಿಯಾಗಿ ಜಾರಿಗೆ ತಂದಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸಮುದಾಯ ಪೊಲೀಸ್ ಕಾರ್ಯ ಕ್ರಮಗಳಾದ ಮನೆ ಮನೆಗೆ ಪೊಲೀಸ್, ಸ್ಪಂದನ ಹಾಗೂ ಮಕ್ಕಳ ಸಹಾಯವಾಣಿ ಸೇವೆಗಳನ್ನು ಮತ್ತಷ್ಟು ಬಲಪಡಿಸಲು ಸೂಚಿಸಿದ್ದಾರೆ.

ಉಡುಪಿ ಜಿಲ್ಲೆಯ ನಾಗರಿಕರು ಸುಶಿಕ್ಷಿತರು ಹಾಗೂ ಶಾಂತಿಪ್ರಿಯರಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವಂತೆ, ಪೊಲೀಸ್ ಇಲಾಖೆಯೂ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಮಾದರಿಯಾಗುವಂತೆ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ನಂತರ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪಶ್ಚಿಮ ವಲಯ ಪೊಲೀಸ್ ಮಹಾನಿರೀಕ್ಷಕರು ಅಮಿತ್ ಸಿಂಗ್, ಉಡುಪಿ ಜಿಲ್ಲಾ ಪೊಲೀಸ್ ಅಧೀಕ್ಷಕ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಸೇರಿದಂತೆ ಜಿಲ್ಲೆಯ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.

# ಮಹಿಳೆ-ಮಕ್ಕಳ ಅನೈತಿಕ ಸಾಗಣೆ ಗಂಭೀರ ಅಪರಾಧ: ನ್ಯಾ.ನವಲೆ

**ಕಲಬುರಗಿ, ಏ. 22:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ "ಮಹಿಳೆಯರು ಮತ್ತು ಮಕ್ಕಳ ಅನೈತಿಕ ಸಾಗಣೆ ತಡೆಗಟ್ಟುವಿಕೆ" ಕುರಿತು ವಿವಿಧ ಭಾಗಿದಾರರ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ ಕಲಬುರಗಿಯ ಸರ್ಕಾರಿ ಬಾಲಕಿಯರ ಬಾಲಮಂದಿರದಲ್ಲಿ ಬುಧವಾರ ಹಮ್ಮಿಕೊಳ್ಳಲಾದ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಉದ್ಘಾಟಿಸಿದರು.



ನಂತರ ಅವರು ಮಾತನಾಡಿ, ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಣೆ ಒಂದು ಗಂಭೀರ ಅಪರಾಧವಾಗಿದ್ದು, ಇದನ್ನು ತಡೆಗಟ್ಟಲು ವಿವಿಧ ಇಲಾಖೆಗಳ ನಡುವೆ ಸಮನ್ವಯವನ್ನು ಬಲಪಡಿಸುವುದು ಹಾಗೂ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಮಹಿಳೆಯರಿಗೆ ಸಂಬಂಧಿತ ಕಾಯ್ದೆಗಳು ಮತ್ತು ನಿಯಮಾವಳಿ ಬಗ್ಗೆ ಅರಿವು ಮೂಡಿಸಲು ತರಬೇತಿಯನ್ನು ಹಮ್ಮಿಕೊಳ್ಳುವುದು ಅತೀ ಅವಶ್ಯವಾಗಿದ್ದು, ನಗರ ಪ್ರದೇಶ ಹಾಗೂ ಗ್ರಾಮೀಣ ಭಾಗದ ಕ್ಷೇತ್ರ ಮಟ್ಟದಲ್ಲಿ ಕೆಲಸ ಮಾಡುವ ಅಧಿಕಾರಿ ಹಾಗೂ ಸಿಬ್ಬಂದಿ ತರಬೇತಿ ಪಡೆದು ನೊಂದ ಮಹಿಳೆಯರಿಗೆ ಮತ್ತು ಮಕ್ಕಳಿಗೆ ರಕ್ಷಣೆ ನೀಡಲು ಹಾಗೂ ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸಬೇಕು. ಈ ತರಬೇತಿಯ ಸದುಪಯೋಗ ಪಡೆದು ಈ ಕ್ಷೇತ್ರದಲ್ಲಿ ಕೆಲಸ ಮಾಡುವ ಸ್ವಯಂ ಸೇವಾ ಸಂಸ್ಥೆಗಳ ಸಮನ್ವಯದೊಂದಿಗೆ ಒಟ್ಟಾಗಿ ಕೆಲಸ ಮಾಡಬೇಕು ಎಂದರು.

ಬೆಂಗಳೂರು ಗ್ಲೋಬಲ್ ಇಂಡಿಯಾ ನಿರ್ದೇಶಕ ಬೃಂದ ಅಡಿಗೆ ಅವರು ಮಾತನಾಡಿ, ತರಬೇತುದಾರರಿಗೆ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ಯಾವ ರೀತಿ ಮಾಡಲಾಗುತ್ತದೆ ಹಾಗೂ ಕೆಲಸದ ಸ್ಥಳಗಳಲ್ಲಿ ಯಾವ ರೀತಿ ಲೈಂಗಿಕ ಕಿರುಕುಳ ನಡೆಯುತ್ತದೆ ಎಂಬುವುದರ ಕುರಿತು ವಿವರವಾಗಿ ತಿಳಿಸಿದರು. ಸೈಬರ್ ಅಪರಾಧಿಗಳು ಮಹಿಳೆ ಮತ್ತು ಮಕ್ಕಳನ್ನು ದೂರವಾಣಿ ಕರೆ ಮೂಲಕ ಯಾವ ರೀತಿ ಬಲಿಪಶು ಮಾಡುತ್ತಾರೆ ಎಂಬುವುದರ ಕುರಿತು ಉದಾಹರಣೆಗಳನ್ನು ನೀಡುತ್ತ ಇಂತಹ ಸಂದರ್ಭದಲ್ಲಿ ಕಾಯ್ದೆ ಏನು ಹೇಳುತ್ತೆ ಎಂಬುವುದರ ಕುರಿತು ವಿವರಿಸಿದರು.

ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ಅವರು ಮಾತನಾಡಿ, ತರಬೇತಿಯನ್ನು ಪಡೆದ ತರಬೇತುದಾರರು ಸಾಗಾಣಿಕೆಗೆ ಒಳಗಾದ ಮಹಿಳೆ ಹಾಗೂ ಮಕ್ಕಳನ್ನು ರಕ್ಷಿಸಬೇಕು. ಇಂತಹ ಪ್ರಕರಣಗಳು ಕಂಡುಬಂದಲ್ಲಿ ದೂರು ನೀಡಲು ತಿಳಿಸಿದರು.



ಬೆಂಗಳೂರಿನ ಬಾಲ ಭವನ ಕಬ್ಬನ್ ಉದ್ಯಾನವನದಲ್ಲಿ ಬುಧವಾರ ಮಕ್ಕಳು ವಿಶ್ವ ಭೂದಿನವನ್ನು ಆಚರಿಸಿದರು.

### ಕಲಬುರಗಿಯಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

# ಸಾಧಕ ಮಹಿಳೆಯರಿಗೆ 'ಅಕ್ಷರದ ಅವ್ವ' ಪ್ರಶಸ್ತಿ ಪ್ರದಾನ

**ಕಲಬುರಗಿ, ಏ. 22:** ತ್ರೀಶಾ ಎಜುಕೇಶನ್ ಚಾರಿಟೇಬಲ್ ಮತ್ತು ವೆಲ್ಫೇರ್ ಟ್ರಸ್ಟ್ ವತಿಯಿಂದ ಅಂತ ರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳೆಯರಿಗೆ "ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ ಪ್ರಶಸ್ತಿ" ಪ್ರಧಾನಕಾರ್ಯಕ್ರಮವನ್ನು ಅದ್ದೂರಿಯಾಗಿ ಆಯೋಜಿಸಲಾಯಿತು.



ಕಾರ್ಯಕ್ರಮದ ಅಂಗವಾಗಿ ಮಹಿಳೆಯರಿಗಾಗಿ ವಿವಿಧ ಆಟ ಹಾಗೂ ಮನರಂಜನಾ ಸ್ಪರ್ಧೆಗಳು ನಡೆಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕಿಯರಿಗೆ ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಜೊತೆಗೆ ಸ್ಪರ್ಧೆಗಳಲ್ಲಿ ಭಾಗವಹಿಸಿದ ಮಹಿಳೆಯರಿಗೆ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ವಿತರಿಸಲಾಯಿತು.

ಕಾರ್ಯಕ್ರಮಕ್ಕೆ ಸಾನಿಧ್ಯ ವಹಿಸಿದ್ದ ಭಾಗ್ಯವಂತಿಯ ವರಪುತ್ರಿಯಾದ ಮಾತಾ ಲತಾ ದೇವಿ (ಕೆಸರಟಗಿ ಸುಕ್ಷೇತ್ರ, ಕಲಬುರಗಿ) ಅವರು ಮಾತನಾಡಿ, ಹೆಣ್ಣಿಗೆ ಇರುವ ಗೌರವ ಪ್ರಪಂಚದಲ್ಲಿ ಎಲ್ಲಿಯೂ ಇಲ್ಲ. ಹೆಣ್ಣು ದೇವತೆ, ತಾಯಿ ದೇವತೆ, ಭೂಮಿ ದೇವತೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಪಂಚ ಗ್ಯಾರಂಟಿ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ಉದ್ಘಾಟಿಸಿ, ಮಹಿಳೆಯರಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಪಂಚ ಗ್ಯಾರಂಟಿ ಯೋಜನೆಗಳು ಬಡ ಕುಟುಂಬಗಳಿಗೆ ಹೆಚ್ಚಿನ ಸಹಾಯವಾಗುತ್ತಿವೆ ಎಂದು ತಿಳಿಸಿದರು.

ಪ್ರಶಸ್ತಿ ಪ್ರಧಾನವನ್ನು ಖ್ಯಾತ ಉದ್ಯಮಿಗಳಾದ ಅನ್ನಪೂರ್ಣ ಆರ್. ಸಂಗೊಳಗಿ ಹಾಗೂ ಸಮೃದ್ಧಿ ಡೆವಲಪರ್ಸ್ ಮಾಲಕಿ ಆರತಿ ಸುನೀಲ್ ರಾಠೋಡ್ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಕೇಕ್ ಕತ್ತರಿಸುವ ಮೂಲಕ ಮಹಿಳಾ ದಿನಾಚರಣೆಯನ್ನು ಸಂಭ್ರಮಿಸಲಾಯಿತು. ಪೂರ್ಣಿಮಾ ಜಾನೆ (ನ್ಯಾಯವಾದಿಗಳು) ಮತ್ತು ಸಿಂಧೂಮತಿ ಬೋಸ್ಲೆ (ಪ್ರಿಯದರ್ಶಿನಿ ಶಾಲೆಯ ಮುಖ್ಯಗುರುಗಳು) ಕಾರ್ಯಕ್ರಮದ ವ್ಯವಸ್ಥೆಯನ್ನು ವಹಿಸಿಕೊಂಡು ಅದ್ದೂರಿಯಾಗಿ ದಿನಾಚರಣೆಯನ್ನು ಆಚರಿಸಿದರು.

# ಹಿಂದೂ ಧರ್ಮ ಪುನರುಜ್ಜೀವನಗೊಳಿಸಿದ ಆಧ್ಯಾತ್ಮ ಆದಿಶಂಕರಾಚಾರ್ಯರು: ಮುಂಡರಗಿ ನಾಗರಾಜ ಅಭಿಮತ

**ಬಳ್ಳಾರಿ,ಏ.22–**ಹಿಂದೂ ಧರ್ಮ ಪುನರುಜ್ಜೀವನಗೊಳಿಸಿದ ಆಧ್ಯಾತ್ಮ ಆದಿ ಶಂಕರಾಚಾರ್ಯರು. ಸಮಾಜವನ್ನು ಸುಸ್ಥಿತಿಗೆ ಕೊಂಡೊಯ್ಯುವಲ್ಲಿ ಆದಿ ಶಂಕರಾಚಾರ್ಯರ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು ಹೇಳಿದರು.

ದೇಶದ ನಾಲ್ಕು ದಿಕ್ಕುಗಳಲ್ಲಿ ನಾಲ್ಕು ಮಠಗಳನ್ನು (ದಕ್ಷಿಣದಲ್ಲಿ ಶೃಂಗೇರಿ, ಪಶ್ಚಿಮದಲ್ಲಿ ದ್ವಾರಕಾ, ಪೂರ್ವದಲ್ಲಿ ಪುರಿ ಜಗನ್ನಾಥ ಮತ್ತು ಉತ್ತರದಲ್ಲಿ ಬದರಿನಾಥ) ಸ್ಥಾಪಿಸುವ ಮೂಲಕ ವೇದಾಂತದ ಪುನರುಜ್ಜೀವನ ಮತ್ತು ಹಿಂದೂ ಧರ್ಮದ ಏಕತೆಯನ್ನು ಬಲಪಡಿಸಿದವರು ಎಂದು ತಿಳಿಸಿದರು.

2018 ರಲ್ಲಿ ಸ್ಥಾಪನೆಯಾದ ಬ್ರಾಹ್ಮಣ ಅಭಿವೃದ್ಧಿ ನಿಗಮಕ್ಕೆ 2025–26 ನೇ ಸಾಲಿನಲ್ಲಿ ರಾಜ್ಯ ಸರ್ಕಾರ 60 ಕೋಟಿ ರೂ. ಅನುದಾನ ನೀಡಿದೆ. ಸಮುದಾಯದ ಯುವಕರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು 20 ರಿಂದ 30 ಕೋಟಿ ರೂ. ಮೀಸಲಿಡಲಾಗಿದ್ದು, ಇದರಲ್ಲಿ



ಶೇ. 50 ರಷ್ಟು ಸಬ್ಸಿಡಿ ದೊರೆಯಲಿದೆ. ಬಡ ಬ್ರಾಹ್ಮಣ ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕಾಗಿ 10 ರಿಂದ 15 ಕೋಟಿ ರೂ. ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ತುರ್ತು ವೈದ್ಯಕೀಯ ನೆರವಿಗೆ 3 ರಿಂದ 5 ಕೋಟಿ ರೂ. ಹಾಗೂ ಮಹಿಳಾ ಉದ್ಯಮಿಗಳಿಗೆ ನೆರವಾಗಲು 5 ರಿಂದ 10 ಕೋಟಿ ರೂ. ಮೀಸಲಿಡಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಮಾನವನಲ್ಲಿ ದೇವರನ್ನು ಕಾಣುವುದೇ ಕಷ್ಟವಿರುವ ಕಾಲದಲ್ಲಿ, ಪ್ರತಿಯೊಬ್ಬ ವ್ಯಕ್ತಿಯ ಆತ್ಮದಲ್ಲೂ ಪರಮಾತ್ಮನಿದ್ದಾನೆ ಎಂದು ಸಾರಿದ ಆದಿ ಶಂಕರಾಚಾರ್ಯರ ಅದ್ವೈತ ಸಿದ್ಧಾಂತ ಜಗತ್ತಿಗೆ ಶ್ರೇಷ್ಠ ಕೊಡುಗೆಯಾಗಿದೆ. ಮನುಷ್ಯ ಬದುಕಿರುವಾಗಲೇ ಸತ್ಸಂಗ ಮತ್ತು ನಿಸ್ಸಂಗದ ಮೂಲಕ ಮೋಹವನ್ನು ತೊರೆದು ಜೀವನ ಮುಕ್ತಿಯನ್ನು ಪಡೆಯಬಹುದು ಎಂದು ಎಂಟನೇ ಶತಮಾನದಲ್ಲೇ ಸಾರಿದ ಮಹಾನ್ ವ್ಯಕ್ತಿ ಶಂಕರಾಚಾರ್ಯರು. ಕರ್ನಾಟಕದ ಶೃಂಗೇರಿಯಲ್ಲಿ ಶಾರದಾ ಪೀಠವನ್ನು ಸ್ಥಾಪಿಸುವ ಮೂಲಕ ಅಧ್ಯಾತ್ಮದ ತಳಹದಿಯನ್ನು ಬಲಪಡಿಸಿದರು. ಬ್ರಾಹ್ಮಣ ಸಮುದಾಯವು ನಾಡು–ನುಡಿ ಮತ್ತು ದೇಶ ಕಟ್ಟುವಲ್ಲಿ ಅಪಾರ ಕೊಡುಗೆ ನೀಡಿದೆ ಎಂದು ಅವರು ಶ್ಲಾಘಿಸಿದರು.

ಸರ್ ಎಂ.ವಿಶ್ವೇಶ್ವರಯ್ಯನವರು ತುಂಗಭದ್ರಾ ಅಣೆಕಟ್ಟು ಕಟ್ಟಿದರೆ, ಬ್ರಾಹ್ಮಣ ಸಮುದಾಯದ ಮೇಧಾವಿ ಇಂಜಿನಿಯರ್ ತಿರುಮಲೆ ಅಯ್ಯಂಗಾರ್ ಅವರು ಸ್ವಾತಂತ್ರ್ಯ ಬಂದ ಕೇವಲ ಮೂರು ವರ್ಷಗಳಲ್ಲಿ ಆ ಬೃಹತ್ ಪ್ರಾಜೆಕ್ಟ್ ಅನ್ನು ಪೂರ್ಣಗೊಳಿಸಿ ಈ ಭಾಗದ ಜನರಿಗೆ ನೀರಾವರಿ ಸೌಲಭ್ಯ ಕಲ್ಪಿಸಿದರು. ಸಮಾಜಕ್ಕೆ ಉತ್ತಮ ಸಂಸ್ಕಾರ ಕಲಿಸುವಲ್ಲಿ ಮತ್ತು ಭಾರತವನ್ನು ಶಕ್ತಿಯುತ ರಾಷ್ಟ್ರವನ್ನಾಗಿ ಮಾಡುವಲ್ಲಿ ಈ ಸಮುದಾಯ ಯಾವಾಗಲೂ ಮುಂಚೂಣಿಯಲ್ಲಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಸತತ ಎರಡನೇ ವರ್ಷ ಶಂಕರಾಚಾರ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುತ್ತಿದೆ. ಸಿದ್ದರಾಮಯ್ಯ ನವರ ಸರ್ಕಾರ ಎಲ್ಲಾ ಧರ್ಮ ಮತ್ತು ಜಾತಿಗಳನ್ನು ಸಮಾನವಾಗಿ ಪ್ರೀತಿಸುತ್ತದೆ ಎಂಬುದಕ್ಕೆ ಇಂತಹ ಜಯಂತಿಗಳ ಆಚರಣೆಯೇ ಸಾಕ್ಷಿ ಎಂದು ಅವರು ಅಭಿಪ್ರಾಯಪಟ್ಟರು.

ಬಳ್ಳಾರಿಯ ರಾಮಕೃಷ್ಣ ಆಶ್ರಮದ ಪೂಜ್ಯಶ್ರೀ ಸ್ವಾಮಿ ಮಂಗಳನಾಥಾನಂದಜಿ ಮಹಾರಾಜ್ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಕ್ರಿಸ್ತ ಶಕ 788 ರ ಸುಮಾರಿಗೆ ಕೇರಳದ ಕಾಲಡಿಯಲ್ಲಿ ಶಿವಗುರು ಮತ್ತು ಆರ್ಯಾಂಬ ದಂಪತಿಗಳ ಪುತ್ರರಾಗಿ ಜನಿಸಿದ ಶಂಕರಾಚಾರ್ಯರು, ಬಾಲ್ಯದಲ್ಲೇ ಮೇಧಾವಿಗಳಾಗಿದ್ದರು. ಎಂಟನೇ ವಯಸ್ಸಿಗೆ ವೇದಗಳನ್ನು ಅಭ್ಯಾಸ ಮಾಡಿ ತಾಯಿಯ ಅನುಮತಿಯೊಂದಿಗೆ ಸನ್ಯಾಸ ಸ್ವೀಕರಿಸಿದರು. ಭಜಗೋವಿಂದಂ, ವಿವೇಕ ಚೂಡಾಮಣಿ ಸೇರಿದಂತೆ ಉಪನಿಷತ್ತುಗಳು, ಬ್ರಹ್ಮಸೂತ್ರ ಮತ್ತು ಭಗವದ್ಗೀತೆಯ ಮೇಲೆ ಭಾಷ್ಯಗಳನ್ನು ಬರೆದಿದ್ದಾರೆ ಎಂದು ತಿಳಿಸಿದರು.

# ಅಂದ್ರಾಳು ಬೈಪಾಸ್ ಬಳಿ 46.35 ಎಕರೆ ಸರ್ಕಾರಿ, ಜಮೀನು ಒತ್ತುವರಿ ತೆರವು

**ಬಳ್ಳಾರಿ, ಏ.22:** ಸರ್ಕಾರಿ ಕಾಲೇಜು, ಹಾಸ್ಟಲ್, ಆಸ್ಪತ್ರೆಗಳನ್ನು ನಿರ್ಮಾಣ ಮಾಡಲು ಜಾಗ ಇಲ್ಲ ಎನ್ನುತ್ತಾರೆ. ಜನಪ್ರತಿನಿಧಿಗಳು. ಆದರೆ ಈ ರೀತಿ 46.35 ಎಕರೆ ಸರ್ಕಾರಿ ಜಮೀನನ್ನು ಬಲಿಷ್ಟ ಶಕ್ತಿಗಳು ಒತ್ತುವರಿ ಮಾಡಿವೆ.



ನಗರದ ಹೊರ ವಲಯದ ಅಂದ್ರಾಳು ಬೈ ಪಾಸ್ ಬಳಿಯ 46.35 ಎಜರೆ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿ ಸಿಮೆಂಟ್ ಬ್ರಿಕ್ಸ್ ಪ್ಯಾಕ್ಟರಿ, ಶೆಡ್ ಗಳನ್ನು ನಿರ್ಮಾಣ ಕೋಳಿ ಫಾರಂ ಮಾಡಲಾಗಿತ್ತು.

ಬಲ್ಲಮೂಲಗಳ ಪ್ರಕಾರ ಗಾದಿಲಿಂಗ, ಶಿವಶಂಕ್ರಪ್ಪ, ವಿರೂಪಾಕ್ಷಿ ಮೊದಲಾದವರು ಈ ಒತ್ತುವರಿ ಮಾಡಿದ್ದರು ಎನ್ನಲಾಗುತ್ತಿದೆ.

ಇಲ್ಲಿ ಈ ಹಿಂದೆ ಕೆಎಂಎಫ್ ನಿಂದ ಮೆಗಾ ಡೈರಿ ಮಾಡಲು ಸರ್ವೇ ಮಾಡಲಾಗಿತ್ತು. ಆದರೆ ಎನ್ ಡಿಡಿಬಿ ಅವರು ಒಪ್ಪದ ಕಾರಣ ಕೈ ಬಿಡಲಾಗಿತ್ತು. ಇಂದು ಎಡಿಸಿ ಮಹಮ್ಮದ್ ಝುಬೇರ ಅವರ ನೇತೃತ್ವದ ತಂಡ ಜೆಸಿಬಿಗಳನ್ನು ತಂದು ಡೆಮಾಲಿಶ್ ಮಾಡಿ ಒತ್ತುವರಿಯನ್ನು ತೆರವುಗೊಳಿಸಲಾಗಿದೆ.

ನಗರದಲ್ಲಿರುವ ಇನ್ನಷ್ಟು ಒತ್ತುವರಿಗಳನ್ನು ತೆರವು ಮಾಡಲು ನೀಲನಕ್ಷೆ ಸಿದ್ದಗೊಂಡಿದೆಂದು ಅಧಿಕಾರಿಗಳು ಹೇಳಿದ್ದಾರೆ.

ಕೋಟ್:ಸರ್ಕಾರದ ಯೋಜನೆಗಳ ಅನುಷ್ಟಾನಕ್ಕೆ ನಿವೇಶನ ಇಲ್ಲ ಎನ್ನಲಾಗುತ್ತದೆ. ಇಂತಹ ಒತ್ತುವರಿಗಳನ್ನು ತೆರವು ಮಾಡುವುದ ರಿಂದ ಜನೋಪಯೋಗಿ ಕೆಲಸಗಳಿಗೆ ಸಹಕಾರಿಯಾಗಲಿದೆ. ಜಿಲ್ಲಾಡಳಿತ ಉತ್ತಮ ಕೆಲಸ ಮಾಡುತ್ತಿದೆ.

# ಬಳ್ಳಾರಿಯ ವಿವೇಕಾನಂದ ಕೇಂದ್ರ ರಾಮಕೃಷ್ಣ ಮಿಷನ್‌ಗೆ ಹಸ್ತಾಂತರ

**ಬಳ್ಳಾರಿ, ಏ. 22–** ನಗರದ ಶ್ರೀರಾಮಕೃಷ್ಣ ವಿವೇಕಾನಂದ ಕೇಂದ್ರವನ್ನು ಕೋಲ್ಕತ್ತಾದ ಬೇಲೂರು ಮಠದ ರಾಮಕೃಷ್ಣ ಮಿಷನ್‌ಗೆ ಸೋಮವಾರ ಸಂಜೆ ಹಸ್ತಾಂತರ ಮಾಡಲಾಗಿದೆ.

ಮಾಜಿ ಸಚಿವ ಅಲ್ಲಂ ವೀರಭದ್ರಪ್ಪ, ರಾಜ್ಯಸಭಾ ಮಾಜಿ ಸದಸ್ಯ ಕೆ.ಸಿ. ಕೊಂಡಯ್ಯ, ಶಾಸಕ ನಾರಾ ಭರತರೆಡ್ಡಿ, ಮಾಜಿ ಶಾಸಕ ಜಿ. ಸೋಮಶೇಖರರೆಡ್ಡಿ, ಮೇಯರ್ ಪಿ. ಗಾದೆಪ್ಪ, ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಯದ ಅಧ್ಯಕ್ಷ ಶ್ರೀಧರ ಬೋನಗೇರಿ, ಪದಾಧಿಕಾರಿಗಳಾದ ಪೃಥ್ವಿರಾಜ್ ಭೂಪಾಲ್, ಸಿ. ಎರ್ರಿಸ್ವಾಮಿ ಅವರು ಭಕ್ತರ ಸಮ್ಮುಖದಲ್ಲಿ ಕೋಲ್ಕತ್ತಾದ ಬೇಲೂರು ಮಠದ ರಾಮಕೃಷ್ಣ ಮಿಷನ್‌ಸಹ ಕಾರ್ಯದರ್ಶಿ ಸತ್ಯೇಶಾನಂದ, ಬೆಂಗಳೂರಿನ ಶಿವನಹಳ್ಳಿಯ ಮಹಾವಾಕ್ಯನಂದ ಮತ್ತು ಬಳ್ಳಾರಿಯ ಉಸ್ತುವಾರಿಗಳಾಗಿರುವ ಮಂಗಳನಾಥಾನಂದ ಅವರು ದಾಖಲೆಗಳನ್ನು ಹಸ್ತಾಂತರ ಮಾಡಿದರು.

ದಾಖಲೆಗಳನ್ನು ಸ್ವೀಕರಿಸಿದ ಶ್ರೀಗಳು ಬಳ್ಳಾರಿಯ ಶ್ರೀರಾಮಕೃಷ್ಣ ವಿವೇಕಾನಂದ ಕೇಂದ್ರವನ್ನು ರಾಮಕೃಷ್ಣ ಮಿಷನ್ ವ್ಯಾಪ್ತಿಗೆ ಸೇರ್ಪಡೆ ಮಾಡಿಕೊಳ್ಳಲಾಗಿದೆ ಎಂದು ಘೋಷಣೆ ಮಾಡಿದ್ದಾರೆ.

ಅಲ್ಲಂ ವೀರಭದ್ರಪ್ಪ, ಕೆ.ಸಿ. ಕೊಂಡಯ್ಯ, ನಾರಾ ಭರತರೆಡ್ಡಿ, ಜಿ. ಸೋಮಶೇಖರರೆಡ್ಡಿ ಅವರು ಮಾತನಾಡಿ, ಬಳ್ಳಾರಿಯ ಶ್ರೀರಾಮಕೃಷ್ಣ ವಿವೇಕಾನಂದ ಕೇಂದ್ರವನ್ನು ಕೋಲ್ಕತ್ತಾದ ಬೇಲೂರು ಮಠದ ರಾಮಕೃಷ್ಣ ಮಿಷನ್‌ಗೆ ಹಸ್ತಾಂತರ ಮಾಡಲಾಗಿದ್ದು, ಬಳ್ಳಾರಿಯ ಆಶ್ರಮವು ರಾಷ್ಟ್ರೀಯ – ಅಂತಾರಾಷ್ಟ್ರೀಯಮಟ್ಟಕ್ಕೆ ಬೆಳೆಯಬೇಕು ಎಂದು ಆಶಯ ವ್ಯಕ್ತಪಡಿಸಿದರು.

# ಅವೈಜ್ಞಾನಿಕವಾಗಿ ಇಂಗ್ಲಿಷ್ ಮಾಧ್ಯಮ ಹೇರಿಕೆ ವಿರುದ್ಧ ಪ್ರತಿಭಟನೆ




**ಬಳ್ಳಾರಿ, ಏ.22–**ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿ ನೇತೃತ್ವದಲ್ಲಿ ಇಂದು ನಗರದ ರಾಯಲ್ ಸರ್ಕಲ್ ನಲ್ಲಿ ದ್ವಿ ಭಾಷಾ ನೀತಿ ಹೆಸರಿನಲ್ಲಿ ಇಂಗ್ಲಿಷ್ ಮಾಧ್ಯಮ ಹೇರಿಕೆ ವಿರುದ್ಧ ರಾಯಲ್ ಸರ್ಕಲ್ ನಲ್ಲಿ ಪ್ರತಿಭಟನೆ ನಡೆಸಲಾಯಿತು.

ಎಐಡಿಎಸ್‌ಓ ಜಿಲ್ಲಾ ಅಧ್ಯಕ್ಷರು ಕೆ ಈರಣ್ಣ ಮಾತನಾಡಿ... ರಾಜ್ಯದ 5000 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಂದನೇ ತರಗತಿಯಿಂದಲೇ ಆಂಗ್ಲ ಮಾಧ್ಯಮವನ್ನು ಆರಂಭಿಸಲು ರಾಜ್ಯ ಸರ್ಕಾರವು ಆದೇಶಿಸಿದೆ. ಎಲ್ಲ ಜಿಲ್ಲೆಗಳಲ್ಲಿ ಈಗಾಗಲೇ ಸರ್ಕಾರಿ ಶಾಲೆ ಶಿಕ್ಷಕರಿಗೆ ಆಂಗ್ಲ ಮಾಧ್ಯಮ ತರಬೇತಿ ನೀಡಲಾಗುತ್ತಿದೆ. ಸರ್ಕಾರವು ಇದನ್ನು ದ್ವಿಭಾಷಾ ಮಾಧ್ಯಮ ಎಂದು ಕರೆಯುತ್ತಿದ್ದರೂ ಇಂಗ್ಲಿಷಿನಲ್ಲೇ ಪಾಠ ಮಾಡಬೇಕೆಂದು ಹಲವೆಡೆ ಶಿಕ್ಷಕರಿಗೆ ನಿರ್ದೇಶನ ನೀಡಲಾಗುತ್ತಿದೆ. ಬಳ್ಳಾರಿ ಜಿಲ್ಲೆಯ 174 ಶಾಲೆಗಳಲ್ಲಿ ಜೂನ್ ನಿಂದ ಕನ್ನಡ ಮಾಧ್ಯಮ ಇರುವುದಿಲ್ಲ, ಬದಲಿಗೆ ಕೇವಲ ಆಂಗ್ಲ ಮಾಧ್ಯಮಕ್ಕೆ ಪ್ರವೇಶ ನೀಡಲಾಗುವುದೆಂದು ಪಾಲಕರಿಗೆ ತಿಳಿಸಲಾಗಿದೆ. ಇದು ಅಕ್ಷಮ್ಯ! ಸರ್ಕಾರದ ಈ ನಡೆಯನ್ನು ಖಂಡಿಸಿದರು.

ಮಗುವಿನ ಸಮರ್ಪಕ ಬೌದ್ಧಿಕ ಮತ್ತು ಮಾನಸಿಕ ವಿಕಾಸಕ್ಕೆ ಕನಿಷ್ಠ 5ನೇ ತರಗತಿವರೆಗೂ ಮಾತೃಭಾಷೆಯಲ್ಲಿ ಶಿಕ್ಷಣ ದೊರೆಯಬೇಕು. ಸಂವಹನದ ಭಾಷೆಯೇ ಕಲಿಕೆಯ ಭಾಷೆಯಾದಾಗ ಮಗುವು ತನ್ನ ಭಾವನೆಯನ್ನು ಸಮರ್ಪಕವಾಗಿ ವ್ಯಕ್ತಪಡಿಸಲು ಮತ್ತು ವಿಷಯಗಳನ್ನು ಗ್ರಹಿಸಲು ಸಹಾಯಕವಾಗುತ್ತದೆ ಎಂಬುದು ತಜ್ಞರ ಅಭಿಪ್ರಾಯ. ಈ ಅಭಿಪ್ರಾಯವನ್ನು ಸರ್ಕಾರ ಗಾಳಿಗೆ ತೂರಿದೆ. ಕೂಡಲೇ ಈ ಅವೈಜ್ಞಾನಿಕ ನಿರ್ಧಾರವನ್ನು ಹಿಂಪಡೆಯುವಂತೆ ಎಐಡಿಎಸ್‌ಓ ಆಗ್ರಹಿಸುತ್ತದೆ. ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಸಲಹೆಗಾರರು ಮತ್ತು ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿಯ ಅಧ್ಯಕ್ಷರು ಆರ್.ಸೋಮಶೇಖರ್ ಮಾತನಾಡುತ್ತಾ, ಸರ್ಕಾರವು ಅತ್ಯಂತ ಅಪ್ರಜಾತಾಂತ್ರಿಕವಾಗಿ ಕರ್ನಾಟಕದ ವಿದ್ಯಾರ್ಥಿಗಳಿಂದ ಕನ್ನಡ ಭಾಷೆಯನ್ನೇ ಕಿತ್ತುಕೊಳ್ಳುತ್ತಿದೆ. ಇಂಗ್ಲಿಷ್ ಕಲಿಕೆ ಅವಶ್ಯಕ ನಿಜ. ಆದರೆ ಕನ್ನಡವನ್ನು ಕೊಂದು ಇಂಗ್ಲಿಷ್ ಕಲಿಸಲು ಹೊರಟಿರುವುದು ನಾಡಿನ ಜನತೆಗೆ ಮಾಡಿರುವ ದ್ರೋಹ ಹಾಗೂ ಕನ್ನಡಕ್ಕೆ ಮಾಡಿರುವ ಅಪಚಾರ. ನಾಡಿನ ವಿದ್ಯಾರ್ಥಿಗಳು, ಯುವಜನರು, ಪೋಷಕರು, ಸಾಹಿತಿಗಳು ಹಾಗೂ ಶಿಕ್ಷಣ ಪ್ರೇಮಿ ಜನತೆ ಕನ್ನಡವನ್ನು ರಕ್ಷಿಸಲು ನಾಗರಿಕ ಜನರು ಧ್ವನಿಯತ್ತಬೇಕೆಂದರು.

# ಗ್ರಾಮಮಟ್ಟದಲ್ಲೇ ಉದ್ಯೋಗ ಹೆಚ್ಚಳಕ್ಕೆ ಕ್ರಮ

**ಬೀದರ್, ಏ.22:** ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಗ್ರಾಮೀಣ ಪ್ರದೇಶದ ಜನರಿಗೆ ಉದ್ಯೋಗ ಒದಗಿಸುವ ಉದ್ದೇಶದಿಂದ ಜಿಲ್ಲೆಯ ಔರಾದ ತಾಲ್ಲೂಕಿನ ಜೋಜನಾ ಗ್ರಾ.ಪಂ ವ್ಯಾಪ್ತಿಯ ಬೋರ್ಗಿ ಗ್ರಾಮದಲ್ಲಿ ರೋಜಗಾರ್ ದಿವಸ್ ಆಚರಿಸಲಾಯಿತು.

ತಾ.ಪಂ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ ಮಾತನಾಡಿ, ಗ್ರಾಮೀಣ ಪ್ರದೇಶದ ಜನರು ಬೇಸಿಗೆಯಲ್ಲಿ ಉದ್ಯೋಗಕ್ಕಾಗಿ ಹೊರ ರಾಜ್ಯಗಳಿಗೆ ವಲಸೆ ಹೋಗುವ ಪರಿಸ್ಥಿತಿಯನ್ನು ತಪ್ಪಿಸಲು ಗ್ರಾಮಮಟ್ಟದಲ್ಲೇ ಉದ್ಯೋಗ ಅವಕಾಶಗಳನ್ನು ಹೆಚ್ಚಿಸುವುದಕ್ಕೆ ಒತ್ತು ನೀಡಲಾಗಿದೆ'. ಇದೇ ವೇಳೆ ಪ್ರಧಾನ ಮಂತ್ರಿ ಭೀಮಾ ಸುರಕ್ಷಾ ಯೋಜನೆ ಹಾಗೂ ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಎನ್‌ಎಂಎಂಎಸ್ ವ್ಯವಸ್ಥೆಯ ಮೂಲಕ ಹಾಜರಾತಿಯನ್ನು ದಿನಕ್ಕೆ ಎರಡು ಬಾರಿ ಕಡ್ಡಾಯವಾಗಿ ದಾಖಲಿಸಬೇಕು ಎಂದು ಸಿಬ್ಬಂದಿಗೆ ಸೂಚಿಸಿದರು.

ಅಭಿವೃದ್ಧಿ ಅಧಿಕಾರಿ ನರಸಿಂಗ್ ಮಾನೆ ಮಾತನಾಡಿ, ನರೇಗಾ ಯೋಜನೆ ಯಡಿ ಅರ್ಹ ಕುಟುಂಬಗಳಿಗೆ ಉದ್ಯೋಗ ನೀಡಲು ಆದ್ಯತೆ ನೀಡಲಾಗುತ್ತಿದೆ. ಕಾರ್ಮಿಕರು ಸಮಯಕ್ಕೆ ಸರಿಯಾಗಿ ಕೆಲಸಕ್ಕೆ ಹಾಜರಾಗುವುದರ ಜೊತೆಗೆ ಹಾಜರಾತಿ ದಾಖಲಿಸುವಲ್ಲಿ ಸಹಕರಿಸ ಬೇಕು ಎಂದು ಮನವಿ ಮಾಡಿದರು.

ನೀರಿನ ವ್ಯವಸ್ಥೆಗೆ ಸೂಚನೆ: ಬೇಸಿಗೆ ತಾಪಮಾನ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕಾಮಗಾರಿಗಳನ್ನು ಬೆಳಿಗ್ಗೆ ಬೇಗ ಆರಂಭಿಸಿ, ಮಧ್ಯಾಹ್ನ ವಿರಾಮದ ನಂತರ ಮುಂದುವರಿಸಲು ಸೂಚಿಸಲಾಗಿದೆ. ಕಾಮಗಾರಿ ಸ್ಥಳದಲ್ಲಿ ಕಾರ್ಮಿಕರಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಲಭ್ಯ ಕಡ್ಡಾಯವಾಗಿ ಒದಗಿಸಬೇಕು' ಎಂದು ಶಿವಕುಮಾರ ಘಾಟೆ ತಿಳಿಸಿದರು.

# ಶ್ರೀ ಶಿವಶಕ್ತಿ ದೇವಸ್ಥಾನಕ್ಕೆ 1,11,000ರೂ. ದೇಣಿಗೆ ನೀಡಿದ ಮುಂಡರಗಿ ನಾಗರಾಜ್

**ಬಳ್ಳಾರಿ, ಏ.22–** ಬಳ್ಳಾರಿ ನಗರದ ನಾಲ್ಕನೇ ವಾರ್ಡಿನ ಜಗದಾಂಭ ಕಾಲನಿಯ (ಶ್ರೀ ಬನ್ನಿ ಮಹಾಕಾಳಿ ದೇವಸ್ಥಾನ) ಶ್ರೀ ಶಿವಶಕ್ತಿ ದೇವಸ್ಥಾನ ನಿರ್ಮಾಣ ಮಾಡಲು ಕಾಂಗ್ರೆಸ್ ಹಿರಿಯ ಮುಖಂಡ, ಲಿಡ್ಕರ್ ಅಧ್ಯಕ್ಷರು, ಬಡವರ ಬಂಧು, ಸಹಾಯ ಮಾಡುವಲ್ಲಿ ಮುಂಚೂಣಿಯಲ್ಲಿರುವ ದಾತರು ಆದಂತ ಮುಂಡರಗಿ ನಾಗರಾಜ್ ಅವರು ಜಗದಾಂಭ ಕಾಲನಿ ಯಲ್ಲಿರುವ



ಅತ್ಯಂತ ಶಕ್ತಿ, ಮಹಿಮೆ, ಚರಿತ್ರೆ ಇರುವ ಪುರಾತನ ದೇವಸ್ಥಾನವಾದ ಶಿವಶಕ್ತಿ ದೇವಸ್ಥಾನ ನಿರ್ಮಾಣ ಮಾಡಲು 1,11,000 ರೂಪಾಯಿಗಳನ್ನು ದೇಣಿಗೆಯಾಗಿ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಸರಕಾರದಿಂದ ಸಹಾಯ ಧನವನ್ನು ಮಂಜೂರು ಮಾಡಿಸುವುದಾಗಿ ಭರವಸೆ ನೀಡಿದ್ದಾರೆ. ಇದೇ ವೇಳೆ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾದರು.

# ಬಾಗಲಕೋಟೆ ವಿವಿ ಗೌರವ ಡಾಕ್ಟರೇಟ್‌ಗೆ ಮೂವರ ಆಯ್ಕೆ

**ಬಾಗಲಕೋಟೆ, ಏ.22:** ಇಳಕಲ್ ವಿಜಯ ಮಹಾಂತೇಶ ಸಂಸ್ಥಾನ ಮಠದ ಗುರುಮಹಾಂತ ಸ್ವಾಮೀಜಿ, ಬಾಹ್ಯಾಕಾಶ ವಿಜ್ಞಾನಿ ಎಸ್. ನಂಬಿ ನಾರಾಯಣನ್, ಉದ್ಯಮಿ ಮಹೇಶ ಬೆಲ್ಲದ ಅವರಿಗೆ ಜಮಖಂಡಿಯಲ್ಲಿರುವ ಬಾಗಲಕೋಟ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಆಯ್ಕೆ ಮಾಡಲಾಗಿದೆ.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಆನಂದ ದೇಶಪಾಂಡೆ, ಗುರುಮಹಾಂತ ಸ್ವಾಮೀಜಿ ಅವರು ದಾರ್ಶನಿಕರಾಗಿ ವ್ಯಸನಮುಕ್ತ ಸಮಾಜ, ಸಾಮಾಜಿಕ ಸುಧಾರಣೆಗಳಿಗೆ ಮಾಡಿರುವ ಕಾರ್ಯ ಗುರುತಿಸಿ, ಎಸ್. ನಂಬಿ ನಾರಾಯಣನ್ ಅವರಿಗೆ ಭಾರತೀಯ ಬಾಹ್ಯಾಕಾಶಕ್ಕೆ ನೀಡಿದ ಕೊಡುಗೆಗಾಗಿ ನೀಡಲಾಗುತ್ತಿದೆ ಎಂದರು.

ಮಹೇಶ ಬೆಲ್ಲದ ಅವರಿಗೆ ಟೆಕ್ ಉದ್ಯಮ, ಸಾಮಾಜಿಕ ಸೇವೆ, ಗುಣಮಟ್ಟದ ಶಿಕ್ಷಣಕ್ಕೆ ನೀಡಿದ ಕೊಡುಗೆ ಗುರುತಿಸಿ ಗೌರವ ಡಾಕ್ಟರೇಟ್ ನೀಡಲು ನಿರ್ಧರಿಸಲಾದೆ ಎಂದರು.

ಏ.24 ರಂದು ಬಿಎಲ್‌ಡಿಇ ದರ್ಬಾರ್ ಹಾಲ್‌ನ್ನಲ್ಲಿ ನಡೆಯುವ ಒಂದನೇ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರಚಂದ್ ಗೆಹಲೋತ್ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡಲಿದ್ದಾರೆ ಎಂದು ತಿಳಿಸಿದರು.

### ಸಭೆ, ಸಮಾರಂಭ, ನಿಶ್ಚಿತಾರ್ಥ, ಮದುವೆ ಮೊದಲಾದ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲ

# ಸಮುದಾಯ ಭವನಗಳು ಗ್ರಾಮೀಣರ ಸಾಂಸ್ಕೃತಿಕ ಕೇಂದ್ರ: ಎಂಎಲ್‌ಸಿ ಡಾ.ಯತೀಂದ್ರ ಸಿದ್ದರಾಮಯ್ಯ

**ಮೈಸೂರು, ಏ.22:** ಸಮುದಾಯ ಭವನಗಳು ಗ್ರಾಮೀಣ ಜನರ ಸಾಂಸ್ಕೃತಿಕ ಕೇಂದ್ರಗಳಾಗುವ ಜೊತೆಗೆ ಎಲ್ಲಾ ತಳ ಸಮುದಾಯದ ಜನರು ಸಭೆ, ಸಮಾರಂಭ, ನಿಶ್ಚಿತಾರ್ಥ, ಮದುವೆ ಮೊದಲಾದ ಕಾರ್ಯಕ್ರಮಗಳನ್ನು ನಡೆಸಲು ಅನುಕೂಲ ಕಲ್ಪಿಸಿವೆ' ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ವರುಣ ಕ್ಷೇತ್ರದ ನಗರ್ಲೆ ಗ್ರಾಮದಲ್ಲಿ 80 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣವಾಗಿರುವ ವಾಲ್ಮೀಕಿ ಸಮುದಾಯ ಭವನದ ಉದ್ಘಾಟನೆ, 40 ಲಕ್ಷ ರೂ. ವೆಚ್ಚದಲ್ಲಿ ಶ್ರೀರಾಮ ಮಂದಿರ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿ, ಶಾಲಾ ಕೊಠಡಿಗಳನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವರುಣ ಕ್ಷೇತ್ರದ ಎಲ್ಲಾ ಗ್ರಾಮಗಳಲ್ಲೂ ಸಮುದಾಯ ಭವನಗಳನ್ನು ನಿರ್ಮಿಸಿ ಬಡಜನರಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ. ಇದರಿಂದ ಜನರು ಹಣ ಉಳಿತಾಯ ಮಾಡಿಕೊಳ್ಳಲು ಅನುಕೂಲ ಕಲ್ಪಿಸಿದ್ದಾರೆ.

ಇದರ ಸದುಪಯೋಗ ವನ್ನು ಎಲ್ಲರೂ ಪಡೆದುಕೊಳ್ಳಬೇಕು. ಪ್ರತಿ ಗ್ರಾಮದಲ್ಲೂ ಶ್ರೀರಾಮಮಂದಿರ, ದೇವಸ್ಥಾನಗಳನ್ನು ನಿರ್ಮಿಸಿ ಜನರು ನೆಮ್ಮದಿಯಿಂದ ಪೂಜೆ, ಧ್ಯಾನ ಮಾಡಲು ಅನುಕೂಲವಾಗಿದೆ.



ವರುಣ ಕ್ಷೇತ್ರದ ಎಲ್ಲಾ ಗ್ರಾಮಗಳಲ್ಲೂ ಶಾಲೆಗಳಲ್ಲೂ ಅಗತ್ಯವಾದಷ್ಟು ಕೊಠಡಿಗಳನ್ನು ನಿರ್ಮಿಸಿ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗಿದೆ ಎಂದು ತಿಳಿಸಿದರು.

ಪಂಚ ಗ್ಯಾರಂಟಿಗಳನ್ನು ಜಾರಿಗೊಳಿಸಿರುವುದರಿಂದ ಗ್ರಾಮೀಣ ಬಡ ಜನರು, ಮಹಿಳೆಯರು ನೆಮ್ಮದಿಯಾಗಿ ಜೀವನ ನಡೆಸುತ್ತಿದ್ದಾರೆ. ನಮ್ಮ ಸರ್ಕಾರ ನುಡಿದಂತೆ ನಡೆದಿದೆ' ಎಂದರು.

ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ರಂಗಸ್ವಾಮಿ, ಮುಖಂಡರಾದ ಎಸ್.ಸಿ. ಬಸವರಾಜು, ನಾರಾಯಣ ನಾಯ್ಕ, ನರಸಿಂಹಮೂರ್ತಿ, ಅಲ್ತಫ್ಪಾಷಾ, ಆಪ್ತ ಸಹಾಯಕರಾದ ಪ್ರದೀಪ್ಕುಮಾರ್, ಮಹೇಶ್ ಹಾಜರಿದ್ದರು.

# ನೇಪಾಳದಲ್ಲಿ ಭುಗಿಲೆದ್ದ ಆಕ್ರೋಶ: ಬಾಲೆನ್ ಶಾ ಸರ್ಕಾರದ ಗೃಹ ಸಚಿವ ರಾಜೀನಾಮೆ



**ಕಠ್ಮಂಡು, ಏ.22:** ನೇಪಾಳದ ಗೃಹ ಸಚಿವ ಸುಧನ್ ಗುರುಂಗ್ ಅವರು ಅಧಿಕಾರ ವಹಿಸಿಕೊಂಡ 26 ದಿನಗಳಲ್ಲಿ ರಾಜೀನಾಮೆ ನೀಡಿದ್ದಾರೆ. ಹಣಕಾಸಿನ ಆಸ್ತಿಗಳ ಬಗ್ಗೆ ಎದ್ದಿರುವ ಕಳವಳಗಳ ಬಗ್ಗೆ ನಿಷ್ಪಕ್ಷಪಾತ ತನಿಖೆಯನ್ನು ಉಲ್ಲೇಖಿಸಿ ಸುಧನ್ ಗುರುಂಗ್ ರಾಜೀನಾಮೆ ನಿರ್ಧಾರ ಪ್ರಕಟಿಸಿದ್ದಾರೆ. ಉದ್ಯಮಿ ದೀಪಕ್ ಭಟ್ಟ ಅವರೊಂದಿಗೆ ವ್ಯವಹಾರ ಪಾಲುದಾರಿಕೆ ಮತ್ತು ಸೂಕ್ಷ್ಮ ವಿಮಾ ಕಂಪನಿಗಳಲ್ಲಿ ಅನುಮಾನಾಸ್ಪದ ಹೂಡಿಕೆಗಳನ್ನು ಹೊಂದಿರುವ ಆರೋಪವನ್ನು ಸುಧನ್ ಗುರುಂಗ್ ಎದುರಿಸುತ್ತಿದ್ದಾರೆ. ದೀಪಕ್ ಭಟ್ಟ ಅವರ ಮೇಲೆ ಹಣ ವರ್ಗಾವಣೆ ಆರೋಪವಿದ್ದು, ತನಿಖೆ ನಡೆಯುತ್ತಿದೆ.

ಗೃಹ ಸಚಿವರಾದ ನಂತರ ಭ್ರಷ್ಟಾಚಾರದ ವಿರುದ್ಧ ಆಕ್ರಮಣಕಾರಿ ನಿಲುವು ತೆಗೆದುಕೊಂಡ ಸುಧನ್ ಗುರುಂಗ್, ಈಗ ತಮ್ಮ ವೈಯಕ್ತಿಕ ಹೂಡಿಕೆಗಳ ಬಗ್ಗೆ ಟೀಕೆಗಳನ್ನು ಎದುರಿಸುತ್ತಿದ್ದಾರೆ. ವ್ಯಾಪಕ ಪ್ರತಿಭಟನೆಗಳ ನಂತರ ಅವರು ರಾಜೀನಾಮೆ ನೀಡಲು ನಿರ್ಧರಿಸಿದ್ದಾರೆ. ಫೇಸ್‌ಬುಕ್ ಪೋಸ್ಟ್‌ನಲ್ಲಿ ಸುಧನ್ ಗುರುಂಗ್ ಬರೆದಿದ್ದಾರೆ. ನನ್ನ ವಿರುದ್ಧದ ಆರೋಪಗಳ ಬಗ್ಗೆ ನ್ಯಾಯಯುತ ತನಿಖೆಯನ್ನು ಖಚಿತಪಡಿಸಿಕೊಳ್ಳಲು, ಅಧಿಕಾರದಲ್ಲಿರುವಾಗ ಯಾವುದೇ ಹಿತಾಸಕ್ತಿ ಸಂಘರ್ಷವನ್ನು ತಪ್ಪಿಸಲು ಮತ್ತು ತನಿಖಾ ಪ್ರಕ್ರಿಯೆಯ ಮೇಲೆ ಯಾವುದೇ ಪ್ರಭಾವ ಬೀರುವುದನ್ನು ತಪ್ಪಿಸಲು, ನಾನು ಗೃಹ ಸಚಿವ ಹುದ್ದೆಗೆ ರಾಜೀನಾಮೆ ನೀಡಲು ನಿರ್ಧರಿಸಿದ್ದೇನೆ ಎಂದು ಹೇಳಿದರು.

ನನಗೆ, ನೈತಿಕತೆಯು ಸ್ಥಾನಕ್ಕಿಂತ ಹೆಚ್ಚು. ಸಾರ್ವಜನಿಕ ನಂಬಿಕೆಗಿಂತ ದೊಡ್ಡಶಕ್ತಿ ಇನ್ನೊಂದಿಲ್ಲ. ಉತ್ತಮ ಆಡಳಿತ, ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಬೇಡುತ್ತಿರುವ ನೇಪಾಳದಲ್ಲಿ ನಡೆಯುತ್ತಿರುವ Gen Z ಚಳವಳಿ ಸಹ ಅದೇ ಸಂದೇಶವನ್ನು ರವಾನಿಸಿದೆ. ಸಾರ್ವಜನಿಕ ಜೀವನವು ಶುದ್ಧವಾಗಿರಬೇಕು. ನಾಯಕತ್ವವು ಜವಾಬ್ದಾರಿಯುತ ವಾಗಿರಬೇಕು. ನನ್ನ 46 ಸಹೋದರ ಸಹೋದರಿಯರ ರಕ್ತ ಮತ್ತು ತ್ಯಾಗದಿಂದ ರೂಪುಗೊಂಡ ಸರ್ಕಾರವನ್ನು ಯಾರಾದರೂ ಪ್ರಶ್ನಿಸಿದರೆ, ನನ್ನ ಉತ್ತರ ನೈತಿಕತೆ. ತಮ್ಮ ವಿರುದ್ಧದ ಆರೋಪಗಳ ತನಿಖೆಗೆ ಸಂಪೂರ್ಣವಾಗಿ ಸಹಕರಿಸುವುದಾಗಿಯೂ ಹೇಳಿದ್ದಾರೆ.

ಹಲವಾರು ವದಂತಿಗಳನ್ನು ಉಲ್ಲೇಖಿಸಿ ಸುಧನ್ ಗುರುಂಗ್ ಎಲ್ಲರಿಗೂ ಊಹಾಪೋಹಗಳಿಂದ ದೂರವಿರಲು ಮನವಿ ಮಾಡಿದರು. ಆರೋಪಗಳು ಮತ್ತು ಸತ್ಯ ಒಂದೇ ಅಲ್ಲ. ನಿರ್ಧಾರಗಳು ಭಾವನೆಗಳ ಆಧಾರದ ಮೇಲೆ ಇರಬೇಕು. ಪುರಾವೆಗಳ ಆಧಾರದ ಮೇಲೆ ಇರಬೇಕು. ಪಕ್ಷವು ತೆಗೆದುಕೊಳ್ಳುವ ಪ್ರತಿಯೊಂದು ನಿರ್ಧಾರವನ್ನು ನಾನು ಬೆಂಬಲಿಸುತ್ತೇನೆ ಮತ್ತು ತನಿಖೆಗೆ ಸಂಪೂರ್ಣವಾಗಿ ಸಹಕರಿಸುತ್ತೇನೆ ಎಂದು ಹೇಳಿದರು.

ಬಾಲೆನ್ ಶಾ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಒಂದೇ ತಿಂಗಳಿನಲ್ಲಿ ಹೊಸ ಸರ್ಕಾರದ ವಿರುದ್ಧ ಜನಾಕ್ರೋಶ ಭುಗಿಲೆದಿದ್ದು ವಿದ್ಯಾರ್ಥಿಗಳು, ರಾಜಕೀಯ ಗುಂಪುಗಳು ಮತ್ತು ಸಾಮಾನ್ಯ ನಾಗರಿಕರು ಸೇರಿದಂತೆ ಪ್ರತಿಭಟನಾಕಾರರು ಕಠ್ಮಂಡು ಮತ್ತು ಇತರ ನಗರಗಳಲ್ಲಿ ಬೀದಿಗಿಳಿದಿದ್ದಾರೆ. ಸದ್ಯ ಈ ಪ್ರತಿಭಟನೆಗಳು ಬೀದಿಗಳಿಂದ ದೇಶದ ಆಡಳಿತ ಕೇಂದ್ರವಾದ ಸಿಂಘಾ ದರ್ಬಾರ್‌ಗೆ ಹರಡಿವೆ. ಭಾರತದಿಂದ ತರುವ 100 ರೂ. ಗಿಂತ ಹೆಚ್ಚಿನ ಮೌಲ್ಯದ ಸರಕುಗಳ ಮೇಲಿನ ಕಡ್ಡಾಯ ಸುಂಕ ಸೇರಿದಂತೆ ವಿದ್ಯಾರ್ಥಿ ಯೂನಿಯನ್ ಬ್ಯಾನ್ ಮಾಡಿರುವುದು ಪ್ರತಿಭಟನೆಗೆ ಕಾರಣವಾಗಿದೆ.

# ಅಮೆರಿಕ ನೌಕಾ ದಿಗ್ಬಂಧನವನ್ನು ತೆಗೆದುಹಾಕಿದ ನಂತರವೇ ಇಸ್ಲಾಮಾಬಾದ್‌ನಲ್ಲಿ ಮಾತುಕತೆ ಸಾಧ್ಯ ಎಂದು ಇರಾನ್ ಹೇಳಿದೆ

**ಟೆಹ್ರಾನ್, ಏ.22:** ಅಮೆರಿಕವು ಇರಾನ್ ಬಂದರುಗಳ ಮೇಲಿನ ನೌಕಾ ದಿಗ್ಬಂಧನವನ್ನು ಕೊನೆಗೊಳಿಸಿದರೆ ಮಾತ್ರ ಇಸ್ಲಾಮಾಬಾದ್‌ನಲ್ಲಿ ಮಾತುಕತೆ ಮೇಜಿಗೆ ಬರುವುದಾಗಿ ಇರಾನ್ ಬುಧವಾರ ಹೇಳಿದೆ, ಇದು ಕದನ ವಿರಾಮ ಉಲ್ಲಂಘನೆ ಎಂದು ಕರೆದಿದೆ. ಅದೇ ಸಮಯದಲ್ಲಿ, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕದನ ವಿರಾಮ ವಿಸ್ತರಣೆಯನ್ನು ಟೆಹ್ರಾನ್ ಅಪಹಾಸ್ಯ ಮಾಡಿತು, ಹಿರಿಯ ಇರಾನಿನ ಸಲಹೆಗಾರರೊಬ್ಬರು ಸೋತ ಕಡೆಯವರು ನಿಯಮಗಳನ್ನು ನಿರ್ದೇಶಿಸಲು ಸಾಧ್ಯವಿಲ್ಲ" ಎಂದು ಹೇಳಿದ್ದಾರೆ,

ಈ ಕ್ರಮವನ್ನು ಅರ್ಥಹೀನ ಮತ್ತು ಮತ್ತಷ್ಟು ಉಲ್ಬಣಕ್ಕೆ ಸಮಯವನ್ನು ಖರೀದಿಸುವ ಸಂಭಾವ್ಯ ಪ್ರಯತ್ನ ಎಂದು ವಿವರಿಸಿದ್ದಾರೆ. ಯುದ್ಧವನ್ನು ಕೊನೆಗೊಳಿಸಲು ಷರತ್ತುಗಳೊಂದಿಗೆ ಟೆಹ್ರಾನ್ ಪರಿಷ್ಕೃತ ಪ್ರಸ್ತಾವನೆಯನ್ನು ಸಲ್ಲಿಸುವವರೆಗೆ ಮತ್ತು ಮಾತುಕತೆಗಳು ಮುಕ್ತಾಯಗೊಳ್ಳುವವರೆಗೆ ಟ್ರಂಪ್ ಇರಾನ್ನೊಂದಿಗೆ ಕದನ ವಿರಾಮವನ್ನು ವಿಸ್ತರಿಸಿದ್ದರಿಂದ ಇದು ಬಂದಿದೆ, ಟೆಹ್ರಾನ್ ಮೇಲೆ ಒತ್ತಡವನ್ನು ಕಾಯ್ದುಕೊಳ್ಳುವಾಗ ರಾಜತಾಂತ್ರಿಕ ಮಾರ್ಗಗಳನ್ನು ತೆರೆದಿಡುತ್ತದೆ. ಬದಲಾಗುತ್ತಿರುವ ಅಮೆರಿಕದ ಬೇಡಿಕೆಗಳನ್ನು ಉಲ್ಲೇಖಿಸಿ ಟೆಹ್ರಾನ್ ಸಂಶಯ ವ್ಯಕ್ತಪಡಿಸುತ್ತಿದೆ, ಆದರೆ ಉದ್ವಿಗ್ನತೆಗಳು ಹೆಚ್ಚಾಗುತ್ತವೆ ಮತ್ತು ಶಾಂತಿ ಮಾತುಕತೆಗಳನ್ನು ಸುತ್ತುವರೆದಿರುವ ಅನಿಶ್ಚಿತತೆ ಇದೆ. ಆದಾಗ್ಯೂ, ಇರಾನ್ ಬಂದರುಗಳ ಮೇಲಿನ ಅಮೆರಿಕದ ನೌಕಾ ದಿಗ್ಬಂಧನವು ಜಾರಿಯಲ್ಲಿರುತ್ತದೆ ಎಂದು ಟ್ರಂಪ್ ದೃಢವಾಗಿ ಹೇಳಿದ್ದಾರೆ.

ಬೆದರಿಕೆಗಳ ನೆರಳಿನಲ್ಲಿ" ಅಥವಾ ನಿರ್ಬಂಧಗಳು ಉಳಿದಿರುವಾಗ ಮಾತುಕತೆ ನಡೆಸುವುದಿಲ್ಲ ಎಂದು ಇರಾನ್ ಪುನರುಚ್ಚರಿಸಿದೆ, ಇದು ಕದನ ವಿರಾಮದ ದುರ್ಬಲತೆಯನ್ನು ಒತ್ತಿಹೇಳುತ್ತದೆ. ಏತನ್ಮಧ್ಯೆ, ಯುದ್ಧವನ್ನು ಕೊನೆಗೊಳಿಸಲು ಪಾಕಿಸ್ತಾನದಲ್ಲಿ ಮಾತುಕತೆ ಮೇಜಿಗೆ ಮರಳಲು ಇರಾನ್ ಒಂದು ಷರತ್ತನ್ನು ವಿಧಿಸಿದೆ. ಇರಾನ್‌ನವಿಶ್ವಸಂಸ್ಥೆಯ ರಾಯಭಾರಿ ಅಮೀರ್ ಸಯೀದ್ ಇರಾವನಿ, ಅಮೆರಿಕವು ಇರಾನ್ ಬಂದರುಗಳ ಮೇಲಿನ ದಿಗ್ಬಂಧನವನ್ನು ಕೊನೆಗೊಳಿಸಿದ ನಂತರ ಪಾಕಿಸ್ತಾನದ ರಾಜಧಾನಿಯಲ್ಲಿ ಮಾತುಕತೆಗಳನ್ನು ನಡೆಸಲಾಗುವುದು ಎಂದು ಹೇಳಿದರು. ಇರಾನ್ ಮಾತುಕತೆಗಳಲ್ಲಿ ಸೇರಲು ನಿರಾಕರಿಸಿದ್ದಕ್ಕೆ ಅಮೆರಿಕದ "ಅತಿಯಾದ ಬೇಡಿಕೆಗಳು, ಅಸಮಂಜಸ ಮತ್ತು ಅವಾಸ್ತವಿಕ ನಿರೀಕ್ಷೆಗಳು, ಸ್ಥಾನಗಳಲ್ಲಿನ ಆಗಾಗ್ಗೆ ಬದಲಾವಣೆಗಳು ಮತ್ತು ನಿರಂತರ ವಿರೋಧಾಭಾಸ" ಕಾರಣ ಎಂದು ಅವರು ಆರೋಪಿಸಿದರು.

"ವಾಷಿಂಗ್ಟನ್ ನೌಕಾ ದಿಗ್ಬಂಧನವನ್ನು ಕೊನೆಗೊಳಿಸಿದ ತಕ್ಷಣ, ಮುಂದಿನ ಸುತ್ತಿನ ಮಾತುಕತೆಗಳು ಇಸ್ಲಾಮಾಬಾದ್ನಲ್ಲಿ ನಡೆಯುತ್ತವೆ ಎಂದು ನಾನು ಭಾವಿಸುತ್ತೇನೆ. ಯಾವುದೇ ಹೊಸ ಸುತ್ತಿನ ಮಾತುಕತೆಗಳ ಮೊದಲು ಯುನೈಟೆಡ್ ಸ್ಟೇಟ್ಸ್ ತನ್ನ ಕದನ ವಿರಾಮ ಉಲ್ಲಂಘನೆಯನ್ನು ನಿಲ್ಲಿಸಬೇಕು. ನಾವು ಮಿಲಿಟರಿ ಆಕ್ರಮಣದ ಪ್ರಾರಂಭಿಕರಾಗಿಲ್ಲ. ಅವರು ರಾಜಕೀಯ ಪರಿಹಾರವನ್ನು ಬಯಸಿದರೆ, ನಾವು ಸಿದ್ಧರಿದ್ದೇವೆ. ಅವರು ಯುದ್ಧವನ್ನು ಬಯಸಿದರೆ, ಇರಾನ್ ಕೂಡ ಅದಕ್ಕೆ ಸಿದ್ಧವಾಗಿದೆ. ಅದು ಸಂಭವಿಸಿದಾಗ, ಮುಂದಿನ ಸುತ್ತಿನ ಮಾತುಕತೆಗಳು ಇಸ್ಲಾಮಾಬಾದ್ನಲ್ಲಿ ನಡೆಯುತ್ತವೆ" ಎಂದು ಅವರು ಎಚ್ಚರಿಸಿದರು. ಇದರ ಜೊತೆಗೆ, ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಘರ್ ಗಾಲಿಬಾಫ್ ಅವರ ಹಿರಿಯ ಸಲಹೆಗಾರರಾದ ಮಹ್ದಿ ಮೊಹಮ್ಮದಿ ಅವರು ಅಮೆರಿಕವನ್ನು ಅಪಹಾಸ್ಯ ಮಾಡುತ್ತಾ, ಕದನ ವಿರಾಮ ವಿಸ್ತರಣೆಯು "ಏನೂ ಅಲ್ಲ" ಏಕೆಂದರೆ "ಸೋತ ಕಡೆಯವರು ಷರತ್ತುಗಳನ್ನು ನಿರ್ದೇಶಿಸಲು ಸಾಧ್ಯವಿಲ್ಲ" ಎಂದು ಹೇಳಿದರು. ಈ ವಿಸ್ತರಣೆಯನ್ನು "ಹಠಾತ್ ದಾಳಿಗೆ ಸಮಯ ಖರೀದಿಸಲು" ಒಂದು ತಂತ್ರ ಎಂದು ಅವರು ವಿವರಿಸಿದರು. ಕದನ ವಿರಾಮ ಮಾತುಕತೆಯ ಬಗ್ಗೆ ಇರಾನ್ ಕೂಡ ಅನುಮಾನಗಳನ್ನು ವ್ಯಕ್ತಪಡಿಸಿದೆ, ಇದು ದೇಶದ ವಿರುದ್ಧ "ಹಠಾತ್ ದಾಳಿಗಳಿಗೆ ತಂತ್ರ" ಆಗಿರಬಹುದು ಎಂದು ಸೂಚಿಸುತ್ತದೆ. ಗಲ್ಫ್ ಪ್ರದೇಶದಿಂದ ದಾಳಿಗಳನ್ನು ಪ್ರಾರಂಭಿಸಿದರೆ ಮಧ್ಯಪ್ರಾಚ್ಯದಾದ್ಯಂತ ತೈಲ ಉತ್ಪಾದನೆಯನ್ನು ಗುರಿಯಾಗಿಸಬಹುದು ಎಂದು ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ಹೇಳಿದೆ. ಕದನ ವಿರಾಮ ವಿಸ್ತರಣೆಯು ಸಂಭಾವ್ಯ ಮಿಲಿಟರಿ ಉಲ್ಬಣಕ್ಕೆ "ಸಮಯವನ್ನು ಖರೀದಿಸುವ ತಂತ್ರ" ಎಂದು ಇರಾನ್ನ ಸಂಸದೀಯ ಸ್ಪೀಕರ್ ಅವರ ಸಲಹೆಗಾರ ಹೇಳಿದರು. ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಅವರು ಅಮೆರಿಕದ ನೌಕಾ ದಿಗ್ಬಂಧನವನ್ನು "ಯುದ್ಧದ ಕ್ರಿಯೆ" ಮತ್ತು ಕದನ ವಿರಾಮದ ಉಲ್ಲಂಘನೆ ಎಂದು ಬಣ್ಣಿಸಿದರು.

ಪಾಕಿಸ್ತಾನದ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಮತ್ತು ಪ್ರಧಾನಿ ಶೆಹಬಾಜ್ ಷರೀಫ್ ಅವರ ಕೋರಿಕೆಯ ಮೇರೆಗೆ ಕದನ ವಿರಾಮ ವಿಸ್ತರಣೆಯನ್ನು ಟ್ರಂಪ್ ಮಂಗಳವಾರ (ಏಪ್ರಿಲ್ 21) ಘೋಷಿಸಿದರು. ಇರಾನ್ ಸರ್ಕಾರವು "ಗಂಭೀರವಾಗಿ ಮುರಿದುಹೋಗಿದೆ" ಮತ್ತು ಪಾಕಿಸ್ತಾನದ ವಿನಂತಿಯ ನಂತರ, ಇರಾನ್ ಪ್ರಸ್ತಾವನೆಯನ್ನು ಸಲ್ಲಿಸುವವರೆಗೆ – "ಅವರ ನಾಯಕರು ಮತ್ತು ಪ್ರತಿನಿಧಿಗಳು ಏಕೀಕೃತ ಪ್ರಸ್ತಾವನೆಯನ್ನು ಮಂಡಿಸುವವರೆಗೆ" ಇರಾನ್ ಮೇಲೆ ದಾಳಿ ಮಾಡುವ ಯೋಜನೆಗಳನ್ನು ಅವರು ಸ್ಥಗಿತಗೊಳಿಸಿದ್ದಾರೆ ಎಂದು ಅವರು ಹೇಳಿದ್ದಾರೆ. ಮಿಲಿಟರಿ ದಿಗ್ಬಂಧನವನ್ನು ಮುಂದುವರಿಸುತ್ತದೆ ಮತ್ತು ಮುಂದಿನ ಕ್ರಮಕ್ಕೆ ಸಿದ್ಧವಾಗಿದೆ ಮತ್ತು ಸಮರ್ಥವಾಗಿದೆ ಎಂದು ಅವರು ಮುಂದುವರಿಸಿದರು. ಇರಾನ್ ಆರ್ಥಿಕವಾಗಿ ಕುಸಿಯುತ್ತಿದೆ ಎಂದು ಟ್ರಂಪ್ ಹೇಳಿದರು! "ಅವರು ಹಾರ್ಮುಜ್ ಜಲಸಂಧಿಯನ್ನು ತಕ್ಷಣವೇ ತೆರೆಯಲು ಬಯಸುತ್ತಾರೆ – ಹಣಕ್ಕಾಗಿ ಹಸಿವಿನಿಂದ ಬಳಲುತ್ತಿದ್ದಾರೆ! ದಿನಕ್ಕೆ 500 ದಶಲಕ್ಷ ಡಾಲರ್ ಕಳೆದುಕೊಳ್ಳುತ್ತಿದ್ದಾರೆ. ಮಿಲಿಟರಿ ಮತ್ತು ಪೊಲೀಸರು ತಮಗೆ ಹಣ ಸಿಗುತ್ತಿಲ್ಲ ಎಂದು ದೂರುತ್ತಿದ್ದಾರೆ." ಅಮೆರಿಕದ ಬಲವಂತದ ಕ್ರಮದಲ್ಲಿ, ಯುರೋಪಿಯನ್ ಒಕ್ಕೂಟವು ಹೆಚ್ಚುವರಿ ಕ್ರಮಗಳನ್ನು ಸಿದ್ಧಪಡಿಸುತ್ತಿರುವಾಗ, ಅದು ಇರಾನ್ನ ಶಸ್ತ್ರಾಸ್ತ್ರ ಕಾರ್ಯಕ್ರಮಗಳಿಗೆ ಸಂಬಂಧಿಸಿದ ನಿರ್ಬಂಧಗಳನ್ನು ವಿಸ್ತರಿಸಿದೆ.

### ಟೆಹ್ರಾನ್ ಹಾರ್ಮುಜ್ ಮುಚ್ಚಲು ಬಯಸುವುದಿಲ್ಲ

## ಇರಾನ್‌ಗೆ ಪ್ರತಿದಿನ 500 ದಶಲಕ್ಷ ಡಾಲರ್ ನಷ್ಟ : ಟ್ರಂಪ್ ತಿರುಗೇಟು



**ವಾಷಿಂಟನ್, ಏ.22:** ಇರಾನ್ ಹಾರ್ಮುಜ್ ಜಲಸಂಧಿಯನ್ನು ಮುಚ್ಚಲು ಬಯಸುವುದಿಲ್ಲ ಏಕೆಂದರೆ ಅವರು ದಿನಕ್ಕೆ 500 ಮಿಲಿಯನ್ ಯುಎಸ್ ಡಾಲರ್ಗಳನ್ನು ಕಳೆದುಕೊಳ್ಳುತ್ತಿದ್ದಾರೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬುಧವಾರ ಹೇಳಿದ್ದಾರೆ. 'ಅವರು (ಇರಾನ್) ಅದನ್ನು ತೆರೆಯಲು ಬಯಸುತ್ತಾರೆ ಇದರಿಂದ ಅವರು ದಿನಕ್ಕೆ 500ದಶಲಕ್ಷ ಡಾಲರ್‌ಗಳನ್ನು ಗಳಿಸಬಹುದು. ಆದ್ದರಿಂದ, ಅದನ್ನು ಮುಚ್ಚಿದರೆ ಅವರು ಕಳೆದುಕೊಳ್ಳುತ್ತಿರುವುದು ಅದೇ ರೀತಿ ಎಂದು ಟ್ರಂಪ್ ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಹೇಳಿದ್ದಾರೆ.

ಅಮೆರಿಕವು ತನ್ನನ್ನು ಸಂಪೂರ್ಣವಾಗಿ ದಿಗ್ಬಂಧನಗೊಳಿಸಿರುವುದರಿಂದ ಅವರು 'ಮುಖ ಉಳಿಸಲು' ಬಯಸುತ್ತಿರುವುದರಿಂದ ಇರಾನ್ ಅದನ್ನು ಮುಚ್ಚಲು ಬಯಸುತ್ತಿದೆ ಎಂದು ಟ್ರಂಪ್ ಹೇಳಿಕೊಂಡಿದ್ದಾರೆ. ಜನರು ನಾಲ್ಕು ದಿನಗಳ ಹಿಂದೆ ತಮ್ಮನ್ನು ಸಂಪರ್ಕಿಸಿ, ಇರಾನ್ ಜಲಸಂಧಿಯನ್ನು ತಕ್ಷಣವೇ ತೆರೆಯಲು ಬಯಸಿದೆ ಎಂದು ಹೇಳಿದರು. 'ಆದರೆ ನಾವು ಹಾಗೆ ಮಾಡಿದರೆ, ಇರಾನ್ನೊಂದಿಗೆ ಎಂದಿಗೂ ಒಪ್ಪಂದ ಮಾಡಿಕೊಳ್ಳಲು ಸಾಧ್ಯವಿಲ್ಲ, ನಾವು ಅವರ ದೇಶದ ಉಳಿದ ಭಾಗಗಳನ್ನು, ಅವರ ನಾಯಕರನ್ನು ಒಳಗೊಂಡಂತೆ ಸ್ಫೋಟಿಸದ ಹೊರತು' ಎಂದು ಟ್ರಂಪ್ ಎಚ್ಚರಿಸಿದ್ದಾರೆ.

# ಹಾರ್ಮುಜ್ ಜಲಸಂಧಿಯಲ್ಲಿ ಇಸ್ರೇಲ್ ಹಡಗು ಇರಾನ್ ಐಆರ್‌ಜಿಸಿ ವಶಕ್ಕೆ, ಉದ್ವಿಗ್ನ ಪರಿಸ್ಥಿತಿ



**ಟೆಹ್ರಾನ್, ಏ.22:** ಹಾರ್ಮುಜ್ ಜಲಸಂಧಿಯಲ್ಲಿ ಉಲ್ಲಂಘನೆ ಮಾಡಿದ್ದಕ್ಕಾಗಿ ಎರಡು ಹಡಗುಗಳನ್ನು ತಡೆದು ವಶಪಡಿಸಿಕೊಂಡು ಇರಾನಿನ ಪ್ರಾದೇಶಿಕ ಜಲಪ್ರದೇಶಕ್ಕೆ ವರ್ಗಾಯಿಸಲಾಗಿದೆ ಎಂದು ಇಸ್ಲಾಮಿಕ್ ರೆವಲ್ಯೂಷನ್ ಗಾರ್ಡ್ಸ್ ಕಾರ್ಪ್ಸ್ (ಐಆರ್‌ಜಿಸಿ) ನೌಕಾಪಡೆ ಬುಧವಾರ ತಿಳಿಸಿದೆ.

"ಹಾರ್ಮುಜ್ ಜಲಸಂಧಿಯಲ್ಲಿ ಕ್ರಮ ಮತ್ತು ಸುರಕ್ಷತೆಯನ್ನು ಅಡ್ಡಿಪಡಿಸುವುದನ್ನು ಇರಾನ್‌ಗೆ ಕೆಂಪು ರೇಖೆ ಎಂದು ಪರಿಗಣಿಸಲಾಗಿದೆ ಎಂದು ಹೇಳುವ ಮೂಲಕ ಐಆರ್‌ಜಿಸಿ ನೌಕಾಪಡೆ ಎರಡು ಹಡಗುಗಳನ್ನು ವಶಪಡಿಸಿಕೊಂಡು ಇರಾನ್‌ನ ಕರಾವಳಿಗೆ ವರ್ಗಾಯಿಸಿದೆ.

ಇರಾನ್ ಕರಾವಳಿಯಲ್ಲಿ ಒಂದು ಹಡಗಿನ ಮೇಲೆ ಗುಂಡು ಹಾರಿಸಲಾಯಿತು, ಆದರೆ ಒಮಾನ್ ಕರಾವಳಿಯಲ್ಲಿ ದಾಳಿಗೊಳಗಾದ ನಂತರ ಇನ್ನೊಂದು ಹಡಗಿನ ಮೇಲೆ ಹಾನಿಯಾಗಿದೆ.

ಬುಧವಾರ ಬಿಡುಗಡೆಯಾದ ಹೇಳಿಕೆಯಲ್ಲಿ, ಐಆರ್‌ಜಿಸಿ ಹಡಗುಗಳನ್ನು ಎಂಎಸ್ಸಿ–ಫ್ರಾನ್ಸೆಸ್ಕಾ ಮತ್ತು ಎಪಾಮಿನೋಡ್ಸ್ ಎಂದು ಗುರುತಿಸಿದೆ, ಇದು ಇಸ್ರೇಲಿ ಆಡಳಿತಕ್ಕೆ ಸೇರಿದೆ ಎಂದು ಅದು ಹೇಳಿದೆ.

ಹಡಗುಗಳು, ಅನುಮತಿಯಿಲ್ಲದೆ ಕಾರ್ಯನಿರ್ವಹಿಸುತ್ತಿದ್ದವು, ಪುನರಾವರ್ತಿತ ಉಲ್ಲಂಘನೆಗಳನ್ನು ಮಾಡುತ್ತಿದ್ದವು, ಸಂಚರಣೆ ಸಹಾಯ ವ್ಯವಸ್ಥೆಗಳನ್ನು ಹಾಳುಮಾಡುತ್ತಿದ್ದವು ಮತ್ತು ಜಲಸಂಧಿಯಿಂದ ರಹಸ್ಯವಾಗಿ ನಿರ್ಗಮಿಸುವ ಪ್ರಯತ್ನದಲ್ಲಿ ಸಮುದ್ರ ಭದ್ರತೆಗೆ ಅಪಾಯವನ್ನುಂಟುಮಾಡುತ್ತಿದ್ದವು ಎಂದು ಅದು ಹೇಳಿದೆ.

"ಪಡೆಗಳ ಗುಪ್ತಚರ ಪ್ರಾಬಲ್ಯದೊಂದಿಗೆ, ಹಾರ್ಮುಜ್ ಜಲಸಂಧಿಯಲ್ಲಿ ಉದಾತ್ತ ಇರಾನಿನ ರಾಷ್ಟ್ರದ ಹಕ್ಕುಗಳನ್ನು ಎತ್ತಿಹಿಡಿಯುವ ಸಲುವಾಗಿ ಈ ಹಡಗುಗಳನ್ನು ಗುರುತಿಸಿ ನಿಲ್ಲಿಸಲಾಯಿತು" ಎಂದು ಐಆರ್‌ಜಿಸಿ ನೌಕಾಪಡೆ ತಿಳಿಸಿದೆ.

ಹಡಗುಗಳನ್ನು ಈಗ ಅವುಗಳ ಸರಕು ಮತ್ತು ದಾಖಲೆಗಳ ಪರಿಶೀಲನೆಗಾಗಿ ಇರಾನಿನ ಪ್ರಾದೇಶಿಕ ಜಲಪ್ರದೇಶಕ್ಕೆ ವರ್ಗಾಯಿಸಲಾಗಿದೆ ಎಂದು ಅದು ಹೇಳಿದೆ.

ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಗಾಗಿ ಇರಾನ್ ಘೋಷಿಸಿದ ಕಾನೂನುಗಳ ಅನುಷ್ಠಾನವನ್ನು ಅಡ್ಡಿಪಡಿಸುವ ಯಾವುದೇ ಪ್ರಯತ್ನ ಅಥವಾ ಈ ಕಾರ್ಯತಂತ್ರದ ಜಲಮಾರ್ಗದ ಮೂಲಕ ಸುರಕ್ಷಿತ ಮಾರ್ಗಕ್ಕೆ ಹೊಂದಿಕೆಯಾಗದ ಯಾವುದೇ ಚಟುವಟಿಕೆಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತದೆ ಮತ್ತು ಉಲ್ಲಂಘಿಸುವವರ ವಿರುದ್ಧ ನಿರ್ಣಾಯಕ ಮತ್ತು ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಐಆರ್‌ಜಿಸಿ ಈ ಹಿಂದೆ ಹೇಳಿತ್ತು.

ಹಾರ್ಮುಜ್ ಜಲಸಂಧಿಯ ಮೂಲಕ ಹಡಗುಗಳು, ಹಡಗುಗಳು ಅಥವಾ ತೈಲ ಟ್ಯಾಂಕರ್ಗಳ ಯಾವುದೇ ಸಾಗಣೆಯನ್ನು ಐಆರ್‌ಜಿಸಿಯ ಅನುಮತಿ ಮತ್ತು ಸಮನ್ವಯದೊಂದಿಗೆ ನಡೆಸಬೇಕು ಎಂದು ಐಆರ್‌ಜಿಸಿ ಈ ಹಿಂದೆ ಹೇಳಿತ್ತು.

# ಪಾಕಿಸ್ತಾನವು 'ಡಬಲ್ ಗೇಮ್' ತಂತ್ರ: ಮುನಿರ್ ಗುರಿಯಾಗಿಸಿ ಇರಾನ್ ಸರ್ಕಾರ ಆರೋಪ

**ನವದೆಹಲಿ, ಏ.22:** ಪಾಕಿಸ್ತಾನದ ಶಾಂತಿ ದಲ್ಲಾಳಿ ಇಮೇಜ್ನಲ್ಲಿನ ಬಿರುಕುಗಳನ್ನು ಈಗ ನಿರ್ಲಕ್ಷಿಸುವುದು ಅಸಾಧ್ಯ. ಈ ವಾರ ಇರಾನ್ ರಾಜ್ಯ ಮಾಧ್ಯಮವು ಪಾಕಿಸ್ತಾನದ ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಅವರ ಮೇಲೆ ತೀಕ್ಷ್ಣವಾದ, ಸಾರ್ವಜನಿಕ ದಾಳಿಯನ್ನು ನಡೆಸಿತು, ಇಸ್ಲಾಮಾಬಾದ್ ಯುಎಸ್–ಇರಾನ್ ಪರಮಾಣು ಮಾತುಕತೆಗಳಲ್ಲಿ "ಡಬಲ್ ಗೇಮ್" ಆಡುತ್ತಿದೆ, ಇರಾನ್ ನಾಯಕತ್ವಕ್ಕೆ ಖಾಸಗಿ ಪ್ರವೇಶವನ್ನು ಕಾಯ್ದುಕೊಳ್ಳುವಾಗ ವಾಷಿಂಗ್ಟನ್ ಕಡೆಗೆ ವಾಲುತ್ತಿದೆ ಎಂದು ಆರೋಪಿಸಿತು. ಸ್ಟೂಡೆಂಟ್ ನ್ಯೂಸ್ ನೆಟ್ವರ್ಕ್‌ನಲ್ಲಿ ದೂರದರ್ಶನದ ಚರ್ಚೆಯ ಸಂದರ್ಭದಲ್ಲಿ ಪ್ರಸಾರವಾದ ಈ ಸುದ್ದಿ, ವಿಶ್ವದ ಅತ್ಯಂತ ಅಪಾಯಕಾರಿ ಬಿಕ್ಕಟ್ಟುಗಳಲ್ಲಿ ಒಂದರಲ್ಲಿ ಅನಿವಾರ್ಯ ಮಧ್ಯವರ್ತಿಯಾಗಿ ತನ್ನನ್ನು ತಾನು ಇರಿಸಿಕೊಳ್ಳುವಲ್ಲಿ ಗಣನೀಯ ರಾಜತಾಂತ್ರಿಕ ಬಂಡವಾಳವನ್ನು ಪಣಕ್ಕಿಟ್ಟಿರುವ ಪಾಕಿಸ್ತಾನಕ್ಕೆ ಅತ್ಯಂತ ಕೆಟ್ಟ ಸಮಯದಲ್ಲಿ ಎರಡು ನೆರೆಹೊರೆಯವರ ನಡುವಿನ ನಂಬಿಕೆಯಲ್ಲಿ ಗಂಭೀರ ಕುಸಿತವನ್ನು ಬಹಿರಂಗಪಡಿಸಿದೆ. ಈ ಟೀಕೆ ಎರಡು ಮುಸ್ಲಿಂ ಬಹುಸಂಖ್ಯಾತ ನೆರೆಹೊರೆಯವರ ನಡುವಿನ ರಾಜತಾಂತ್ರಿಕ ನಂಬಿಕೆಯಲ್ಲಿ ಗಮನಾರ್ಹ ಮತ್ತು ಸಾರ್ವಜನಿಕ ಕುಸಿತವನ್ನು ಸೂಚಿಸುತ್ತದೆ.

ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವೆ ಅನಿವಾರ್ಯ ಶಾಂತಿ ದಲ್ಲಾಳಿಯಾಗಿ ಪಾಕಿಸ್ತಾನದ ಎಚ್ಚರಿಕೆಯಿಂದ ಬೆಳೆಸಲಾದ ಇಮೇಜ್ ಮರೆಯಾಗುತ್ತಿರುವಂತೆ ತೋರುತ್ತಿದೆ, ಏಕೆಂದರೆ ಇರಾನ್ ಅದು ಪಕ್ಷಪಾತಿಯಾಗಿದೆ ಮತ್ತು "ಡಬಲ್ ಗೇಮ್" ಆಡುತ್ತಿದೆ ಎಂದು ಆರೋಪಿಸುತ್ತದೆ, ಇಸ್ಲಾಮಾಬಾದ್ ಯುಎಸ್ ಕಡೆಗೆ ವಾಲುತ್ತಿದೆ ಎಂದು ಆರೋಪಿಸುತ್ತದೆ. ಇರಾನ್ನ ಮೂಲ ದೂರು ನೇರವಾಗಿದೆ: ತನ್ನ ಪ್ರಸ್ತಾಪಗಳನ್ನು ನಿರ್ಲಕ್ಷಿಸಲಾಗುತ್ತಿದೆ ಎಂದು ಅದು ಹೇಳುತ್ತದೆ. ಜನರಲ್ ಮುನೀರ್ ಇರಾನ್‌ಗೆ ಭೇಟಿ ನೀಡಿದರು, ಅಮೆರಿಕನ್ನರಿಗೆ ತಲುಪಿಸಲು ಔಪಚಾರಿಕ 10–ಅಂಶಗಳ ಮಾತುಕತೆ ಚೌಕಟ್ಟನ್ನು ಸಂಗ್ರಹಿಸಿದರು, ಮತ್ತು ನಂತರ ಏನೂ ಮಾಡಲಿಲ್ಲ ಎಂದು ಟೆಹ್ರಾನ್ ಹೇಳಿಕೊಂಡಿದೆ. ಯಾವುದೇ ಪ್ರತಿಕ್ರಿಯೆ ಇಲ್ಲ, ಯಾವುದೇ ಸ್ವೀಕೃತಿ ಇಲ್ಲ, ಯಾವುದೇ ಬದ್ಧತೆ ಇಲ್ಲ. ವಿಷಯಗಳನ್ನು ಇನ್ನಷ್ಟು ಹದಗೆಡಿಸುವ ಮೂಲಕ, ಪಾಕಿಸ್ತಾನವು ಇರಾನ್ನ 10–ಅಂಶಗಳ ಚೌಕಟ್ಟಿನ ಪ್ರಸ್ತಾಪವನ್ನು ಉದ್ದೇಶಪೂರ್ವಕವಾಗಿ ಕೈಬಿಟ್ಟಿದೆ ಮತ್ತು ಈಗ ವಾಷಿಂಗ್ಟನ್ ಪರವಾಗಿ 15 ರಿಂದ 16 ಹೊಸ ಬೇಡಿಕೆಗಳನ್ನು ಮುಂದಿಡುವ ಮೂಲಕ ಟೆಹ್ರಾನ್ ಮೇಲೆ ಒತ್ತಡ ಹೇರುತ್ತಿದೆ ಎಂದು ಇರಾನಿನ ವಿಶ್ಲೇಷಕರು ಆರೋಪಿಸಿದ್ದಾರೆ. ಅಂದಿನಿಂದ ಪಾಕಿಸ್ತಾನವು ಟೆಹ್ರಾನ್‌ನ ಚೌಕಟ್ಟನ್ನು ಸಂಪೂರ್ಣವಾಗಿ ಸಮಾಧಿ ಮಾಡಿದೆ ಮತ್ತು ಈಗ ವಾಷಿಂಗ್ಟನ್ ಪರವಾಗಿ 15 ರಿಂದ 16 ಹೊಸ ಬೇಡಿಕೆಗಳನ್ನು ಮುಂದಿಡುತ್ತಿದೆ ಎಂದು ಇರಾನಿನ ವಿಶ್ಲೇಷಕರು ಆರೋಪಿಸಿದ್ದಾರೆ, ಇದು ಇಸ್ಲಾಮಾಬಾದ್‌ನ ನಿಷ್ಠೆ ನಿಜವಾಗಿಯೂ ಎಲ್ಲಿದೆ ಎಂಬುದನ್ನು ಬಹಿರಂಗಪಡಿಸುತ್ತದೆ ಎಂದು ಅವರು ಹೇಳುತ್ತಾರೆ.

# ಅಮೆರಿಕದ ವಿರುದ್ಧ ವಿಶ್ವಸಂಸ್ಥೆಗೆ ಪತ್ರ ಬರೆದ ಇರಾನ್: ಸರಕು ನೌಕೆ ಜಪ್ತಿ ಘಟನೆಯಲ್ಲಿ ಮಧ್ಯಪ್ರವೇಶಕ್ಕೆ ಆಗ್ರಹ

**ಟೆಹರಾನ್, ಏ.22:** ಇರಾನ್ ಸರಕು ನೌಕೆಯನ್ನು ವಶಪಡಿಸಿಕೊಂಡ ಅಮೆರಿಕದ ಕ್ರಮವನ್ನು ಖಂಡಿಸುವಂತೆ ಹಾಗೂ ನೌಕೆಯನ್ನು ಬಿಡುಗಡೆ ಗೊಳಿಸಲು ಅಮೆರಿಕಕ್ಕೆ ಸೂಚಿಸಬೇಕೆಂದು ಆಗ್ರಹಿಸಿ ಇರಾನ್ ವಿಶ್ವಸಂಸ್ಥೆಗೆ ಪತ್ರ ಬರೆದಿದೆ. ಅಮೆರಿಕದ ಈ ಕ್ರಮವು ಕಡಲ್ಗಳ್ಳತನದ ಕೃತ್ಯವಾಗಿದ್ದು, ಉಭಯ ದೇಶಗಳ ನಡುವಿನ ಕದನ ವಿರಾಮದ ಉಲ್ಲಂಘನೆಯಾಗಿದೆ ಎಂದು ಟೀಕಿಸಿದೆ. ಒಮಾನ್ ಸಮುದ್ರದ ಬಳಿ ಇರಾನ್ ಧ್ವಜ ಹೊಂದಿದ್ದ 'ಟೌಸ್ಕ' ಎಂಬ ಸರಕು ನೌಕೆಯನ್ನು ಅಮರಿಕದ ನೌಕಾಪಡೆ ವಶಕ್ಕೆ ಪಡೆದಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ ಬಳಿಕ ಇದನ್ನು ಪ್ರತಿಭಟಿಸಿ ಇರಾನ್ ವಿಶ್ವಸಂಸ್ಥೆಗೆ ಪತ್ರ ಬರೆದಿದೆ. ಅಮೆರಿಕದ ಕಾರ್ಯಾಚರಣೆ ಅಪಾಯಕಾರಿ ಉಲ್ಬಣವಾಗಿದ್ದು, ಪ್ರಮುಖ ಸಮುದ್ರ ಮಾರ್ಗಗಳಿಗೆ ಬೆದರಿಕೆ ಉಂಟು ಮಾಡುತ್ತದೆ ಎಂದು ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಮತ್ತು ಪ್ರಧಾನ ಕಾರ್ಯದರ್ಶಿಗೆ ಬರೆದಿರುವ ಪತ್ರದಲ್ಲಿ ವಿಶ್ವಸಂಸ್ಥೆಯಲ್ಲಿನ ಇರಾನ್ ರಾಯಭಾರಿ ಅಮೀರ್ ಸಯೀದ್ ಇರಾವಾನಿ ಕಳವಳ ವ್ಯಕ್ತಪಡಿಸಿದ್ದಾರೆ. ನೌಕೆಯನ್ನು ವಶಪಡಿಸಿಕೊಂಡಿರುವುದು ವಿಶ್ವಸಂಸ್ಥೆಯ ಸನ್ನದಿನ ಸ್ಪಷ್ಟ ಉಲ್ಲಂಘನೆಯಾಗಿದೆ ಹಾಗೂ ಪ್ರಮುಖ ಜಲಮಾರ್ಗಗಳ ಸುರಕ್ಷತೆ ಮತ್ತು ಭದ್ರತೆಯನ್ನು ತೀವ್ರವಾಗಿ ಅಪಾಯಕ್ಕೆ ಸಿಲುಕಿಸುತ್ತದೆ ಎಂದು ಹೇಳಿದ್ದಾರೆ. ಈ ಕ್ರಮವನ್ನು ವಿಶ್ವಸಂಸ್ಥೆ ಔಪಚಾರಿಕವಾಗಿ ಖಂಡಿಸಬೇಕು ಮತ್ತು ನೌಕೆಯನ್ನು ತಕ್ಷಣ ಬಿಡುಗಡೆಗೊಳಿಸುವಂತೆ ಆಗ್ರಹಿಸಬೇಕೆಂದು ಇರಾನ್ ಒತ್ತಾಯಿಸಿದೆ.

# ಭಾರತೀಯ ವಿಮಾನಗಳಿಗೆ ಪಾಕ್ ವಾಯುಪ್ರದೇಶ ನಿಷೇಧ

**ಇಸ್ಲಮಾಬಾದ್, ಏ.22** ಪಾಕಿಸ್ತಾನ ವಿಮಾನ ನಿಲ್ದಾಣ ಪ್ರಾಧಿಕಾರ ಭಾರತೀಯ ವಿಮಾನಗಳಿಗೆ ತನ್ನ ವಾಯುಪ್ರದೇಶ ನಿಷೇಧವನ್ನು ಮೇ 24ರವರೆಗೆ ವಿಸ್ತರಿಸಿದೆ. ಪಾಕಿಸ್ತಾನದ ವಾಯುಪ್ರದೇಶವು ಭಾರತೀಯ ನೋಂದಾಯಿತ ವಿಮಾನ ಗಳು ಅಥವಾ ಭಾರತೀಯ ವಿಮಾನಯಾನ ಸಂಸ್ಥೆಗಳು/ ನಿರ್ವಾಹಕರಿಗೆ (ಮಿಲಿಟರಿ ವಿಮಾನಗಳು ಸೇರಿದಂತೆ) ಮುಚ್ಚಿರುತ್ತದೆ. ಈ ನಿಷೇಧವು ಈಗ 2026ರ ಮೇ 24ರ ಬೆಳಿಗ್ಗೆ 4:59ರವರೆಗೆ ಜಾರಿಯಲ್ಲಿರುತ್ತದೆ. ಈ ನಿರ್ಬಂಧವು ಕರಾಚಿ ಮತ್ತು ಲಾಹೋರ್ ವಿಮಾನ ಮಾಹಿತಿ ವಲಯಗಳನ್ನು ಒಳಗೊಂಡಿರುತ್ತದೆ ಎಂದು ಪಿಎಎ ತಿಳಿಸಿದೆ. ಪಹಲ್ಗಾಮ್ ದಾಳಿಯ ಬಳಿಕ ಭಾರತೀಯ ವಿಮಾನ ಗಳಿಗೆ ಪಾಕಿಸ್ತಾನ ತನ್ನ ವಾಯುಪ್ರದೇಶವನ್ನು ಮುಚ್ಚಿತ್ತು. ಈ ನಿಷೇಧವು ಏಪ್ರಿಲ್ 24ರಂದು ಕೊನೆಗೊಳ್ಳಲಿದ್ದು, ಇದೀಗ ಅದನ್ನು ಮೇ 24ರವರೆಗೆ ವಿಸ್ತರಿಸಲಾಗಿದೆ. ಭಾರತವೂ ಪಾಕಿಸ್ತಾನದ ವಿರುದ್ಧ ಇದೇ ರೀತಿಯ ಕ್ರಮಗಳನ್ನು ಕೈಗೊಂಡಿದೆ.

# ರಾಯಲ್ಸ್ ಮುಂದೆ ಪಂತ್ ಪಡೆ ಪಲ್ಟಿ!






**ಲಖನೌ, ಏ. 22:** ಇಂಡಿಯನ್ ಪ್ರೀಮಿಯರ್ ಲೀಗ್‌ನ 32ನೇ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ ಭರ್ಜರಿ ಗೆಲುವು ದಾಖಲಿಸಿದೆ. ಲಖನೌ ಏಕಾನ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಎಲ್‌ಎಸ್‌ಜಿ ತಂಡದ ನಾಯಕ ರಿಷಭ್ ಪಂತ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ರಾಜಸ್ಥಾನ್ ರಾಯಲ್ಸ್ ತಂಡವು ನಿರೀಕ್ಷಿತ ಆರಂಭ ಪಡೆದಿರಲಿಲ್ಲ.

ಆರಂಭಿಕ ದಾಂಡಿಗ ಯಶಸ್ವಿ ಜೈಸ್ವಾಲ್ (22) ಆರಂಭದಲ್ಲಿ ಅಬ್ಬರಿಸಿದರೂ ಬೇಗನೆ ವಿಕೆಟ್ ಒಪ್ಪಿಸಿದರು. ಇದರ ಬೆನ್ನಲ್ಲೇ ಧ್ರುವ್ ಜುರೆಲ್ (0) ಸಹ ಔಟಾದರು. ಎರಡು ವಿಕೆಟ್ ಪತನ ಬಳಿಕ ವೈಭವ್ ಸೂರ್ಯವಂಶಿ (8) ಕೂಡ ವಿಕೆಟ್ ಕೈಚೆಲ್ಲಿದರು.

ಹೀಗೆ ಪವರ್‌ಪ್ಲೇನಲ್ಲೇ ಮೂರು ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ್ದ ರಾಜಸ್ಥಾನ್ ರಾಯಲ್ಸ್ ತಂಡಕ್ಕೆ ಆಸರೆಯಾಗಿದ್ದು ಅನುಭವಿ ಆಟಗಾರ ರವೀಂದ್ರ ಜಡೇಜಾ. 29 ಎಸೆತಗಳನ್ನು ಎದುರಿಸಿದ ಜಡೇಜಾ ಅಜೇಯ 43 ರನ್ ಬಾರಿಸಿದರು. ಈ ಮೂಲಕ ರಾಜಸ್ಥಾನ್ ರಾಯಲ್ಸ್ ತಂಡದ ಸ್ಕೋರ್ ಅನ್ನು 20 ಓವರ್‌ಗಳಲ್ಲಿ 159 ಕ್ಕೆ ತಂದು ನಿಲ್ಲಿಸಿದರು.

**160 ರನ್‌ಗಳ ಗುರಿ:**

ಈ ಗುರಿ ಬೆನ್ನತ್ತಿದ ಲಖನೌ ಸೂಪರ್ ಜೈಂಟ್ಸ್ ತಂಡ ಕೂಡ ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕ ದಾಂಡಿಗ ಆಯುಷ್ ಬದೋನಿ (0) ಮೊದಲ ಓವರ್‌ನಲ್ಲೇ ರನೌಟ್‌ಗೆ ಬಲಿಯಾದರು. ಈ ವೇಳೆ ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ರಿಷಭ್ ಪಂತ್ (0) ಸೊನ್ನೆ ಸುತ್ತಿ ನಿರ್ಗಮಿಸಿದರು.

ಆ ಬಳಿಕ ಬಂದ ಐಡೆನ್ ಮಾರ್ಕ್ರಾಮ್ (0) ಜೋಫ್ರಾ ಆರ್ಚರ್ ಎಸೆತದಲ್ಲಿ ಕ್ಯಾಚ್ ನೀಡಿ ಔಟಾದರು. ಈ ಹಂತದಲ್ಲಿ ಜೊತೆಗೂಡಿದ ಮಿಚೆಲ್ ಮಾರ್ಷ್ ಹಾಗೂ ನಿಕೋಲಸ್ ಪೂರನ್ ತಂಡವನ್ನು ಆರಂಭಿಕ ಆಘಾತದಿಂದ ಪಾರು ಮಾಡಿದರು. ಇದಾಗ್ಯೂ 22 ರನ್‌ಗಳಿಸಿದ ಬಳಿಕ ಜಡೇಜಾ ಎಸೆತದಲ್ಲಿ ಪೂರನ್ ಕ್ಯಾಚಿತ್ತು ನಿರ್ಗಮಿಸಿದರು.

ಆದರೆ ಮತ್ತೊಂದೆಡೆ ಕ್ರೀಸ್ ಕಚ್ಚಿ ಆಡಿದ ಮಿಚೆಲ್ ಮಾರ್ಷ್ 39 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಇದರ ನಡುವೆ 15 ರನ್ ಬಾರಿಸಿ ಹಿಮ್ಮತ್ ಸಿಂಗ್ ವಿಕೆಟ್ ಒಪ್ಪಿಸಿದ್ದರು.

ಅದರಂತೆ ಕೊನೆಯ 5 ಓವರ್‌ಗಳಲ್ಲಿ ಲಖನೌ ಸೂಪರ್ ಜೈಂಟ್ಸ್ ತಂಡಕ್ಕೆ 61 ರನ್‌ಗಳ ಅವಶ್ಯಕತೆಯಿತ್ತು. ಈ ಹಂತದಲ್ಲಿ ಮಿಚೆಲ್ ಮಾರ್ಷ್ (55) ನಾಂಡ್ರೆ ಬರ್ಗರ್ ಎಸೆತದಲ್ಲಿ ಕ್ಯಾಚಿತ್ತು ಔಟಾದರು.

ಇದರ ಬೆನ್ನಲ್ಲೇ ರಿಯಾನ್ ಪರಾಗ್ ಹಿಡಿದ ಅತ್ಯುತ್ತಮ ಕ್ಯಾಚ್‌ಗೆ ಮುಕುಲ್ ಚೌಧರಿ (7) ಬಲಿಯಾದರು.

ಅಂತಿಮವಾಗಿ ಲಖನೌ ಸೂಪರ್ ಜೈಂಟ್ಸ್ ತಂಡವು 18 ಓವರ್‌ಗಳಲ್ಲಿ 119 ರನ್‌ಗಳಿಸಿ ಸರ್ವ ಪತನ ಕಂಡಿದೆ.. ಈ ಮೂಲಕ ರಾಜಸ್ಥಾನ್ ರಾಯಲ್ಸ್ ತಂಡವು 40 ರನ್‌ಗಳ ಭರ್ಜರಿ ಜಯ ಸಾಧಿಸಿದೆ.

# ಇಸ್ರೇಲ್ ಜೊತೆಗಿನ ಕದನ ವಿರಾಮ ತಿಂಗಳ ಕಾಲ ವಿಸ್ತರಣೆ: ಲೆಬನಾನ್ ಕರೆ

**ವಾಷಿಂಗ್ಟನ್ ಏ.22:** ಕದನ ವಿರಾಮವನ್ನು ವಿಸ್ತರಿಸಲು ಮಾತುಕತೆಗಳು ನಡೆಯುತ್ತಿವೆ ಎಂದು ಲೆಬನಾನ್ ಅಧ್ಯಕ್ಷ ಜೋಸೆಫ್ ಔನ್ ಹೇಳಿದ್ದಾರೆ, ಯಾವುದೇ ಪಕ್ಷವು ಭದ್ರತಾ ಕ್ರಮಗಳನ್ನು ತಡೆಯಲು ಅಥವಾ ಸ್ಥಿರತೆಯನ್ನು ಹಾಳು ಮಾಡಲು ಅನುಮತಿಸುವುದಿಲ್ಲ ಎಂದು ಎಚ್ಚರಿಸಿದ್ದಾರೆ. "ನಮ್ಮ ದೇಶದ ಇತಿಹಾಸದ ಈ ಹಂತದಲ್ಲಿ ನಾಗರಿಕ ಶಾಂತಿಯನ್ನು ಕಾಪಾಡುವುದು ಕೆಂಪು ರೇಖೆಯಾಗಿದೆ" ಎಂದು ಔನ್ ಹೇಳಿದರು, "ಲೆಬನಾನ್‌ನ ಅಸಹಜ ಪರಿಸ್ಥಿತಿಯನ್ನು ಕೊನೆಗೊಳಿಸಲು ಯಾವುದೇ ಪ್ರಯತ್ನವನ್ನು ಬಿಡುವುದಿಲ್ಲ". ಅಮೆರಿಕದಲ್ಲಿರುವ ಲೆಬನಾನ್‌ನ ರಾಯಭಾರಿ ನಾಡಾ ಹಮ್ದದ್ ಮಾವುದ್ ಗುರುವಾರ ವಿದೇಶಾಂಗ ಇಲಾಖೆಯಲ್ಲಿ ನಡೆಯುವ ಸಿದ್ಧತಾ ಸಭೆಯಲ್ಲಿ ಲೆಬನಾನ್ ಅನ್ನು ಪ್ರತಿನಿಧಿಸಲಿದ್ದಾರೆ, ಅಲ್ಲಿ ಅವರು ಕದನ ವಿರಾಮದ ವಿಸ್ತರಣೆಯನ್ನು ಎತ್ತಲಿದ್ದಾರೆ ಮತ್ತು ದಕ್ಷಿಣ ಲೆಬನಾನ್ ಹಳ್ಳಿಗಳು ಮತ್ತು ಪಟ್ಟಣಗಳಲ್ಲಿ ಇಸ್ರೇಲ್ ಧ್ವಂಸ ಕಾರ್ಯಾಚರಣೆಗಳನ್ನು ನಿಲ್ಲಿಸಬೇಕೆಂದು ಒತ್ತಾಯಿಸಲಿದ್ದಾರೆ. ಮಾತುಕತೆಗಳು ನಾಲ್ಕು ಷರತ್ತುಗಳ ಮೇಲೆ ಆಧಾರಿತವಾಗಿವೆ ಎಂದು ಔನ್ ಹೇಳಿದರು: ಇಸ್ರೇಲಿ ಆಕ್ರಮಣವನ್ನು ನಿಲ್ಲಿಸುವುದು, ಇಸ್ರೇಲ್ ವಾಪಸಾತಿಯನ್ನು ಸಾಧಿಸುವುದು, ಕೈದಿಗಳ ಮರಳುವಿಕೆಯನ್ನು ಒಪ್ಪಿಕೊಳ್ಳುವುದು ಮತ್ತು ಲೆಬನಾನ್ ಸೈನ್ಯವನ್ನು ನಿಯೋಜಿಸುವುದು. ಇಸ್ರೇಲ್ ಜೊತೆಗಿನ ಕದನ ವಿರಾಮವನ್ನು ಕನಿಷ್ಠ ಒಂದು ತಿಂಗಳ ಕಾಲ ವಿಸ್ತರಿಸಬೇಕೆಂದು ಲೆಬನಾನ್ ಬಯಸುತ್ತದೆ. ಲೆಬನಾನ್ ಮತ್ತು ಇಸ್ರೇಲ್ ಗುರುವಾರ ವಾಷಿಂಗ್ಟನ್ನಲ್ಲಿ ರಾಯಭಾರಿ ಮಟ್ಟದಲ್ಲಿ ಎರಡನೇ ಸುತ್ತಿನ ಮಾತುಕತೆ ನಡೆಸಲಿವೆ ಎಂದು ಯುಎಸ್ ಸ್ಟೇಟ್ ಡಿಪಾರ್ಟ್ಮೆಂಟ್ ನೊವೊಸ್ಟಿಗೆ ತಿಳಿಸಿದೆ. ಕದನ ವಿರಾಮ ಪ್ರಾರಂಭವಾದ ನಂತರ ಲೆಬನಾನಿನ ಚಳವಳಿ ಹಿಜ್ಬುಲ್ಲಾ ಮಂಗಳವಾರ ತನ್ನ ಹೋರಾಟಗಾರರು ಇಸ್ರೇಲಿ ಸೇನಾ ನೆಲೆಗಳ ಮೇಲೆ ದಾಳಿ ಮಾಡಿ ತಮ್ಮ ಮೊದಲ ಯುದ್ಧ ಕಾರ್ಯಾಚರಣೆಯನ್ನು ನಡೆಸಿದ್ದಾರೆ ಎಂದು ಹೇಳಿದೆ. ಏತನ್ಮಧ್ಯೆ, ಲೆಬನಾನ್‌ನೊಂದಿಗಿನ ದುರ್ಬಲ ಕದನ ವಿರಾಮವನ್ನು ಎರಡೂ ದೇಶಗಳ ನಡುವಿನ ಎರಡನೇ ಸುತ್ತಿನ ನೇರ ಮಾತುಕತೆಗೆ ಒಂದು ದಿನ ಮೊದಲು ಮತ್ತಷ್ಟು ಪರೀಕ್ಷಿಸಲಾಯಿತು,